# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 481 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 08-12-2023 |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಜಾರಿಯಲ್ಲಿರುವ ಕಾರ್ಯಕ್ರಮಗಳು ಯಾವುವು; ಸದರಿ ಕಾರ್ಯಕ್ರಮಗಳ ಅನುಷ್ಠಾನ ನಿಯಮಗಳು ಮತ್ತು ನೀಡುತ್ತಿರುವ ಅನುದಾನ ಸಹಿತ ವಿವರ ನೀಡುವುದು: | ಮಾಹಿತಿಯನ್ನು ಅನುಬಂಧ – 1 ರಲ್ಲಿ ಒದಗಿಸಿದೆ. |
| (ಆ) | ಅಂಗನವಾಡಿ ಹಂತದಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗೆ ನೀಡುತ್ತಿರುವ ಇತರ ಇಲಾಖೆಗಳ ಸಮೀಕ್ಷೆ ಸಹಿತ ಹೆಚ್ಚುವರಿ ಜವಾಬ್ದಾರಿಯು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಹಿಂದುಳಿಯುವಿಕೆಗೆ ಕಾರಣವಾಗಿರುವುದು ಸರಕಾರದ ಗಮನಕ್ಕೆ ಬಂದಿದೆಯೇ; ಈ ಕಾರಣದಿಂದಾಗಿ ಅಂಗನವಾಡಿ ಕಾರ್ಯಕರ್ತೆಯರು ಆಗಾಗ ಮುಷ್ಕರ, ಪ್ರತಿಭಟನೆ ನಡೆಸುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರಕಾರದ ನಿಲುವೇನು; (ವಿವರ ನೀಡುವುದು) | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳ ಪ್ರಮುಖ ಅಂಕಿ ಅಂಶಗಳನ್ನು ಕ್ರೋಢೀಕರಿಸಲು ಹಾಗೂ ಕೆಲಸದ ಪುನರಾವರ್ತನೆಯಾಗುವುದನ್ನು ತಪ್ಪಿಸಲು ಎರಡು ಇಲಾಖೆಗಳ ಕ್ಷೇತ್ರ ಮಟ್ಟದ ಸಿಬ್ಬಂದಿಗಳ ಸಹಕಾರದೊಂದಿಗೆ ಜಂಟಿ ಸಮೀಕ್ಷೆಯನ್ನು ಕೈಗೊಳ್ಳಲು ಸೂಚಿಸಲಾಗಿತ್ತು.<br><br>ಸದರಿ ಜಂಟಿ ಸಮೀಕ್ಷೆಯು ಇಲಾಖೆಯ ಕಾರ್ಯಕ್ರಮಗಳ ಭಾಗವಾಗಿರುತ್ತದೆ. ಈ ಕುರಿತು ಅಂಗನವಾಡಿ ಕಾರ್ಯಕರ್ತೆಯರು ಪ್ರತಿಭಟನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಜಂಟಿ ಸಮೀಕ್ಷೆಯ ಪ್ರಾಮುಖ್ಯತೆಯನ್ನು ಮನವರಿಕೆ ಮಾಡಿ ಸಮೀಕ್ಷೆಯನ್ನು ಈಗಾಗಲೇ ಯಶಸ್ವಿಯಾಗಿ ನಿರ್ವಹಿಸಿ ಮುಕ್ತಾಯಗೊಳಿಸಲಾಗಿರುತ್ತದೆ. |
| (ಇ) | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಒಂದರಿಂದ ಆರು ವರ್ಷದ ಒಳಗಿನ ಕಡಿಮೆ ತೂಕವಿರುವ ಹಾಗೂ ಅಪೌಷ್ಠಿಕ ಮಕ್ಕಳಿಗೆ ಪೂರಕ ಆಹಾರವನ್ನು ಅಂಗನವಾಡಿ ಮೂಲಕ ನೀಡಲಾಗುತ್ತಿದ್ದು ಸದರಿ ವಯಸ್ಸಿನ ಖಾಸಗಿ/ಸರಕಾರಿ, ಎಲ್.ಕೆ.ಜಿ./ಯು.ಕೆ.ಜಿ. ಶಿಕ್ಷಣ ಸಂಸ್ಥೆಗಳಲ್ಲಿ, ಖಾಸಗಿ ಬಾಲಮಂದಿರಗಳಲ್ಲಿ, ಶಿಶು ಪಾಲನಾ ಕೇಂದ್ರದಲ್ಲಿ ಇರುವ ಮಕ್ಕಳಿಗೆ ಪೋಷಕ ಆಹಾರವನ್ನು ನೀಡುವ ಹಾಗೂ ಮಕ್ಕಳ ಆರೋಗ್ಯವನ್ನು ತಪಾಸಿಸುವ ಅಥವಾ ಪೌಷ್ಠಿಕಾಂಶವನ್ನು ಹೆಚ್ಚಿಸುವ ಯಾವುದೇ ರೀತಿಯ ಕಾರ್ಯಕ್ರಮಗಳು ಇವೆಯೇ; ಇದ್ದಲ್ಲಿ, ವಿವರ ನೀಡುವುದು; | ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಒಂದರಿಂದ ಆರು ವರ್ಷದ ಒಳಗಿನ ಕಡಿಮೆ ತೂಕವಿರುವ ಹಾಗೂ ಅಪೌಷ್ಠಿಕ ಮಕ್ಕಳಿಗೆ ಪೂರಕ ಪೌಷ್ಠಿಕ ಆಹಾರವನ್ನು ಅಂಗನವಾಡಿ ಕೇಂದ್ರದಲ್ಲಿ ದಾಖಲಾಗಿರುವ ಮಕ್ಕಳಿಗೆ ನೀಡಲಾಗುತ್ತಿದೆ.<br><br>ಅಂಗನವಾಡಿ ಕೇಂದ್ರಕ್ಕೆ ದಾಖಲಾಗದೇ ಇರುವ ಮಕ್ಕಳಿಗೆ ಪೂರಕ ಪೌಷ್ಠಿಕ ಆಹಾರವನ್ನು ಒದಗಿಸಲು ಯಾವುದೇ ಕಾರ್ಯಕ್ರಮ ಇರುವುದಿಲ್ಲ.<br><br>ಪೂರ್ವ ಪ್ರಾಥಮಿಕ ತರಗತಿಗಳನ್ನು (ಎಲ್.ಕೆ.ಜಿ ಮತ್ತು ಯು.ಕೆ.ಜಿ) ಹೊಂದಿರುವ ಸರ್ಕಾರದ ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಬೆಳಗಿನ ಉಪಹಾರ, |

| | | |
|---|---|---|
| | | ಮಧ್ಯಾಹ್ನದ ಬಿಸಿಯೂಟ ಕ್ಷೀರಭಾಗ್ಯ ಯೋಜನೆಯಡಿ ಬಿಸಿಹಾಲು ಮತ್ತು ವಾರದಲ್ಲಿ ಎರಡು ದಿನ ಮೊಟ್ಟೆಯನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಿಂದ ವಿತರಿಸಲಾಗುತ್ತಿದೆ.<br><br>ಇಲಾಖೆಯಡಿಯಲ್ಲಿ, ದುಡಿಯುವ ಮಹಿಳೆಯರ ವರ್ಷದೊಳಗಿನ ಮಕ್ಕಳ ಪಾಲನೆ-ಪೋಷಣೆ ಮಾಡುವ ಹಿನ್ನಲೆಯಲ್ಲಿ, ರಾಜ್ಯದಲ್ಲಿ ಆಯ್ದ 07 ತಾಲ್ಲೂಕುಗಳಲ್ಲಿ, ನರೇಗಾ ಯೋಜನೆಯ ಸಹಯೋಗದೊಂದಿಗೆ ನಡೆಸುತ್ತಿರುವ ಶಿಶುಪಾಲನಾ ಕೇಂದ್ರಗಳಿಗೆ ಹಾಜರಾಗುವ ಮಕ್ಕಳಿಗೆ ಸ್ಥಳೀಯ ಗ್ರಾಮ ಪಂಚಾಯತಿಯ ಮೆನು ಪ್ರಕಾರ 3 ಬಾರಿ ಪೂರಕ ಪೌಷ್ಠಿಕ ಆಹಾರವನ್ನು ಕೇಂದ್ರದಲ್ಲಿಯೇ ತಯಾರಿಸಿ ಕೊಡಲಾಗುತ್ತಿದೆ.<br><br>ಶಿಶುಪಾಲನಾ ಕೇಂದ್ರಗಳಿಗೆ ಹಾಜರಾಗುವ ಮಕ್ಕಳನ್ನು ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಿಂದ ಪ್ರತೀ ತಿಂಗಳು ಎರಡು ಬಾರಿ ಅರೋಗ್ಯ ತಪಾಸಣೆ ಮಾಡಿಸಲು ಹಾಗೂ ಚುಚ್ಚುಮದ್ದು ಆಗದೇ ಇರುವ ಮಕ್ಕಳಿಗೆ ಚುಚ್ಚುಮದ್ದು ಕೊಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| **(ಈ)** | ಅಂಗನವಾಡಿ ವ್ಯಾಪ್ತಿಯ ಸಮೀಕ್ಷೆಯಲ್ಲಿರುವ ಆದರೆ ಅಂಗನವಾಡಿಗೆ ಬಾರದಿರುವ 3-6 ವರ್ಷದ ಮಕ್ಕಳು ಸರಕಾರದ ಪೌಷ್ಠಿಕಾಂಶ ಯೋಜನೆಯ ಕಾರ್ಯಕ್ರಮದಿಂದ ಹೊರಗುಳಿಯುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ ಇಂತಹ ಮಕ್ಕಳ ಸಂಖ್ಯೆ ಎಷ್ಟು; ಇಂತಹ ಮಕ್ಕಳನ್ನು ಪೌಷ್ಠಿಕಾಂಶ ಕಾರ್ಯಕ್ರಮದ ವ್ಯಾಪ್ತಿಯೊಳಗೆ ತರಲು ಸರಕಾರ ಚಿಂತಿಸಿದೆಯೇ; ತಾಲ್ಲೂಕುವಾರು ಅಂಕಿ ಅಂಶಗಳನ್ನು ಮತ್ತು ಸರಕಾರದ ನಿಯಮಗಳು ಸುತ್ತೋಲೆಗಳ ಸಹಿತ ವಿವರಗಳನ್ನು ನೀಡುವುದು? | ಅಂಗನವಾಡಿ ವ್ಯಾಪ್ತಿಯ ಸಮೀಕ್ಷೆಯಲ್ಲಿರುವ ಆದರೆ ಅಂಗನವಾಡಿಗೆ ಬಾರದಿರುವ 3-6 ವರ್ಷದ ಮಕ್ಕಳು ಸರ್ಕಾರದ ಪೌಷ್ಠಿಕಾಂಶ ಯೋಜನೆಯ ಕಾರ್ಯಕ್ರಮದಿಂದ ಸ್ವ-ಇಚ್ಛೆಯಿಂದ ಹೊರಗುಳಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.<br>ಅಂಗನವಾಡಿ ಕೇಂದ್ರದ ಸಮೀಕ್ಷೆಗೊಳಪಟ್ಟು ಕೇಂದ್ರಕ್ಕೆ ಹಾಜರಾಗದೇ ಇರುವ 459582 ಮಕ್ಕಳ ತಾಲ್ಲೂಕುವಾರು ಮಾಹಿತಿಯನ್ನು **ಅನುಬಂಧ-2ರಲ್ಲಿ** ಒದಗಿಸಿದೆ.<br>ಅಂಗನವಾಡಿ ಕೇಂದ್ರಕ್ಕೆ ಹಾಜರಾಗದೇ ಇರುವ ಮಕ್ಕಳು ಸ್ಥಳೀಯ ಸರ್ಕಾರಿ/ ಅರೆ ಸರ್ಕಾರಿ / ಖಾಸಗಿ ನರ್ಸರಿ/ಖಾಸಗಿ ಶಿಶುಪಾಲನಾ ಕೇಂದ್ರ / ಶಿಶುಮಂದಿರ ಗಳಲ್ಲಿ ದಾಖಲಾಗಿದ್ದು, ಸೌಲಭ್ಯವನ್ನು ಪಡೆಯುತ್ತಿದ್ದಾರೆ. ಅಂಗನವಾಡಿ ಕೇಂದ್ರಕ್ಕೆ ಹಾಜರಾದ ಪಕ್ಷದಲ್ಲಿ ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮಕ್ಕೆ ಒಳಪಡಿಸಬಹುದಾಗಿದೆ. |

ಸಂಖ್ಯೆ: ಮಮಇ 89 ಸ್ಪೀಮರ 2023

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ**
**ವಿಕಲಚೇತನರ ಮತ್ತು ಹಿರಿಯ ನಾಗರಿಕರ**
**ಸಬಲೀಕರಣ ಸಚಿವರು**

# ಅನುಬಂಧ-1

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಜಾರಿಯಲ್ಲಿರುವ ಕಾರ್ಯಕ್ರಮಗಳು/ಯೋಜನೆಗಳ ವಿವರ

**1. ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮ :**

- ಇಲಾಖೆಯ ಮಹತ್ವಾಕಾಂಕ್ಷೆ ಕಾರ್ಯಕ್ರಮವಾದ ಪೂರಕ ಪೌಷ್ಟಿಕ ಆಹಾರ ಕಾರ್ಯಕ್ರಮಕ್ಕಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಶೇ.50-50ರ ಅನುಪಾತದಲ್ಲಿ ವೆಚ್ಚ ಭರಿಸುತ್ತವೆ.
- ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ 6ತಿಂಗಳಿಂದ 6 ವರ್ಷದ ಮಕ್ಕಳು, ಗರ್ಭಿಣಿ ಬಾಣಂತಿಯರು, ಕಿಶೋರಿಯರು ಈ ಯೋಜನೆಯ ಫಲಾನುಭವಿಗಳಾಗಿರುತ್ತಾರೆ. 2023-24ನೇ ಸಾಲಿನ ಆಯವ್ಯಯದಲ್ಲಿ ರೂ. 252496.10 ಲಕ್ಷ ಅನುದಾನ ನಿಗದಿಪಡಿಸಲಾಗಿದೆ.
- ಫಲಾನುಭವಿಗಳು ಪ್ರತಿ ದಿನ ಮನೆಯಲ್ಲಿ ಸೇವಿಸುವ ಆಹಾರಕ್ಕೆ ಪೂರಕವಾಗಿ ಪರಿಷ್ಕೃತ ಯೋಜನೆಯ ಮಾರ್ಗಸೂಚಿಯಂತೆ ವರ್ಷದಲ್ಲಿ 300 ದಿನಗಳಿಗೆ ಪೂರಕ ಪೌಷ್ಠಿಕ ಆಹಾರ ನೀಡಲಾಗುತ್ತಿದೆ. ಕೇಂದ್ರ ಸರ್ಕಾರದ ದಿನಾಂಕ: 23-11-2017 ರ ಮಾರ್ಗಸೂಚಿಯಲ್ಲಿ ಈ ಕೆಳಕಂಡಂತೆ ಘಟಕ ವೆಚ್ಚವನ್ನು ಪರಿಷ್ಕರಿಸಿದ್ದು, ಪರಿಷ್ಕೃತ ಘಟಕ ವೆಚ್ಚದಂತೆ ಆಹಾರವನ್ನು ನೀಡಲಾಗುತ್ತಿದೆ:-

| ಕ್ರ. ಸಂ. | ವಿವರ | ಘಟಕ ವೆಚ್ಚ (ಪ್ರತಿ ದಿನಕ್ಕೆ) (ರೂ.ಗಳಲ್ಲಿ) | ಕ್ಯಾಲೋರಿಗಳು | ಪ್ರೋಟಿನ್ |
|---|---|---|---|---|
| 1 | ಸಾಮಾನ್ಯ ಮಕ್ಕಳಿಗೆ | 8.00/- | 500 ಕ್ಯಾಲೋರಿಗಳು | 12-15 ಗ್ರಾಂ |
| 2 | ಗರ್ಭಿಣಿ / ಬಾಣಂತಿ/ ಪ್ರಾಯಪೂರ್ವ ಬಾಲಕಿಯರಿಗೆ | 9.50/- | 600 ಕ್ಯಾಲೋರಿಗಳು | 18-20 ಗ್ರಾಂ |
| 3 | ತೀವ್ರ ಅಪೌಷ್ಠಿಕತೆಯುಳ್ಳ ಮಕ್ಕಳಿಗೆ | 12.00/- | 800 ಕ್ಯಾಲೋರಿಗಳು | 20-25 ಗ್ರಾಂ |

2023-24ನೇ ಸಾಲಿನ ಆಯವ್ಯಯದಲ್ಲಿ ರೂ. 193998.00 ಲಕ್ಷ ಅನುದಾನ ನಿಗದಿಪಡಿಸಲಾಗಿದೆ.

**ರಾಜ್ಯ ಸರ್ಕಾರದ ಹೆಚ್ಚುವರಿ ಕಾರ್ಯಕ್ರಮಗಳು** :- ಪೂರಕ ಪೌಷ್ಟಿಕ ಆಹಾರ ಕಾರ್ಯಕ್ರಮದಡಿ ನೋಂದಣಿಯಾದ ಫಲಾನುಭವಿಗಳೇ ಕ್ಷೀರಭಾಗ್ಯ, ಸೃಷ್ಟಿ, ಮಾತೃಪೂರ್ಣ ಯೋಜನೆಗಳಿಗೂ ಒಳಪಡುತ್ತಾರೆ. 2023-24ನೇ ಸಾಲಿನ ಆಯವ್ಯಯದಲ್ಲಿ ರೂ. 89300.01 ಲಕ್ಷ ಅನುದಾನ ನಿಗದಿಪಡಿಸಲಾಗಿದೆ.

- **ಕ್ಷೀರಭಾಗ್ಯ ಯೋಜನೆ** : ಕ್ಷೀರಭಾಗ್ಯ ಯೋಜನೆಯಡಿ ಅಂಗನವಾಡಿ ಕೇಂದ್ರಗಳಿಗೆ ದಾಖಲಾಗುವ 6 ತಿಂಗಳಿಂದ 6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲಿ ಹಾಲು ನೀಡಲಾಗುತ್ತಿದೆ. (15ಗ್ರಾಂ ಹಾಲಿನಪುಡಿ , 10 ಗ್ರಾಂ ಸಕ್ಕರೆ)
- **"ಸೃಷ್ಟಿ" ಯೋಜನೆ :**
  - ✓ 3 ರಿಂದ 6 ವರ್ಷದ ಎಲ್ಲಾ ಸಾಮಾನ್ಯ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆ ನೀಡಲಾಗುತ್ತಿದೆ.
  - ✓ 3-6 ವರ್ಷದ ತೀವ್ರ / ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ನೀಡಲಾಗುತ್ತಿದೆ. ಮೊಟ್ಟೆ ತಿನ್ನದ ಮಕ್ಕಳಿಗೆ ವಾರದ 6 ದಿನ ಹಾಲು ನೀಡಲಾಗುತ್ತಿದೆ.
  - ✓ 06 ತಿಂಗಳಿಂದ 3 ವರ್ಷದ ತೀವ್ರ / ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ನೀಡಲಾಗುತ್ತಿದೆ.

- **ಮಾತೃಪೂರ್ಣ ಯೋಜನೆ:**
  - ✓ ಗರ್ಭಿಣಿ ಮತ್ತು ಬಾಣಂತಿಯರಿಗೆ ಪೌಷ್ಠಿಕಾಂಶಯುಕ್ತ ಮಧ್ಯಾಹ್ನದ ಬಿಸಿಯೂಟವನ್ನು ಅಂಗನವಾಡಿ ಕೇಂದ್ರದಲ್ಲಿಯೇ ನೀಡುವ "ಮಾತೃಪೂರ್ಣ" ಯೋಜನೆಯನ್ನು 2017 ಅಕ್ಟೋಬರ್ 2ನೇ ತಾರೀಖಿನಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗುತ್ತಿದೆ.
  - ✓ ಈ ಪೂರ್ಣ ಊಟದಲ್ಲಿ ಅನ್ನ, ಸಾಂಬಾರ್, ಪಲ್ಯದ ಜೊತೆಗೆ ಬೇಯಿಸಿದ ಮೊಟ್ಟೆ,200 ಮಿ.ಲೀ ಹಾಲು ಮತ್ತು ಚಿಕ್ಕಿಯನ್ನು ತಿಂಗಳಿಗೆ ಕನಿಷ್ಠ 25 ದಿನಗಳು ನೀಡಲಾಗುತ್ತಿದೆ.
  - ✓ ಪ್ರತಿ ಫಲಾನುಭವಿಗೆ ಪ್ರತಿ ದಿನಕ್ಕೆ ರೂ.21/-ರ (ಪೂರಕ ಪೌಷ್ಟಿಕ ಆಹಾರ ಕಾರ್ಯಕ್ರಮದ ಘಟಕ ವೆಚ್ಚ ರೂ.9.50/- ಸೇರಿದಂತೆ) ಘಟಕ ವೆಚ್ಚವನ್ನು ನಿಗದಿಪಡಿಸಲಾಗಿದೆ. ಕಬ್ಬಿಣಾಂಶ ಹಾಗೂ ಕ್ಯಾಲ್ಸಿಯಂ ಮಾತ್ರೆ ಸೇವನೆಗೆ ಬೆಂಬಲ ಹಾಗೂ ಪ್ರತಿ ತಿಂಗಳು ಗರ್ಭಿಣಿಯರ ತೂಕವನ್ನು ಪರಿಶೀಲಿಸಲಾಗುತ್ತಿದೆ.

2. **ಪ್ರಾಯಪೂರ್ವ ಬಾಲಕಿಯರ ಯೋಜನೆ :** ಈ ಯೋಜನೆಯಡಿ ಪೂರಕ ಪೌಷ್ಠಿಕ ಆಹಾರ (SNP) ಸೇವೆಯನ್ನು

ಕಿಶೋರಿಯರಿಗೆ ನೀಡಲಾಗುತ್ತಿದೆ. ಪೂರಕ ಪೌಷ್ಠಿಕ ಆಹಾರ (SNP) ವನ್ನು 14-18 ವರ್ಷದ ಶಾಲೆಯಿಂದ ಹೊರ ಉಳಿದ ಕಿಶೋರಿಯರಿಗೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಅಂಗನವಾಡಿ ಕೇಂದ್ರಗಳಲ್ಲಿ ಒದಗಿಸಲು ಕೇಂದ್ರ ಸರ್ಕಾರದ ನಿರ್ದೇಶನವಿರುತ್ತದೆ. ಕೇಂದ್ರ ಸರ್ಕಾರದ ಸೂಚನೆಯಂತೆ ಮಹಾತ್ವಾಕಾಂಕ್ಷೆ ಜಿಲ್ಲೆಗಳಾದ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಯೋಜನೆಯನ್ನು 2021-22ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ.

3. **ಇಡಿಗಂಟು ಯೋಜನೆ :** ಸರ್ಕಾರದ ಆದೇಶ ದಿನಾಂಕ : 18.03.2011ರಲ್ಲಿ ದಿನಾಂಕ:01.04.1955ರ ಮೊದಲು ಜನಿಸಿದ ಅಂಗನವಾಡಿ ಕಾರ್ಯಕರ್ತೆಯರು/ಸಹಾಯಕಿಯರು ಯೋಜನೆಗೆ ಅರ್ಹರಾಗಿರುತ್ತಾರೆ ಮತ್ತು 60 ವರ್ಷ ತುಂಬುವ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರಿಗೆ ಸಾಮಾಜಿಕ ಭದ್ರತೆ ನೀಡುವ ದೃಷ್ಠಿಯಿಂದ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿತ್ತು. ದಿನಾಂಕ:- 31-03-2015 ರಿಂದ ಸ್ಥಗಿತಗೊಂಡಿರುತ್ತದೆ. ಮುಂದುವರೆದು, 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ 145ರಲ್ಲಿ ಘೋಷಿಸಿದಂತೆ ದಿನಾಂಕ : 31.03.2015ರಿಂದ ಸ್ಥಗಿತಗೊಂಡಿದ್ದ ಎನ್.ಪಿ.ಎಸ್. ಲೈಟ್ ಯೋಜನೆಯಿಂದ ವಂಚಿತರಾದ ಅಂಗನವಾಡಿ ಕಾರ್ಯಕರ್ತೆ ಯರಿಗೆ ರೂ.50,000/- ಮತ್ತು ಅಂಗನವಾಡಿ ಸಹಾಯಕಿಯರಿಗೆ ರೂ.30,000/-ಗಳನ್ನು ನೀಡಲು ಸರ್ಕಾರದ ಆದೇಶ ದಿನಾಂಕ : 08.04.2022ರಲ್ಲಿ ಆದೇಶಿಸಲಾಗಿದೆ.

4. **ಮರಣ ಪರಿಹಾರ/ವೈದ್ಯಕೀಯ ವೆಚ್ಚ ಯೋಜನೆ :** ಸರ್ಕಾರದ ಆದೇಶ ದಿನಾಂಕ : 01.09.2014ರನ್ವಯ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಸೇವೆಯಲ್ಲಿದ್ದಾಗಲೇ ಮರಣ ಹೊಂದಿದರೆ ಅಂಗನವಾಡಿ ಕಾರ್ಯಕರ್ತೆಯರ / ಸಹಾಯಕಿಯರ ಮರಣ ಪರಿಹಾರ ಯೋಜನೆಯಡಿ ಅಂಗನವಾಡಿ ಕಾರ್ಯಕರ್ತೆಗೆ ಮತ್ತು ಸಹಾಯಕಿಯರಿಗ ತಲಾ ರೂ. 50,000/-ಗಳನ್ನು ಅರ್ಹತೆಯ ಮಾನದಂಡಗಳಂತೆ ಸೌಲಭ್ಯವನ್ನು ಒದಗಿಸಲು ಆದೇಶಿಸಲಾಗಿದೆ. ಸರ್ಕಾರದ ಆದೇಶ ದಿನಾಂಕ:14-03-2017ರನ್ವಯ ವೈದ್ಯಕೀಯವೆಚ್ಚ ಯೋಜನೆಯಡಿ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರು ಗುರುತರವಾದ ಕಾಯಿಲೆಗಳಾದ ಹೃದ್ರೋಗ ಶಸ್ತ್ರ ಚಿಕಿತ್ಸೆ, ಕ್ಯಾನ್ಸರ್ ಕಾಯಿಲೆ, ಡಯಾಲಿಸಿಸ್ ಮತ್ತು ಮೂತ್ರ ಪಿಂಡ ಜೋಡಣೆ ಕಾಯಿಲೆಗಳಿಗೆ, ಗರ್ಭಕೋಶ ಶಸ್ತ್ರ ಚಿಕಿತ್ಸೆಗೆ ರೂ.20,000/-ರಿಂದ ರೂ.50000/-ಗಳಿಗೆ ಹೆಚ್ಚಿಸಲಾಗಿದೆ.

5. **ಎನ್.ಪಿ.ಎಸ್.ಲೈಟ್ - ವಂತಿಗೆ ಆಧಾರಿತ ಪಿಂಚಣಿ ಯೋಜನೆ** : ಸರ್ಕಾರದ ಆದೇಶ ದಿನಾಂಕ : 18.03.2011ರಲ್ಲಿ ದಿನಾಂಕ: 01-04-1955ರ ಹಾಗೂ ನಂತರದಲ್ಲಿ ಜನಿಸಿದ ಎಲ್ಲಾ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರನ್ನು ಎನ್.ಪಿ.ಎಸ್.ಲೈಟ್ ಯೋಜನೆಗೊಳಪಡಿಸಿ ಮಾರ್ಗಸೂಚಿಯನ್ವಯ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ. ಸದರಿ ಯೋಜನೆಯು 31-03-2015 ರಂದು ಸ್ಥಗಿತಗೊಂಡಿದ್ದು ಯಾವುದೇ ಹೊಸ ನೊಂದಣಿ ಆಗಿರುವುದಿಲ್ಲ. ಹಳೇ ನೊಂದಣಿಯಾಗಿರುವ ಅಂಗನವಾಡಿ ಕಾರ್ಯಕರ್ತೆಯರಿಗೆ ಮತ್ತು ಅಂಗನವಾಡಿ ಸಹಾಯಕಿಯರಿಗೆ ಮಾತ್ರ ಸೌಲಭ್ಯ ಒದಗಿಸಲಾಗುತ್ತಿದೆ. 2023-24ನೇ ಸಾಲಿನ ಆಯವ್ಯಯದಲ್ಲಿ ರೂ. 1200.00 ಲಕ್ಷ ಅನುದಾನ ನಿಗದಿಪಡಿಸಲಾಗಿದೆ.

6. **ಅಂಗನವಾಡಿ ಕಟ್ಟಡಗಳ ನಿರ್ಮಾಣ** : ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿಯಲ್ಲಿ, ಅಂಗನವಾಡಿ ಕೇಂದ್ರಗಳಿಗೆ ಬರುವ ಫಲಾನುಭವಿಗಳಿಗೆ ಯೋಜನೆಯ ಒಳಾಂಗಣ ಹಾಗೂ ಹೊರಾಂಗಣ ಚಟುವಟಿಕೆಗಳನ್ನು ಸಮರ್ಪಕವಾಗಿ ನಡೆಸಲು, ಅಂಗನವಾಡಿ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳನ್ನೊಳಗೊಂಡ ಸ್ವಂತ ಕಟ್ಟಡವಿರುವುದು ಅವಶ್ಯವಾಗಿರುತ್ತದೆ. ಪ್ರಸ್ತುತ, ಅಂಗನವಾಡಿ ಕಟ್ಟಡಗಳನ್ನು ಅನುದಾನ ಹಾಗೂ ನಿವೇಶನ ಲಭ್ಯತೆಗನುಗುಣವಾಗಿ ಮಹತ್ವಕಾಂಕ್ಷೆ ತಾಲ್ಲೂಕು ಯೋಜನೆ/ವಿಶೇಷ ಅಭಿವೃದ್ಧಿ ಯೋಜನೆ, ನರೇಗಾ ಒಗ್ಗೂಡಿಸುವಿಕೆ, ಇಲಾಖಾ ವಂತಿಗೆ ಹಾಗೂ ಇನ್ನಿತರೆ ಯೋಜನೆಗಳಡಿಯಲ್ಲಿ ನಿರ್ಮಾಣ ಮಾಡಲಾಗುತ್ತಿದೆ. 2023-24ನೇ ಸಾಲಿನ ಆಯವ್ಯಯದಲ್ಲಿ ಒಟ್ಟು ರೂ.17134.00 ಲಕ್ಷ (ಉನ್ನತೀಕರಣ,ವಿಶೇಷ ಅಭಿವೃದ್ಧಿ ಯೋಜನೆ, ನರೇಗ, ನಿರ್ವಹಣೆ ಮತ್ತು ದುರಸ್ಥಿ) ಒಳಗೊಂಡಂತೆ ಅನುದಾನ ನಿಗದಿಪಡಿಸಲಾಗಿದೆ.

7. **ರಾಷ್ಟ್ರೀಯ ಪೌಷ್ಠಿಕತೆ ಅಭಿಯಾನ - ಪೋಷಣ್ ಅಭಿಯಾನ :** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಎಲ್ಲಾ ಪೌಷ್ಠಿಕತೆಯ ಯೋಜನೆಗಳನ್ನು ಒಗ್ಗೂಡಿಸುವ ಯೋಜನೆಯಾಗಿದೆ. ಮುಖ್ಯವಾಗಿ 0-6 ವರ್ಷದ ಮಕ್ಕಳು, ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರ ಪೌಷ್ಠಿಕತೆಯ ಸ್ಥಿತಿಯನ್ನು ನಿರ್ಧಿಷ್ಟ ಅವಧಿಗೆ ಸುಧಾರಿಸುವುದು ಈ ಯೋಜನೆಯ ಮುಖ್ಯ ಗುರಿಯಾಗಿದೆ. 8ನೇ ಮಾರ್ಚ್ 2018ಕ್ಕೆ ಪ್ರಾರಂಭವಾಗಿರುವ ಈ ಯೋಜನೆಯನ್ನು ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ. ಈ ಯೋಜನೆಯಡಿ ವಿವಿಧ ಇಲಾಖೆಗಳ ನಡುವೆ ಸಮನ್ವಯತೆ ತರುವ ಮೂಲಕ ಪೌಷ್ಠಿಕತೆ ವಿಷಯದಲ್ಲಿ ಸಮಗ್ರವಾದ ಬದಲಾವಣೆಯ ದೂರದೃಷ್ಟಿಯನ್ನು ಹೊಂದಲಾಗಿದೆ. 2023-24ನೇ ಸಾಲಿನ ಆಯವ್ಯಯದಲ್ಲಿ ರೂ. 3087.00 ಲಕ್ಷ ಅನುದಾನ ನಿಗದಿಪಡಿಸಲಾಗಿದೆ.

8. **ಸಾಂತ್ವನ ಯೋಜನೆ:**-ಸಮಾಜದಲ್ಲಿ ವರದಕ್ಷಿಣೆ ಕಿರುಕುಳ, ಕೌಟುಂಬಿಕ ದೌರ್ಜನ್ಯ, ಅತ್ಯಾಚಾರ ಹಾಗೂ ಲೈಂಗಿಕ ಕಿರುಕುಳಕ್ಕೊಳಗಾದ ಮಹಿಳೆಯರಿಗೆ ಸಹಾಯ ಒದಗಿಸುವ ಉದ್ದೇಶದಿಂದ ಸಾಂತ್ವನ ಯೋಜನೆಯನ್ನು 2000-01ನೇ ಸಾಲಿನಲ್ಲಿ ಜಾರಿಗೆ ಬಂದಿರುತ್ತದೆ. ಇಂತಹ ದೌರ್ಜನ್ಯಕ್ಕೊಳಗಾದ ಮಹಿಳೆಯರಿಗೆ ಆಪ್ತ ಸಮಾಲೋಚನೆ, ಕಾನೂನು ಮತ್ತು ಪೋಲೀಸ್ ನೆರವು, ಒದಗಿಸಲಾಗುತ್ತಿದೆ. ಪ್ರಸ್ತುತ ರಾಜ್ಯದಲ್ಲಿ ಒಟ್ಟು 180 ಸಾಂತ್ವನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದೆ. 2023-24ನೇ ಸಾಲಿನ ಆಯವ್ಯಯದಲ್ಲಿ ರೂ. 1050.00 ಲಕ್ಷ

ಅನುದಾನ ನಿಗದಿಪಡಿಸಲಾಗಿದೆ.

9. **ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ನಿಯಮ 2006:-** ಕುಟುಂಬದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯ ಉಂಟಾದಾಗ, ನ್ಯಾಯಾಲಯದ ಮುಖಾಂತರ ಮಹಿಳೆಯರಿಗೆ ಆರ್ಥಿಕ ಪರಿಹಾರ, ರಕ್ಷಣಾ ಆದೇಶ, ವಾಸದ ಆದೇಶ, ಮಕ್ಕಳ ವಶ, ತಾತ್ಕಾಲಿಕ ಆಶ್ರಯ, ವೈದ್ಯಕೀಯ ಹಾಗೂ ಕಾನೂನು ನೆರವನ್ನು ಒದಗಿಸುತ್ತಿದೆ. 2023-24ನೇ ಸಾಲಿನ ಆಯವ್ಯಯದಲ್ಲಿ ರೂ.1298.25 ಲಕ್ಷ ಅನುದಾನವನ್ನು ಸಿಬ್ಬಂದಿಗಳ ಗೌರವಧನ ಮತ್ತು ಸಂರಕ್ಷಣಾಧಿಕಾರಿಗಳ ವೇತನ ಹಾಗೂ ಇತರೆ ವೆಚ್ಚಗಳಿಗಾಗಿ ನಿಗದಿಪಡಿಸಲಾಗಿದೆ.

10. **ಉದ್ಯೋಗಸ್ಥ ಮಹಿಳೆಯರಿಗೆ ವಸತಿ ನಿಲಯಗಳು:-**2022-23ನೇ ಸಾಲಿನಲ್ಲಿ ಬೆಂಗಳೂರುನಗರ, ಮೈಸೂರು, ಹುಬ್ಬಳ್ಳಿ-ಧಾರವಾಡ, ಬೆಳಗಾವಿ, ದಕ್ಷಿಣ ಕನ್ನಡ ಹಾಗೂ ಕಲಬುರಗಿ ಜಿಲ್ಲೆಗಳಲ್ಲಿ 24 ಉದ್ಯೋಗಸ್ಥ ಮಹಿಳೆಯರಿಗೆ ವಸತಿ ನಿಲಯಗಳನ್ನು ಬಾಡಿಗೆ ಕಟ್ಟಡಗಳಲ್ಲಿ ಹೊಸದಾಗಿ ಪ್ರಾರಂಭಿಸಲಾಗುತ್ತಿದೆ.ಗಾರ್ಮೆಂಟ್ಸ್, ಕೈಗಾರಿಕೆಗಳು ಮತ್ತು ಇತರ ಅಸಂಘಟಿತ ವಲಯಗಳಲ್ಲಿ ಕೆಲಸ ಮಾಡುವ ಮಹಿಳೆಯರಿಗೆ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಅಲ್ಪಸಂಖ್ಯಾತರ ದುಡಿಯುವ ಮಹಿಳೆಯರಿಗೆ ಆದ್ಯತೆ ಮೇರೆಗೆ ಸೌಲಭ್ಯ ನೀಡಲಾಗುವುದು. 2023-24ನೇ ಸಾಲಿನ ಆಯವ್ಯಯದಲ್ಲಿ ರೂ.1000.00ಲಕ್ಷ ಅನುದಾನ ನಿಗದಿಪಡಿಸಲಾಗಿದೆ.

11. **ಮಹಿಳಾ ಸಹಾಯವಾಣಿ-181**: ಮಹಿಳೆಯರಿಗೆ ಮಾಹಿತಿಯನ್ನು ನೀಡಲು ಹಾಗೂ ದೌರ್ಜನ್ಯ ಮತ್ತು ಸಂಕಷ್ಟದಲ್ಲಿರುವ ಮಹಿಳೆಯರಿಗೆ ತುರ್ತು ನೆರವನ್ನು ಒದಗಿಸುವ ನಿಟ್ಟಿನಲ್ಲಿ ಯೂನಿವರ್ಸ್‌ಲ್ ಲೈಸೇಷನ್ ಆಫ್ ವುಮೆನ್ ಹೆಲ್ಪ್ ಲೈನ್ -181 ಎಂಬ ಉಚಿತ ದೂರವಾಣಿ ಸೇವೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಸೇವೆಯನ್ನು ದಿನದ 24*7 ಗಂಟೆಗಳು ಒದಗಿಸಲಾಗುತ್ತಿದೆ.

12. **ಸ್ವಾಧಾರ ಗೃಹ:-** ಸಂಕಷ್ಟಕರ ಪರಿಸ್ಥಿತಿಯಲ್ಲಿರುವ ಮಹಿಳೆಯರಿಗಾಗಿ ತಾತ್ಕಾಲಿಕ ಆಶ್ರಯ, ವೈದ್ಯಕೀಯ ಸೇವೆ, ಸಮಾಲೋಚನೆ, ಕಾನೂನು ನೆರವು ಒದಗಿಸಲಾಗುತ್ತಿದೆ. ಪ್ರಸ್ತುತ ರಾಜ್ಯಾದ್ಯಂತ 51 ಸ್ವಾಧಾರ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. 2023-24ನೇ ಸಾಲಿನ ಆಯವ್ಯಯದಲ್ಲಿ ರೂ.1200.00 ಲಕ್ಷ ಅನುದಾನ ನಿಗದಿಪಡಿಸಲಾಗಿದೆ.

13. **ಒನ್ ಸ್ಟಾಪ್ ಸೆಂಟರ್ (ಸಖಿ):-** ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯ ಅಂದರೆ, ವೈದ್ಯಕೀಯ ಚಿಕಿತ್ಸೆ ಮತ್ತು ನೆರವು, ಪೊಲೀಸ್ ನೆರವು, ಕಾನೂನು ನೆರವು ಹಾಗೂ ಸಮಾಲೋಚನೆ ವ್ಯವಸ್ಥೆಗಳನ್ನು ಒನ್ ಸ್ಟಾಪ್ ಸೆಂಟರ್‌ನಲ್ಲಿ ಒದಗಿಸಲಾಗುತ್ತಿದೆ. ರಾಜ್ಯದಲ್ಲಿ 31 ಒನ್ ಸ್ಟಾಪ್ ಸೆಂಟರ್ ಗಳು ಕಾರ್ಯನಿರ್ವಹಿಸುತ್ತಿವೆ.ಕೇಂದ್ರ ಸರ್ಕಾರದಿಂದ 100% ಅನುದಾನ ನೀಡಲಾಗುತ್ತಿದೆ.

14. **ಮಹಿಳಾ ಸಬಲೀಕರಣ ಕೇಂದ್ರ:-** ಮಿಷನ್‌ಶಕ್ತಿ ಉಪಯೋಜನೆ ಸಾಮರ್ಥ್ಯದಡಿ ವಿವಿಧ ಯೋಜನೆಗಳ ಕಾರ್ಯಯೋಜನೆ ರೂಪಿಸಿರುವಂತೆ, ಮಹಿಳೆಯರ ಸಬಲೀಕರಣ ಕಾರ್ಯಕ್ರಮಗಳ ಅನುಷ್ಠಾನದ ಪ್ರಗತಿ ಮೇಲ್ವಿಚಾರಣೆ ಮಾಡಲು ಮಹಿಳಾ ಸಬಲೀಕರಣ ಘಟಕಗಳನ್ನು ಸ್ಥಾಪಿಸಲಾಗುತ್ತಿದೆ. 2023-24ನೇ ಸಾಲಿನ ಆಯವ್ಯಯದಲ್ಲಿ ರೂ.200.00 ಲಕ್ಷ ಅನುದಾನ ನಿಗದಿಪಡಿಸಲಾಗಿದೆ.

15. **ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆ (PMMVY):**ಸದರಿ ಯೋಜನೆಯಡಿ ತಾಯಿ ಮತ್ತು ಮಗುವಿನ ಆರೋಗ್ಯ ಮತ್ತು ಪೌಷ್ಠಿಕಾಂಶವನ್ನು ಸುಧಾರಿಸಲು ಹಾಗೂ ವೇತನ ನಷ್ಟವೇನಾದರೂ ಆಗಿದ್ದರೆ ಅದಕ್ಕೆ ಪರಿಹಾರ ನೀಡಲು ಗರ್ಭಿಣಿ ಮತ್ತು ಬಾಣಂತಿಯರಿಗಾಗಿ ಹಣಕಾಸು ನೆರವು ನೀಡಲಾಗುತ್ತಿದೆ. ಮೊದಲ ಮಗುವಿಗೆ ಎರಡು ಕಂತುಗಳಲ್ಲಿ ರೂ. 5,000.00 ಮೊತ್ತವನ್ನು ಆರ್ಥಿಕ ಸಹಾಯಧನ ಹಾಗೂ ಎರಡನೇ ಮಗು ಹೆಣ್ಣು ಮಗುವಾಗಿರುವುದಕ್ಕೆ ರೂ. 6000.00 ಗಳ ಆರ್ಥಿಕ ಸಹಾಯಧನವನ್ನು ಜನನದ ನಂತರ ಒಂದೇ ಕಂತಿನಲ್ಲಿ ನೀಡಲಾಗುವುದು. 2023-24ನೇ ಸಾಲಿನ ಆಯವ್ಯಯದಲ್ಲಿ ರೂ.10733.00 ಲಕ್ಷ ಅನುದಾನ ನಿಗದಿಪಡಿಸಲಾಗಿದೆ.

16. **ಸ್ವೀಕಾರ ಕೇಂದ್ರ ಹಾಗೂ ರಾಜ್ಯ ಮಹಿಳಾ ನಿಲಯ:** 18 ವರ್ಷ ಮೇಲ್ಪಟ್ಟ ಅನಾಥ, ನಿರ್ಗತಿಕ ಶೋಷಿತ ವರ್ಗದ ಮಹಿಳೆಯರು ಸ್ವ-ಇಚ್ಛೆಯಿಂದ, ಸ್ವಯಂಸೇವಾ ಸಂಸ್ಥೆಗಳ ಮುಖಾಂತರ, ಯಾವುದೇ ವ್ಯಕ್ತಿಗಳ ಮುಖಾಂತರ, ಪೊಲೀಸರ ಮುಖಾಂತರ ಹಾಗೂ ಅನೈತಿಕ ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956 ರಡಿಯಲ್ಲಿ ನ್ಯಾಯಾಲಯದಿಂದ ಪ್ರಕರಣಗಳಡಿ ದಾಖಲಿಸಲ್ಪಟ್ಟ ಮಹಿಳೆಯರು ಸ್ವೀಕಾರ ಕೇಂದ್ರ ಮತ್ತು ರಾಜ್ಯ ಮಹಿಳಾ ನಿಲಯಗಳಲ್ಲಿ ರಕ್ಷಣೆ ಮತ್ತು ಪೋಷಣೆ ಪಡೆಯಬಹುದು. 2023-24ನೇ ಸಾಲಿನ ಆಯವ್ಯಯದಲ್ಲಿ ರೂ.775.79 ಲಕ್ಷ ಅನುದಾನ ನಿಗದಿಪಡಿಸಲಾಗಿದೆ.

17. **ಬಾಲಕಿಯರ ವಸತಿ ನಿಲಯ ಯೋಜನೆ:** ಬಾಲಕಿಯರ ವಸತಿ ನಿಲಯಗಳ ಪ್ರಯೋಜನ ಪಡೆಯುವ ಬಾಲಕಿಯರು ಗ್ರಾಮೀಣ ಪ್ರದೇಶದಲ್ಲಿ ವಾಸಿಸುತ್ತಿದ್ದು, ಬಾಲಕಿಯರ ಕುಟುಂಬವು ಬಡತನ ರೇಖೆಗಿಂತ ಕೆಳಮಟ್ಟದಲ್ಲಿರಬೇಕು. ಬಾಲಕಿಯರು 6ನೇ ತರಗತಿ ಹಾಗೂ ನಂತರದ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮತ್ತು ವೃತ್ತಿ ತರಬೇತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, ವಾರ್ಷಿಕ ವರಮಾನ ರೂ.10,000/- ಮೀರದ ಕುಟುಂಬದಲ್ಲಿನ ಹೆಣ್ಣು ಮಕ್ಕಳಿಗೆ ಈ ವಸತಿ ನಿಲಯಗಳಲ್ಲಿ ಪ್ರವೇಶ ಅವಕಾಶ ಲಭ್ಯವಿರುತ್ತದೆ. 2023-24ನೇ ಸಾಲಿನ ಆಯವ್ಯಯದಲ್ಲಿ ರೂ.450.00 ಲಕ್ಷ ಅನುದಾನ ನಿಗದಿಪಡಿಸಲಾಗಿದೆ.

18. **ಸುಧಾರಣಾ ಸಂಸ್ಥೆಗಳ ಕಟ್ಟಡ ದುರಸ್ಥಿ ಹಾಗೂ ನಿರ್ವಹಣೆ:-** ಜಿಲ್ಲೆಗಳ ಬೇಡಿಕೆ ಹಾಗೂ ಅನುದಾನದ

ಲಭ್ಯತೆಗನುಗುಣವಾಗಿ ಕ್ರಮ ಕೈಗೊಳ್ಳಲಾಗುವುದು. 2023-24ನೇ ಸಾಲಿನ ಆಯವ್ಯಯದಲ್ಲಿ ರೂ.700.00 ಲಕ್ಷ ಅನುದಾನ ನಿಗದಿಪಡಿಸಲಾಗಿದೆ.

19. **ಸುಧಾರಣಾ ಸಂಸ್ಥೆಗಳ ಕಟ್ಟಡ ನಿರ್ಮಾಣ:-** ಜಿಲ್ಲೆಗಳ ಬೇಡಿಕೆ ಹಾಗೂ ಅನುದಾನದ ಲಭ್ಯತೆಗನುಗುಣವಾಗಿ ಕ್ರಮ ಕೈಗೊಳ್ಳಲಾಗುವುದು. 2023-24ನೇ ಸಾಲಿನ ಆಯವ್ಯಯದಲ್ಲಿ ರೂ.100.00 ಲಕ್ಷ ಅನುದಾನ ನಿಗದಿಪಡಿಸಲಾಗಿದೆ.

20. **ಸ್ತ್ರೀಶಕ್ತಿ ಯೋಜನೆ:-**ಸ್ವ-ಸಹಾಯ ಗುಂಪುಗಳ ಮೂಲಕ ಮಹಿಳೆಯರ ಸಬಲೀಕರಣದ ಧ್ಯೇಯದೊಂದಿಗೆ 2000-01ನೇ ಸಾಲಿನಲ್ಲಿ ಸ್ತ್ರೀಶಕ್ತಿ ಯೋಜನೆಯನ್ನು ಅನುಷ್ಠಾನಗೊಳಿಸಲಾಯಿತು. ಸ್ತ್ರೀಶಕ್ತಿ ಯೋಜನೆಯಡಿ ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಗ್ರಾಮೀಣ ಪ್ರದೇಶದಲ್ಲಿ ಸಮಾಜದ ಬಡ ಕುಟುಂಬದ, ಸಾಮಾಜಿಕ ಅಥವಾ ಆರ್ಥಿಕ ಹಿನ್ನಲೆಯುಳ್ಳ ಸಮಾನ ಮನಸ್ಸಿನ ಪರಸ್ಪರ ವಿಶ್ವಾಸದಿಂದ ಕೂಡಿರುವ ಭೂರಹಿತ ಮಹಿಳಾ ಕೃಷಿ ಕಾರ್ಮಿಕರು, ಪರಿಶಿಷ್ಟ ಜಾತಿ ಅಥವಾ ವರ್ಗಕ್ಕೆ ಸೇರಿದ ಕುಟುಂಬದ 15-20 ಮಹಿಳೆಯರನ್ನು ಒಟ್ಟು ಸೇರಿಸಿ 165960 ಲಕ್ಷ ಗುಂಪುಗಳನ್ನು ರಚಿಸಲಾಗಿದೆ. ಒಟ್ಟು ಇಲ್ಲಿಯವರೆಗೆ 165960 ಲಕ್ಷ ಸ್ವ-ಸಹಾಯ ಗುಂಪುಗಳು ಅನುಷ್ಠಾನದಲ್ಲಿದ್ದು, 25.86 ಲಕ್ಷ ಮಹಿಳಾ ಸದಸ್ಯರನ್ನು ಒಗ್ಗೂಡಿಸಲಾಗಿದೆ.

**ಯೋಜನೆಯಡಿ ಈ ಕೆಳಕಂಡ ಸೌಲಭ್ಯಗಳನ್ನು ಸ್ತ್ರೀಶಕ್ತಿ ಗುಂಪುಗಳಿಗೆ ಒದಗಿಸಲಾಗುತ್ತಿದೆ.**

- ಸುತ್ತುನಿಧಿ, ಕಿಟ್ ಸಾಮಗ್ರಿ, ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿರುವ ಗುಂಪುಗಳಿಗೆ ಪ್ರೋತ್ಸಾಹಧನ, ಅಧಿಕ ಉಳಿತಾಯ ಮಾಡಿರುವ ಗುಂಪುಗಳಿಗೆ ಪ್ರೋತ್ಸಾಹ ಧನ, ಸಾಲದ ಮೇಲಿನ ಬಡ್ಡಿಗೆ ಶೇಕಡ 6ರ ಸಹಾಯ ಧನ, 4 ವಿಭಾಗ ಮಟ್ಟದಲ್ಲಿ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

**ಸ್ತ್ರೀಶಕ್ತಿ ಯೋಜನೆಯಡಿ ಸೌಲಭ್ಯಗಳು/ಕಾರ್ಯಕ್ರಮಗಳು:**

- ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಸ್ತ್ರೀಶಕ್ತಿ ಒಕ್ಕೂಟಗಳನ್ನು ರಚನೆ ಮಾಡಲಾಗಿದೆ.ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಸ್ತ್ರೀಶಕ್ತಿ ಮಾರಾಟ ಭವನಗಳನ್ನು ಮತ್ತು ವಿಭಾಗೀಯ ಮಟ್ಟದಲ್ಲಿ ತರಬೇತಿ ಕೇಂದ್ರಗಳನ್ನು ನಿರ್ಮಿಸಲಾಗಿದೆ.ಜಿಲ್ಲಾ ಮತ್ತು ವಿಭಾಗ ಮಟ್ಟದಲ್ಲಿ ಸ್ತ್ರೀಶಕ್ತಿ ಉತ್ಪನ್ನಗಳ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ ನಡೆಸಲಾಗುತ್ತಿದೆ.ತಾಲ್ಲೂಕು ಮಟ್ಟದಲ್ಲಿ ಸ್ತ್ರೀಶಕ್ತಿ ಸಮಾವೇಶಗಳನ್ನು ನಡೆಸಲಾಗುತ್ತಿದೆ.ಸ್ತ್ರೀಶಕ್ತಿ ಗುಂಪುಗಳ ಸದಸ್ಯರಿಗೆ ಲೇಬಲಿಂಗ್, ಪ್ಯಾಕಿಂಗ್, ಆರ್ಗಾನಿಕ್ ಸರ್ಟಿಫಿಕೇಷನ್ ಮತ್ತು ಇನ್ನಿತರ ಕೌಶಲ್ಯಾಭಿವೃದ್ಧಿ ತರಬೇತಿ ನಡೆಸಲಾಗುತ್ತಿದೆ.ಪ್ರತೀ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಂದು ಅತ್ಯುತ್ತಮ ಸ್ತ್ರೀಶಕ್ತಿ ಗುಂಪುಗಳು ಮತ್ತು ಒಕ್ಕೂಟಗಳಿಗೆ ಪ್ರಶಸ್ತಿಗಳನ್ನು ರಾಜ್ಯ ಮಟ್ಟದಲ್ಲಿ ನೀಡಲಾಗುತ್ತಿದೆ.

- **ಅಮೃತ ಕಿರು ಉದ್ದಿಮೆ ಯೋಜನೆ:** ಅಮೃತ ಸ್ವ-ಸಹಾಯ ಕಿರು ಉದ್ದಿಮೆ ಯೋಜನೆಯಡಿ 7500 ಗುಂಪುಗಳಿಗೆ ಪ್ರತಿ ಗುಂಪಿಗೆ ರೂ.1.00 ಲಕ್ಷದಂತೆ ರೂ 75.00 ಕೋಟಿಗಳ ಬೀಜಧನ ಒದಗಿಸಲಾಗಿದೆ. 7500 ಆಯ್ದ ಗುಂಪುಗಳಿಂದ ಇಬ್ಬರು ಪ್ರತಿ ನಿಧಿಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿ ಒದಗಿಸಲಾಗಿದೆ. 2023-24ನೇ ಸಾಲಿನ ಆಯವ್ಯಯದಲ್ಲಿ ರೂ.331.00 ಲಕ್ಷಗಳ ಅನುದಾನ ಒದಗಿಸಲಾಗಿದೆ.

21. **ಗೃಹಲಕ್ಷ್ಮೀ ಯೋಜನೆ:** ರಾಜ್ಯದ ಮಹಿಳೆಯರ ಆರ್ಥಿಕ ಸಬಲೀಕರಣವನ್ನು ಹೆಚ್ಚಿಸುವ ಸಲುವಾಗಿ ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ.2000/-ಗಳನ್ನು ನೀಡುವ ಗೃಹಲಕ್ಷ್ಮೀ ಯೋಜನೆಯು ದಿ:19-07-2023 ರಂದು ರಾಜ್ಯಾದ್ಯಂತ ಚಾಲನೆಗೊಂಡು ದಿನಾಂಕ:30-08-2023 ರಿಂದ ಫಲಾನುಭವಿಗಳಿಗೆ ಹಣ ವರ್ಗಾವಣೆ ಪ್ರಕ್ರಿಯೆ ಆರಂಭಗೊಂಡಿರುತ್ತದೆ.ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯು ವಿತರಿಸುವ ಅಂತ್ಯೋದಯ, ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸಿರುವ ಮಹಿಳೆಯರು ಈ ಯೋಜನೆಯ ಅರ್ಹ ಫಲಾನುಭವಿಯಾಗಿರುತ್ತಾರೆ. ಈ ಯೋಜನೆಯ ಸೌಲಭ್ಯವನ್ನು ಲಿಂಗತ್ವ ಅಲ್ಪಸಂಖ್ಯಾತರಿಗೂ ಸಹ ವಿಸ್ತರಿಸಲಾಗಿದೆ. ಕುಟುಂಬದ ಯಜಮಾನಿಯ ಅಥವಾ ಯಜಮಾನಿಯ ಪತಿ ಆದಾಯ ತೆರಿಗೆ ಪಾವತಿದಾರರಾಗಿದ್ದಲ್ಲಿ ಮತ್ತು ಜಿ.ಎಸ್.ಟಿ. ರಿಟರ್ನ್ಸ್ ಸಲ್ಲಿಸುವವರಾಗಿದ್ದಲ್ಲಿ ಈ ಯೋಜನೆಗೆ ಅರ್ಹರಾಗಿರುವುದಿಲ್ಲ.ದಿನಾಂಕ: 19.07.2023ರಂದು ಗೃಹಲಕ್ಷ್ಮೀ ಯೋಜನೆಯಡಿ ಅರ್ಜಿ ನೋಂದಣಿಯನ್ನು ಚಾಲನೆಗೊಳಿಸಲಾಗಿದ್ದು, ನೋಂದಣಿ ಪ್ರಕ್ರಿಯೆಗೆ ಕೊನೆಯ ದಿನಾಂಕವಿರುವುದಿಲ್ಲ. 2023-24ನೇ ಸಾಲಿನ ಆಯವ್ಯಯದಲ್ಲಿ ರೂ.17500 ಕೋಟಿ ಅನುದಾನ ಒದಗಿಸಲಾಗಿದೆ.

## ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ
## "ವಿಕಲಚೇತನರಿಗಾಗಿ ಇರುವ ಯೋಜನೆಗಳು "

### I. ರಾಜ್ಯ ವಲಯ :

**(ಎ) ಶೈಕ್ಷಣಿಕ ಯೋಜನೆಗಳು:**

**1) ಸರ್ಕಾರಿ ವಿಶೇಷ ಶಾಲೆಗಳು:**

**ಅ) ಶ್ರವಣದೋಷವುಳ್ಳ ಮಕ್ಕಳಿಗಾಗಿ ಸರ್ಕಾರದ ವತಿಯಿಂದ ನಡೆಸುತ್ತಿರುವ ವಸತಿಯುತ ಶಾಲೆಗಳು: 05**

ಶ್ರವಣದೋಷವುಳ್ಳ ಮಕ್ಕಳಿಗಾಗಿ 1 ರಿಂದ 10ನೇ ತರಗತಿಯವರೆಗಿನ ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ.

1. ಬೆಂಗಳೂರು ನಗರ ಜಿಲ್ಲೆ,
2. ಮೈಸೂರು,
3. ಕಲಬುರ್ಗಿ,
4. ಬಳ್ಳಾರಿ ಮತ್ತು
5. ಬೆಳಗಾವಿ

**ಈ ಶಾಲೆಗಳಲ್ಲಿ ಮಕ್ಕಳಿಗೆ ಉಚಿತ ವಸತಿ, ಊಟ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ. ಈ ಶಾಲೆಗಳ ಪೈಕಿ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಬೆಳಗಾವಿಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.**

**ವಿಶೇಷ ಶಾಲೆಯಲ್ಲಿ ಮಕ್ಕಳನ್ನು ದಾಖಲಿಸಲು ಸಲ್ಲಿಸಬೇಕಾದ ದಾಖಲೆಗಳು:**

1. ಮಕ್ಕಳ ವಯೋಮಿತಿ 5 ವರ್ಷ 10 ತಿಂಗಳು ತುಂಬಿರಬೇಕು.
2. ಹುಟ್ಟಿದ ದಿನಾಂಕದ ಬಗ್ಗೆ ಜನನ ಪ್ರಮಾಣ ಪತ್ರ.
3. ವೈದ್ಯಕೀಯ ಪ್ರಮಾಣ ಪತ್ರ (ಯು.ಡಿ.ಐ.ಡಿ ಕಾರ್ಡ್).
4. ಜಾತಿ ಪ್ರಮಾಣ ಪತ್ರ.
5. ವಿದ್ಯಾರ್ಥಿಯ ಇತ್ತೀಚಿನ ಭಾವಚಿತ್ರ/ಆಧಾರ್ ಕಾರ್ಡ್.
6. ಸಾಮಾನ್ಯ ಶಾಲೆಗಳಲ್ಲಿ ವ್ಯಾಸಂಗ ಮಾಡಲು ಸಾಧ್ಯವಾಗದ ಶ್ರವಣದೋಷವುಳ್ಳವರಿಗೆ.
7. ಇತರೆ ಶಾಲೆಯಿಂದ ವರ್ಗಾವಣೆಯಾಗಿ ಬಂದಿದ್ದಲ್ಲಿ ವರ್ಗಾವಣೆ ಪ್ರಮಾಣ ಪತ್ರ

**ಆ) ಅಂಧ ಮಕ್ಕಳಿಗಾಗಿ ಸರ್ಕಾರದ ವತಿಯಿಂದ ನಡೆಸುತ್ತಿರುವ ವಸತಿಯುತ ಶಾಲೆಗಳು:– 04**

ದೃಷ್ಟಿದೋಷವುಳ್ಳ 1 ರಿಂದ 10ನೇ ತರಗತಿಯವರೆಗಿನ ವಿದ್ಯಾರ್ಥಿಗಳಿಗೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವತಿಯಿಂದ

1. ಗುಲ್ಬರ್ಗಾ,
2. ಮೈಸೂರು,
3. ದಾವಣಗೆರೆ,
4. ಹುಬ್ಬಳ್ಳಿ ನಗರಗಳಲ್ಲಿ ವಿಶೇಷ ಶಾಲೆಗಳನ್ನು ಸ್ಥಾಪಿಸಲಾಗಿದೆ. ಈ ಶಾಲೆಗಳ ಪೈಕಿ ಅಂಧ ಹೆಣ್ಣು ಮಕ್ಕಳಿಗಾಗಿ ದಾವಣಗೆರೆಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.
5. ವಿದ್ಯಾರ್ಥಿಗಳಿಗೆ ಉಚಿತ ಊಟ, ವಸತಿ ಹಾಗೂ ಇತರೆ ಸೌಲಭ್ಯವನ್ನು ಒದಗಿಸಲಾಗುವುದು.

**ವಿಶೇಷ ಶಾಲೆಯಲ್ಲಿ ಮಕ್ಕಳನ್ನು ದಾಖಲಿಸಲು ಸಲ್ಲಿಸಬೇಕಾದ ದಾಖಲೆಗಳು:**

1. ಮಕ್ಕಳ ವಯೋಮಿತಿ 5 ವರ್ಷ 10 ತಿಂಗಳು ತುಂಬಿರಬೇಕು.
2. ಹುಟ್ಟಿದ ದಿನಾಂಕದ ಬಗ್ಗೆ ಜನನ ಪ್ರಮಾಣ ಪತ್ರ.
3. ವೈದ್ಯಕೀಯ ಪ್ರಮಾಣ ಪತ್ರ (ಯು.ಡಿ.ಐ.ಡಿ ಕಾರ್ಡ್).
4. ಜಾತಿ ಪ್ರಮಾಣ ಪತ್ರ.
5. ವಿದ್ಯಾರ್ಥಿಯ ಇತ್ತೀಚಿನ ಭಾವಚಿತ್ರ/ಆಧಾರ್ ಕಾರ್ಡ್.

6. ಸಾಮಾನ್ಯ ಶಾಲೆಗಳಲ್ಲಿ ವ್ಯಾಸಂಗ ಮಾಡಲು ಸಾಧ್ಯವಾಗದ ದೃಷ್ಟಿದೋಷವುಳ್ಳವರು
7. ಇತರೆ ಶಾಲೆಯಿಂದ ವರ್ಗಾವಣೆಯಾಗಿ ಬಂದಿದ್ದಲ್ಲಿ ವರ್ಗಾವಣೆ ಪ್ರಮಾಣ ಪತ್ರ

2. **ಸ್ವಯಂಸೇವಾ ಸಂಸ್ಥೆಗಳ ಮುಖಾಂತರ ನಡೆಸುತ್ತಿರುವ ರಾಜ್ಯ ಅನುದಾನಿತ ವಿಶೇಷ ಶಾಲೆಗಳು:**
ಇಲಾಖೆಯ ಅಂಗವಿಕಲ ಮಕ್ಕಳ ಶಿಶು ಕೇಂದ್ರೀಕೃತ ಯೋಜನೆಯಡಿ ಬುದ್ಧಿಮಾಂದ್ಯ (ಸೆರಬ್ರಲ್ ಪಾಲ್ಸಿ, ಆಟಿಸಂ), ದೃಷ್ಟಿದೋಷ, ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಹಾಗೂ ವಸತಿರಹಿತ ಶಾಲೆಗಳು ಸೇರಿದಂತೆ ಒಟ್ಟು 141 (105 ವಸತಿಯುತ & 36 ವಸತಿರಹಿತ) ವಿಶೇಷ ಶಾಲೆಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ.

ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿರುವ ವಿಶೇಷ ಶಾಲೆಗಳಿಗೆ, ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಸಹಾಯ ಧನ ನೀಡಲು 2010-11ನೇ ಸಾಲಿನಿಂದ ಈ ಯೋಜನೆಯು ಜಾರಿಗೆ ಬಂದಿರುತ್ತದೆ. ಸದರಿ ಯೋಜನೆಯಡಿ ಹಾಲಿ 141 ವಿಶೇಷ ಶಾಲೆಗಳು ನಡೆಯುತ್ತಿರುತ್ತವೆ. ಈ ಶಾಲೆಗಳ ನಿರ್ವಹಣೆಗಾಗಿ ರಾಜ್ಯ ಸರ್ಕಾರದಿಂದ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದ್ದು, ಈ ಅನುದಾನದಲ್ಲಿ ಶಿಕ್ಷಕರ ಗೌರವಧನ, ಪಥ್ಯಾಹಾರ ವೆಚ್ಚ, ವೈದ್ಯಕೀಯ ವೆಚ್ಚ, ಸಮವಸ್ತ್ರ ಭತ್ಯೆ, ಸಾರಿಗೆ ಭತ್ಯೆ, ಕಟ್ಟಡದ ಬಾಡಿಗೆ / ನಿರ್ವಹಣಾ ವೆಚ್ಚ, ಸಾದಿಲ್ವಾರು ವೆಚ್ಚ ಇತ್ಯಾದಿಗಳನ್ನು ಒಳಗೊಂಡಿರುತ್ತದೆ. ಪ್ರಸ್ತುತ ನೀಡಲಾಗುತ್ತಿರುವ ಅನುದಾನದ ವಿವರಗಳು ಈ ಕೆಳಕಂಡಂತಿವೆ.

| ಶಿಶು ಕೇಂದ್ರೀಕೃತ ಯೋಜನೆಯಡಿ ಸೌಲಭ್ಯ ಪಡೆಯುತ್ತಿರುವ ಶಾಲೆಗಳು. | **2016-17ನೇ ಸಾಲಿನಲ್ಲಿ ಸರ್ಕಾರದ ಆದೇಶ ಸಂಖ್ಯೆ:ಮಮಇ/122/ ಪಿಹೆಚ್‌ಪಿ/2016** | | **2017-18ನೇ ಸಾಲಿನಲ್ಲಿ ಸರ್ಕಾರದ ಆದೇಶ ಸಂಖ್ಯೆ:ಮಮಇ 90/ಪಿಹೆಚ್‌ಪಿ/2017.** | | **2022-23ನೇ ಸಾಲಿನಲ್ಲಿ ಪರಿಷ್ಕರಿಸಿರುವ ಅನುದಾನದ ವಿವರ (ಪ್ರತಿ ಮಗುವಿಗೆ)** | |
|---|---|---|---|---|---|---|
| | ವಸತಿಯುತ ಶಾಲೆ | ವಸತಿರಹಿತ ಶಾಲೆ | ವಸತಿಯುತ ಶಾಲೆ | ವಸತಿರಹಿತ ಶಾಲೆ | ವಸತಿಯುತ ಶಾಲೆ | ವಸತಿರಹಿತ ಶಾಲೆ |
| ಬುದ್ಧಿಮಾಂದ್ಯ ಹಾಗೂ ಸ್ಪ್ಯಾಸ್ಟಿಕ್ | **ರೂ.5600/-** | **ರೂ.4800/-** | **ರೂ.6800/-** | **ರೂ.6000/-** | **ರೂ.10,200/-** | **ರೂ.9000/-** |
| ಶ್ರವಣದೋಷವುಳ್ಳ ಹಾಗೂ ದೃಷ್ಟಿದೋಷವುಳ್ಳ ಮಕ್ಕಳ ಶಾಲೆ | - | - | **ರೂ.6200/-** | **ರೂ.5200/-** | **ರೂ.9200/-** | **ರೂ.7800/-** |

## ಯೋಜನೆಯ ಉದ್ದೇಶ:

- ಸಂವಿಧಾನದಲ್ಲಿ ಸರ್ವರಿಗೂ ಶಿಕ್ಷಣ ನೀಡಲು ಸೂಚಿಸಿದಂತೆ ವಿಕಲಚೇತನ ಮಕ್ಕಳಿಗೂ ಶಿಕ್ಷಣದ ಹಕ್ಕನ್ನು ನೀಡುವುದು.
- ಎಲ್ಲಾ ವಿಕಲಚೇತನ ಮಕ್ಕಳಿಗೂ ಶೈಕ್ಷಣಿಕ ಸೌಲಭ್ಯ ಒದಗಿಸುವುದು.
- ವಿಕಲಚೇತನ ಮಕ್ಕಳಲ್ಲಿ ಶೇ.100 ರಷ್ಟು ಸಾಕ್ಷರತೆಯನ್ನು ಮೂಡಿಸುವುದು.
- ವಿಕಲಚೇತನ ಮಕ್ಕಳ ಶೈಕ್ಷಣಿಕ ಕಾರ್ಯಕ್ರಮಕ್ಕೆ ಸ್ವಯಂ ಸೇವಾ ಸಂಸ್ಥೆಗಳಿಗೆ ಪ್ರೋತ್ಸಾಹ ನೀಡುವುದು.
- ಕುಷ್ಠರೋಗ ನಿವಾರಿತ ವಿಕಲಚೇತನರಿಗೆ, ಮಾನಸಿಕ ಅಸ್ವಸ್ಥರಿಗೆ ಹಾಗೂ ತರಬೇತಿ ಪಡೆಯಲು ಅರ್ಹರಿರುವಂತಹ ಬುದ್ಧಿಮಾಂದ್ಯರಿಗೆ ವೃತ್ತಿ ತರಬೇತಿ ಕೇಂದ್ರಗಳನ್ನು ಸ್ಥಾಪಿಸಿ ಪುನರ್ವಸತಿಗೆ ನೆರವು ನೀಡುವುದು.

**ಷರತ್ತುಗಳು:**

- ಸ್ವಯಂ ಸೇವಾ ಸಂಸ್ಥೆಯು ಭಾರತದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಪ್ರಕಾರ ನೊಂದಣಿಯಾಗಿರುವ ಚಾರಿಟಬಲ್ ಟ್ರಸ್ಟ್ ಸೊಸೈಟಿ ಅಥವಾ ಸಮಾಜ ಸೇವೆಯಲ್ಲಿ ತೊಡಗಿರುವ ಅಧಿಕಾರೇತರ ಸಂಸ್ಥೆಯಾಗಿರಬೇಕು. ಸ್ವಯಂ ಸೇವಾ ಸಂಸ್ಥೆಯು ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ–2016ರ ಸೆಕ್ಷನ್ 50, 51 ರಂತೆ ನೊಂದಣಿ ಮಾಡಿಸಿರಬೇಕು.
- ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವತಿಯಿಂದ ಅನುಮತಿ ಪಡೆದಿರಬೇಕು.
- ಸಂಸ್ಥೆಯು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಯಾವುದೇ ರೀತಿಯ ಶುಲ್ಕ, ದೇಣಿಗೆ, ವಂತಿಗೆ ಮುಂತಾದವುಗಳನ್ನು ಸ್ವೀಕರಿಸತಕ್ಕದ್ದಲ್ಲ.
- ಯಾವುದೇ ಸಂಸ್ಥೆಯು ಇಲಾಖೆಯಿಂದ ಅನುಮತಿ ಪಡೆದು ಶಾಲೆ ಪ್ರಾರಂಭಿಸಿದ 03 ವರ್ಷಗಳ ನಂತರ ರಾಜ್ಯ ಅನುದಾನಕ್ಕೆ ಒಳಪಡಿಸಲು ಅರ್ಹವಾಗುವುದು.
- ಸಂಸ್ಥೆಯು ಯಾವುದೇ ಜಾತಿ ಮತ ಪರಿಗಣಿಸದೇ ಎಲ್ಲಾ ವಿಕಲಚೇತನ ಮಕ್ಕಳಿಗೂ ಮುಕ್ತವಾಗಿರಬೇಕು.
- ಸಹಾಯಧನ ಪಡೆಯುವ ಸಂಸ್ಥೆಯು ರಾಜ್ಯ ಸರ್ಕಾರದ ಅಧಿಕಾರಿಗಳ ಅಥವಾ ಇಲಾಖೆಯಿಂದ ದೃಢೀಕರಿಸಲ್ಪಟ್ಟ ಯಾವುದೇ ವ್ಯಕ್ತಿಗಳ/ಸಂಸ್ಥೆಗಳ ತಪಾಸಣೆಗೆ ಸಿದ್ಧವಾಗಿರಬೇಕು./ ಮುಕ್ತವಾಗಿರಬೇಕು.
- ಶಾಲೆಯಲ್ಲಿ ಕನಿಷ್ಠ 25 ವಿದ್ಯಾರ್ಥಿಗಳು ದಾಖಲಾಗಿರಬೇಕು. ಶಾಲೆಯಲ್ಲಿ 20 ಕ್ಕಿಂತ ಕಡಿಮೆ ವಿದ್ಯಾರ್ಥಿಗಳಿದ್ದಲ್ಲಿ ಸಹಾಯಧನ ಪಡೆಯಲು ಅರ್ಹರಿರುವುದಿಲ್ಲ.
- ಶಾಲೆಯು ಶೈಕ್ಷಣಿಕ ವರ್ಷದಲ್ಲಿ 220 ದಿನಗಳಿಗೆ ಕಡಿಮೆ ಇರದಂತೆ ಕಾರ್ಯನಿರ್ವಹಿಸಬೇಕು.
- ವಿಶೇಷ ಶಿಕ್ಷಕರ ಶೈಕ್ಷಣಿಕ ಅರ್ಹತೆಯು ಯೋಜನೆಯ ನಿಯಮಾನುಸಾರ ಇರತಕ್ಕದ್ದು.

**ಯೋಜನೆಯ ಅನುಷ್ಠಾನ:**

ಆಸಕ್ತ ಸ್ವಯಂ ಸೇವಾ ಸಂಸ್ಥೆಯವರು ಇಲಾಖೆಯಿಂದ ಅನುಮತಿ ಪಡೆದು ಶಾಲೆ ಪ್ರಾರಂಭಿಸಿದ 3 ವರ್ಷದ ನಂತರ ಸಹಾಯಧನದ ಮಂಜೂರಾತಿಗಾಗಿ ಪ್ರಸ್ತಾವನೆಯನ್ನು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸಲ್ಲಿಸಿ, ಸೂಕ್ತ ತಪಾಸಣಾ ವರದಿಯೊಂದಿಗೆ ಜಿಲ್ಲಾ ಪಂಚಾಯತ್‌ನ ಮುಖ್ಯಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ ಜಿಲ್ಲಾಮಟ್ಟದ ಸಮಿತಿಯ ಶಿಫಾರಸ್ಸಿನೊಂದಿಗೆ ಪ್ರಧಾನ ಕಛೇರಿಗೆ ಪ್ರಸ್ತಾವನೆ ಸಲ್ಲಿಸುವುದು. ಸಹಾಯಧನದ ಮಂಜೂರಾತಿ ಅಧಿಕಾರವು ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಮತ್ತು ಸರ್ಕಾರದ ವಿವೇಚನೆಗೆ ಒಳಪಟ್ಟಿರುತ್ತದೆ.

## 3.ದೃಷ್ಟಿದೋಷ ಮತ್ತು ಶ್ರವಣದೋಷವುಳ್ಳ ಮಕ್ಕಳ "ವಿಶೇಷ ಶಿಕ್ಷಕರ ತರಬೇತಿ" ಕೇಂದ್ರ

ದೃಷ್ಟಿದೋಷವುಳ್ಳ ಹಾಗೂ ಶ್ರವಣದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳಿಗೆ ಬೋಧಿಸುವ ಶಿಕ್ಷಕರಿಗೆ ವಿಶೇಷ ಶಿಕ್ಷಣ ನೀಡಲು 02 ವಿಶೇಷ ಶಿಕ್ಷಕರ ತರಬೇತಿ ಕೇಂದ್ರಗಳನ್ನು 2000–01ನೇ ಸಾಲಿನಿಂದ ಮೈಸೂರಿನಲ್ಲಿ ಪ್ರಾರಂಭಿಸಿದ್ದು, ಪ್ರತಿ ವರ್ಷ ತಲಾ 25 ಮಂದಿ ತರಬೇತಿಯನ್ನು ಪಡೆಯಲು ಅವಕಾಶವಿರುತ್ತದೆ.

ಉದ್ದೇಶ:

ರಾಜ್ಯದಲ್ಲಿ ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳ ವಿಶೇಷ ಶಾಲೆಗಳಲ್ಲಿ ವಿಶೇಷ ಶಿಕ್ಷಕರ ಕೊರತೆ ಇರುವುದರಿಂದ ಪ್ರಾಥಮಿಕ ಶಾಲಾ ಹಂತದ ಮಕ್ಕಳಿಗೆ ಬೋಧನೆ ಮಾಡುವ ಶಿಕ್ಷಕರಿಗೆ ಆರ್.ಸಿ.ಐ. (Rehabilitation Council of India)ನವದೆಹಲಿರವರ ಮಾರ್ಗಸೂಚಿಯನ್ವಯ ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳ ವಿಶೇಷ ಶಿಕ್ಷಣದಲ್ಲಿ ಡಿ.ಎಸ್.ಇ.(ಹೆಚ್.ಐ) ಹಾಗೂ ಡಿ.ಎಸ್.ಇ.(ವಿ.ಐ) ಡಿಪ್ಲೋಮಾ (2ವರ್ಷ) ತರಬೇತಿಯನ್ನು ಸದರಿ ಕೇಂದ್ರದಲ್ಲಿ ನೀಡಲಾಗುತ್ತಿದೆ.

ಅರ್ಹತೆಗಳು:

1. ಪಿ.ಯು.ಸಿ.ಯಲ್ಲಿ ಶೇಕಡ 50ರಷ್ಟು ಅಂಕ ಪಡೆದು ಉತ್ತೀರ್ಣರಾಗಿಬೇಕು.

**4. ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹನಧನ**

**ಎ) ವಿದ್ಯಾರ್ಥಿವೇತನ**:-ಈ ಯೋಜನೆಯಡಿ ಒಂದನೇ ತರಗತಿಯಿಂದ ವಿಶ್ವವಿದ್ಯಾಲಯದ ಮಟ್ಟದವರೆಗೆ ಓದುತ್ತಿರುವ ಅರ್ಹ ವಿಕಲಚೇತನರಿಗೆ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ.

ಉದ್ದೇಶ:

- ವಿಕಲಚೇತನರು ತಮ್ಮ ವಿದ್ಯಾಭ್ಯಾಸವನ್ನು ಮುಂದುವರಿಸಿ ಸಮಾಜದ ಮುಖ್ಯವಾಹಿನಿಗೆ ಬರಲು ಸಹಕಾರಿಯಾಗುತ್ತದೆ.
- ವಿಕಲಚೇತನ ವಿದ್ಯಾರ್ಥಿಗಳು ತಮ್ಮ ವ್ಯಾಸಂಗವನ್ನು ಮಧ್ಯಕ್ಕೆ ಮೊಟಕುಗೊಳಿಸಿ ಶಿಕ್ಷಣ ಪಡೆಯುವಲ್ಲಿ ವಂಚಿತರಾಗುತ್ತಿರುವುದನ್ನು ತಡೆಯಬಹುದು.
- ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಸೌಲಭ್ಯ ಕಲ್ಪಿಸಿದಲ್ಲಿ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಉನ್ನತ ಶಿಕ್ಷಣವನ್ನು ಮುಂದುವರಿಸಲು ಸಹಕಾರಿಯಾಗುತ್ತದೆ.
- ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರಾಥಮಿಕ ಶಿಕ್ಷಣದಿಂದ ಉನ್ನತ ವ್ಯಾಸಂಗದವರೆಗೂ ಶಿಕ್ಷಣ ನೀಡಲು ಉತ್ತೇಜನೆ ನೀಡುವುದು.
- ರಾಜ್ಯದಲ್ಲಿರುವ ವಿಕಲಚೇತನ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಮಾಣವನ್ನು ಹೆಚ್ಚಿಸಿ ಸಮಾಜದ ಮುಖ್ಯವಾಹಿನಿಗೆ ತರುವುದು.

ಷರತ್ತುಗಳು:

- ವಿಕಲಚೇತನ ವಿದ್ಯಾರ್ಥಿಗಳು, ಸ್ಟೇಟ್ ಸ್ಕಾಲರ್‌ಶಿಪ್ ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು.
- ಎಲ್ಲಾ ವರ್ಗದ ವಿಕಲಚೇತನ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಲಾಗಿದೆ.
- ವಿಕಲಚೇತನ ವಿದ್ಯಾರ್ಥಿಗಳು ವಿದ್ಯಾರ್ಥಿವೇತನವನ್ನು ಪಡೆಯಲು ಯಾವುದೇ ಆದಾಯ ಮಿತಿ ಇರುವುದಿಲ್ಲ.
- ಉನ್ನತ ಶಿಕ್ಷಣದಲ್ಲಿ ಆಯಾ ವರ್ಷಗಳಲ್ಲಿ ಉತ್ತೀರ್ಣರಾದವರಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು.
- ವಿದ್ಯಾರ್ಥಿಗಳು ಕಡ್ಡಾಯವಾಗಿ ಬ್ಯಾಂಕ್ ಖಾತೆಯನ್ನು ಹೊಂದಿರಬೇಕು ಹಾಗೂ ಅವರ ಬ್ಯಾಂಕ್ ಖಾತೆಗೆ ವಿದ್ಯಾರ್ಥಿವೇತನವನ್ನು ಜಮಾ ಮಾಡಲಾಗುವುದು.

| ಕ್ರಸಂ | ತರಗತಿವಾರು | ಪರಿಷ್ಕೃತ ವಿದ್ಯಾರ್ಥಿ ವೇತನ (ಮಾಹೆಯಾನ) |
|---|---|---|
| 1 | 1 ರಿಂದ 5ನೇ ತರಗತಿ | 200/- |
| 2 | 6ರಿಂದ 10ನೇ ತರಗತಿ | 400/- |
| 3 | ಪಿ.ಯು.ಸಿ | 600/- |
| 4 | ಬಿ.ಎ./ಬಿಎಸ್ಸಿ/ಬಿ.ಕಾಂ,/ಇತರೆ ಪದವೀಧರರು ಹಾಗೂ ಟಿ.ಸಿ.ಹೆಚ್/ ತತ್ಸಮಾನ | 800/- |
| 5 | ಬಿ.ಇ/ಬಿಟೆಕ್/ಎಂ.ಬಿ.ಬಿಎಸ್/ಎಸ್.ಎಲ್.ಬಿ/ಡಿಪ್ಲೊಮೊಇನ್ ಪ್ರೊಫೆಷನ್ ಮತ್ತು ಇಂಜಿನಿಯರಿಂಗ್ ಇನ್ ಪ್ಲ್ಯಾಂಟ್ ಟ್ರೈನಿಂಗ್. | 500/- |
| 6 | ಎಂ.ಎ/ಎಂಎಸ್ಸಿ/ಎಂ.ಕಾಂ/ಎಲ್.ಎಲ್.ಎಂ. ಹಾಗೂ ತತ್ಸಮಾನ | 600/- |

## ಬಿ) ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಯೋಜನೆ:

ಸಾರ್ವತ್ರಿಕ ಪರೀಕ್ಷೆಗಳಲ್ಲಿ ಶೇಕಡ 60 ಕ್ಕಿಂತಲೂ ಹೆಚ್ಚಿನ ಅಂಕಗಳನ್ನು ಪಡೆದ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡಿ ವಿಕಲಚೇತನ ವಿದ್ಯಾರ್ಥಿಗಳ ಪ್ರತಿಭೆಯನ್ನು ಪ್ರೋತ್ಸಾಹಿಸಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವುದು ಯೋಜನೆಯ ಉದ್ದೇಶವಾಗಿರುತ್ತದೆ. ಪ್ರೋತ್ಸಾಹಧನದ ವಿವರ ಈ ಕೆಳಕಂಡಂತೆ ಇರುತ್ತದೆ.

| ಕ್ರ ಸಂ | ತರಗತಿಗಳು | ನೀಡುತ್ತಿರುವ ಪ್ರೋತ್ಸಾಹ ಧನ |
|---|---|---|
| 1 | ಎಸ್.ಎಸ್.ಎಲ್.ಸಿ | 3000/- |
| 2 | ಪದವಿ ಪೂರ್ವ ಶಿಕ್ಷಣ | 5000/- |
| 3 | ಪದವಿ/ಟಿ.ಸಿ.ಹೆಚ್. | 8000/- |
| 4 | ಬಿ.ಇಡಿ/ಸ್ನಾತಕೋತ್ತರ ಪದವಿ/ಎಂ.ಎ., ಎಂ.ಕಾಂ/ಎಂ.ಎಸ್ಸಿ ಹಾಗೂ ಪದವಿ ನಂತರ 2 ವರ್ಷಗಳ ಕೋರ್ಸ್‌ಗೆ. | 10000/- |
| 5 | ಕೃಷಿ ಪದವಿ/ಇಂಜಿನಿಯರಿಂಗ್/ ಪಶು ವೈದ್ಯಕೀಯ/ ಎಂ.ಇಡಿ. ವೈದ್ಯಕೀಯ ಪದವಿ. | 12000/- |

**ಅರ್ಹತೆಗಳು:**

1. ವಿಕಲಚೇತನ ವಿದ್ಯಾರ್ಥಿಗಳು, ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು
2. ವ್ಯಾಸಂಗ ಮಾಡುತ್ತಿರುವ ಹಾಗೂ ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಯು ಶೇ.40ಕ್ಕಿಂತ ಹೆಚ್ಚು ಅಂಗವಿಕಲತೆ ಹೊಂದಿರಬೇಕು ಹಾಗೂ ವೈದ್ಯಕೀಯ ಪ್ರಾಧಿಕಾರದಿಂದ ಪಡೆದ ಯು.ಡಿ.ಐ.ಡಿ ಹೊಂದಿರಬೇಕು.
3. ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳು ಪ್ರಥಮ ಬಾರಿಗೆ ಉತ್ತೀರ್ಣರಾಗಿರಬೇಕು.
4. ಶೇ.60%ಕ್ಕಿಂತಲೂ ಹೆಚ್ಚಿನ ಅಂಕಗಳಿಸಿದ ವಿದ್ಯಾರ್ಥಿಗಳು ಮಾತ್ರ ಈ ಯೋಜನೆಗೆ ಅರ್ಹರಾಗಿರುತ್ತಾರೆ.

12

5. **ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ:**

ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿಕಲಚೇತನ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯನ್ನು ದಿನಾಂಕ:03-09-2013ರಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಭರ್ತಿಮಾಡಿದ ಅರ್ಜಿಯನ್ನು ಪ್ರಾಂಶುಪಾಲರ ದೃಢೀಕರಣದೊಂದಿಗೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಆಯಾ ವರ್ಷದೊಳಗೆ ಸಲ್ಲಿಸತಕ್ಕದ್ದು.

**ಷರತ್ತುಗಳು:**

- ವಿಕಲಚೇತನರು ಭಾರತದ ಪ್ರಜೆಯಾಗಿದ್ದು, ಅರ್ಜಿ ಸಲ್ಲಿಸುವ ದಿನಾಂಕಕ್ಕೆ ಕನಿಷ್ಠ 5 ವರ್ಷ ಕರ್ನಾಟಕದಲ್ಲಿ ವ್ಯಾಸಂಗ ಮಾಡಿರತಕ್ಕದ್ದು.
- ಸರ್ಕಾರಿ, ಸ್ಥಳೀಯ ಸಂಸ್ಥೆ, ಅನುದಾನಿತ ಸಂಸ್ಥೆ, ಸರ್ಕಾರದ ಮಾನ್ಯತೆ ಪಡೆದ ಅನುದಾನ ಸಹಿತ ಮತ್ತು ಅನುದಾನ ರಹಿತ ಖಾಸಗಿ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್.ಎಸ್.ಎಲ್.ಸಿ ನಂತರದ ವಿಕಲಚೇತನ ವಿದ್ಯಾರ್ಥಿಗಳು ಶುಲ್ಕ ಮರು ಪಾವತಿ ಪಡೆಯಲು ಅರ್ಹರಿರುತ್ತಾರೆ.
- ಯಾವ ಸಂಸ್ಥೆಗಳು ವಿಕಲಚೇತನ ವಿದ್ಯಾರ್ಥಿಗಳಿಗೆ ಶುಲ್ಕವನ್ನು ವಿಧಿಸುವುದಿಲ್ಲವೋ ಅಂತಹ ಸಂಸ್ಥೆಯ ವಿದ್ಯಾರ್ಥಿಗಳು ಶುಲ್ಕ ಮರುಪಾವತಿಗೆ ಅರ್ಹರಿರುವುದಿಲ್ಲ.
- ವಿಕಲಚೇತನ ವಿದ್ಯಾರ್ಥಿಗಳು ಹಿಂದಿನ ವರ್ಷದ ಪಬ್ಲಿಕ್ ಪರೀಕ್ಷೆಯಲ್ಲಿ ಎಲ್ಲಾ ವಿಷಯಗಳಲ್ಲಿ ಉತ್ತೀರ್ಣರಾಗದಿದ್ದಲ್ಲಿ ಮುಂದಿನ ವರ್ಷದಲ್ಲಿ ಶುಲ್ಕ ಮರುಪಾವತಿಗೆ ಅರ್ಹರಾಗುವುದಿಲ್ಲ. ಆದರೆ, ಮುಂದಿನ ಶೈಕ್ಷಣಿಕ ವರ್ಷದಲ್ಲಿ ಹಿಂದಿನ ಬಾಕಿ ವಿಷಯಗಳು ಸೇರಿದಂತೆ ಎಲ್ಲಾ ವಿಷಯಗಳಲ್ಲಿ ಉತ್ತೀರ್ಣರಾಗಿದ್ದಲ್ಲಿ ಮಾತ್ರ ನಂತರದ ವರ್ಷದಲ್ಲಿ ಶುಲ್ಕ ಮರುಪಾವತಿಗೆ, ಆ ಕೋರ್ಸ್‌ಗಳಲ್ಲಿ ಕ್ಯಾರಿ ಓವರ್ ಪದ್ಧತಿ ಜಾರಿಯಿದ್ದು ಮುಂದಿನ ತರಗತಿಗೆ/ವರ್ಷಕ್ಕೆ ಪ್ರವೇಶ ಅವಕಾಶವಿದ್ದಲ್ಲಿ ಅಂತಹವರು ಶುಲ್ಕ ಮರುಪಾವತಿಗೆ ಅರ್ಹರಿರುತ್ತಾರೆ.
- ಪರೀಕ್ಷಾ ಶುಲ್ಕವನ್ನು ವರ್ಷಕ್ಕೆ ಒಂದು ಸಲ ಮಾತ್ರ ಮರುಪಾವತಿಸಲಾಗುವುದು. ಅನುತ್ತೀರ್ಣರಾದ ಅಭ್ಯರ್ಥಿಗಳು ಹಾಗೂ ಸಪ್ಲಿಮೆಂಟರಿ ಪರೀಕ್ಷೆ ತೆಗೆದುಕೊಳ್ಳುವ ಅಭ್ಯರ್ಥಿಗಳು ಶುಲ್ಕ ಮರುಪಾವತಿಗೆ ಅರ್ಹರಾಗುವುದಿಲ್ಲ.
- ಬೇರೆ ಇಲಾಖೆ ಹಾಗೂ ಇತರೆ ಮೂಲಗಳಿಂದ ಶುಲ್ಕವನ್ನು ಪಡೆದ ವಿದ್ಯಾರ್ಥಿಗಳಿಗೆ ಈ ಯೋಜನೆಯಡಿ ಶುಲ್ಕ ಮರುಪಾವತಿಗೆ ಅವಕಾಶವಿರುವುದಿಲ್ಲ.
- ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯ ಮಿತಿ ಇರುವುದಿಲ್ಲ.
- ಕಾಲೇಜಿನ ಪ್ರಾಂಶುಪಾಲರು/ಮುಖ್ಯಸ್ಥರ ಮೂಲಕ ಕೋರಿಕೆ ಅರ್ಜಿಯನ್ನು ಅವರ ಶಿಫಾರಸ್ಸಿನೊಂದಿಗೆ ಸಲ್ಲಿಸತಕ್ಕದ್ದು.
- ಶುಲ್ಕವನ್ನು ಮರುಪಾವತಿ ಮಾಡುವ ಪ್ರಾಧಿಕಾರವು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳದ್ದಾಗಿರುತ್ತದೆ.
- ಫಲಾನುಭವಿಗಳ ಹೆಸರಿನ ಬ್ಯಾಂಕ್ ಖಾತೆಗೆ ನೇರವಾಗಿ IFSC/NEFT ಮೂಲಕ ಮರುಪಾವತಿ ಶುಲ್ಕವನ್ನು ವರ್ಗಾವಣೆ ಮಾಡತಕ್ಕದ್ದು, ಅನುಷ್ಠಾನಗೊಳಿಸಲು ಸಾಧ್ಯವಾಗದ ಪಕ್ಷದಲ್ಲಿ ಮಾತ್ರ ಇಲಾಖಾ ನಿರ್ದೇಶಕರ ಪೂರ್ವಾನುಮತಿಯೊಡನೆ ಚೆಕ್ ಮೂಲಕ ವಿತರಿಸಬಹುದು.
- ವಿದ್ಯಾರ್ಥಿಯು ವ್ಯಾಸಂಗ ಮಾಡುವ ಅವಧಿಯಲ್ಲಿ 2ನೇ ವರ್ಷದಿಂದ ನೀಡುವಾಗ ಹಿಂದಿನ ವರ್ಷದಲ್ಲಿ ಕನಿಷ್ಠ ಶೇ.80ರಷ್ಟು ಹಾಜರಾತಿ ಹೊಂದಿರಬೇಕು.
- ಯು.ಡಿ.ಐ.ಡಿ ಹೊಂದಿರಬೇಕು

### 6. ಸರ್ಕಾರಿ ಬ್ರೈಲ್ ಮುದ್ರಣಾಲಯ, ಮೈಸೂರು

ದೃಷ್ಠಿದೋಷವುಳ್ಳ ಮಕ್ಕಳ ಶಿಕ್ಷಣ, ಸಾಹಿತ್ಯದಲ್ಲಿ ತೊಡಗಿರುವ ಏಕೈಕ ಸಂಸ್ಥೆ ಮೈಸೂರಿನಲ್ಲಿರುವ ಬ್ರೈಲ್ ಮುದ್ರಣಾಲಯ. ರಾಜ್ಯದ ಎಲ್ಲಾ ದೃಷ್ಠಿದೋಷವುಳ್ಳ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಪಠ್ಯ ಪುಸ್ತಕ ಮತ್ತು ಸಾಮಗ್ರಿಗಳನ್ನು ಮುದ್ರಿಸಿ ಪೂರೈಸುವುದರ ಜೊತೆಗೆ ಮಕ್ಕಳಿಗೆ ಅಗತ್ಯವಿರುವ ಕೆಲವು ಉಪಯುಕ್ತ ಸಾಹಿತ್ಯವನ್ನು ಪ್ರಕಟಿಸುವ ಏರ್ಪಾಡು ಮಾಡಲಾಗುತ್ತಿದೆ.

ಸಾಮಾನ್ಯ/ದೃಷ್ಠಿದೋಷವುಳ್ಳ ಮಕ್ಕಳ ಶಾಲೆಗಳಲ್ಲಿ ಅಭ್ಯಾಸ ಮಾಡುವ ಮಕ್ಕಳ ತರಗತಿವಾರು ಸಂಖ್ಯೆಯನ್ನು ವ್ಯವಸ್ಥಾಪಕರು, ಬ್ರೈಲ್ ಮುದ್ರಣಾಲಯ ಇವರಿಗೆ ಸಲ್ಲಿಸಬೇಕು. ಬ್ರೈಲ್ ಮುದ್ರಣಾಲಯ ಇವರು 1 ರಿಂದ 10ನೇ ತರಗತಿವರೆಗಿನ ಪಠ್ಯ ಪುಸ್ತಕಗಳನ್ನು ಮುದ್ರಿಸಿ ಬೇಡಿಕೆ ಸಲ್ಲಿಸಿದ ಶಾಲೆಗಳಿಗೆ ಸರಬರಾಜು ಮಾಡುವರು.

### 7. ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು

ಸೆರಬ್ರಲ್ ಪಾಲ್ಸಿ, ಆಟಿಸಂ, ಮಾನಸಿಕ ಅಸ್ವಸ್ಥ ಹಾಗೂ ತೀವ್ರತರದ ಅಂಗವೈಕಲ್ಯತೆ ಹೊಂದಿರುವ ಮೂರರಿಂದ 25 ವರ್ಷದ ಒಳಗಿನ ಮಕ್ಕಳಿಗಾಗಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿದ್ದು, ಪ್ರತಿ ಕೇಂದ್ರದಲ್ಲಿ 25 ಮಕ್ಕಳನ್ನು ದಾಖಲಿಸಲು ಅವಕಾಶವಿದ್ದು, ಪ್ರತಿ ಮಗುವಿಗೆ ಮಾಸಿಕ ರೂ.15,000/-ಗಳಂತೆ 10 ತಿಂಗಳಿಗೆ ರೂ.37.50 ಲಕ್ಷಗಳನ್ನು ಮಂಜೂರು ಮಾಡಲಾಗುತ್ತಿದೆ.

1) ಅಸಿಸ್ಟೆಡ್ ಲಿವಿಂಗ್ ಫಾರ್ ಆಟಿಸ್ಟಿಕ್ ಅಡಲ್ಟ್ಸ್ (ಆಲ್ಫಾ) ಸಂಸ್ಥೆ, ನಂ.9, ಒಮೇಗಾ ಅವಿನ್ಯೂ, ಮಾತೃಶ್ರೀ ಲೇಔಟ್, ಮಾರ್ಗೋಂಡನಹಳ್ಳಿ, ಮುಖ್ಯರಸ್ತೆ, ಟಿ.ಸಿ.ಪಾಳ್ಯ, ಕೆ.ಆರ್.ಪುರಂ, ಬೆಂಗಳೂರು
2) ನವೋದಯ ಎಜುಕೇಷನ್ ಟ್ರಸ್ಟ್ (ರಿ) ನಂ.75, 7ನೇ ಕ್ರಾಸ್, ಮಾಳಗಾಳ, ರಾಮಕೃಷ್ಣ ಲೇಔಟ್, ನಾಗರಬಾವಿ 2ನೇ ಹಂತ, ಬೆಂಗಳೂರು.

### 8. ಶ್ರವಣದೋಷವುಳ್ಳ ಮಕ್ಕಳ ಹಾಗೂ ತಾಯಂದಿರ ತರಬೇತಿ ಕೇಂದ್ರ

| ಕ್ರ.ಸಂ | ವಿಭಾಗಗಳು | ಜಿಲ್ಲೆಗಳ ಹೆಸರು | ಸಂಸ್ಥೆಯ ಹೆಸರು/ವಿಳಾಸ |
|---|---|---|---|
| 1 | ಬೆಂಗಳೂರು | ಬೆಂಗಳೂರು ನಗರ | ಡಾ.ಎಸ್.ಆರ್ ಚಂದ್ರಶೇಖರ್ ವಾಕ್ ಶ್ರವಣ ಸಂಸ್ಥೆ, ಲಿಂಗರಾಜಪುರಂ ಬೆಂಗಳೂರು |
| | | ತುಮಕೂರು | ಹೆಲನ್ ಕೆಲರ್ ಸಮನ್ವಯ ಶಿಕ್ಷಣ ಸಂಸ್ಥೆ (ರಿ) ಹೆಲನ್ ಕೆಲರ್ ವಾಕ & ಶ್ರವಣ ದೋಷವುಳ್ಳ ಮಕ್ಕಳ ವಸತಿ ರಹಿತ ಶಾಲೆ, ಜಯನಗ ಪೂರ್ವ ತುಮಕೂರು |
| 2 | ಮೈಸೂರು | ಮೈಸೂರು | ಶ್ರೀ ಮಾತೃಶ್ರೀ ವಿದ್ಯಾ ಶಿಕ್ಷಣ ಸಂಸ್ಥೆ (ರಿ), ಮೈಸೂರು. |
| 3 | ಕಲಬುರ್ಗಿ | ಕಲಬುರ್ಗಿ | ದಲಿತ ವಿದ್ಯಾ ಸಂಸ್ಥೆ (ರಿ), ಗುಲಬರ್ಗಾ ನಗರಾಭಿವೃದ್ಧಿ ಪ್ರಾಧಿಕಾ ಸರ್ವೆ ನಂ.12/13 ರಾಜಾಪೂರ ಬಡೇಪೂರ, ಸಿ.ಎ 1, ಶಹಾಬಾ ರಸ್ತೆ, ಕಲಬುರ್ಗಿ |

0–4 ವರ್ಷದೊಳಗಿನ ಶ್ರವಣದೋಷವುಳ್ಳ ಮಕ್ಕಳ ತಾಯಂದಿರಿಗೆ ಪ್ರಾರಂಭಿಕ ಹಂತದಲ್ಲಿಯೇ ಅವರ ಮಗುವಿನ ಸಮಸ್ಯೆ ಮತ್ತು ಪರಿಹಾರದ ಬಗ್ಗೆ ಅರಿವು ಮೂಡಿಸಲು ತರಬೇತಿ ನೀಡುವ ಅವಶ್ಯಕತೆ ಇರುವುದರಿಂದ ನಾಲ್ಕು ವರ್ಷದೊಳಗಿನ ಶ್ರವಣದೋಷವುಳ್ಳ ಮಕ್ಕಳಿಗೆ ಅವರ ತಾಯಂದಿರ ಸಹಿತ ವಾಕ್

ತರಬೇತಿ ಕೇಂದ್ರವನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಪ್ರತಿ ಕಂದಾಯ ವಿಭಾಗದಲ್ಲಿ 02 ರಂತೆ ಒಟ್ಟು 08 ಕೇಂದ್ರಗಳನ್ನು ಪ್ರಾರಂಭಿಸಲು ಅವಕಾಶವಿರುತ್ತದೆ.

ಪ್ರಸ್ತುತ ಈ ಕೆಳಕಂಡ ಜಿಲ್ಲೆಗಳಲ್ಲಿ ತಲಾ ಒಂದರಂತೆ 04 ಶ್ರವಣದೋಷ ಮಕ್ಕಳ ಮತ್ತು ತಾಯಂದಿರ ತರಬೇತಿ ಕೇಂದ್ರಗಳನ್ನು ಪ್ರಾರಂಭಿಸಲಾಗಿರುತ್ತದೆ.

**(ಬಿ) ಉದ್ಯೋಗ ಮತ್ತು ತರಬೇತಿಗೆ ಸಂಬಂಧಿಸಿದ ಯೋಜನೆಗಳು:**

**1. ವಿಕಲಚೇತನ ಪುರುಷರ ಹಾಗೂ ಮಹಿಳೆಯರ ಸರ್ಕಾರಿ ವಸತಿನಿಲಯಗಳು – 02**

ವಿಕಲಚೇತನ ಮಹಿಳೆಯರು ಹಾಗೂ ಪುರುಷ ಉದ್ಯೋಗಸ್ಥ ನೌಕರರು ಮತ್ತು ಪ್ರಶಿಕ್ಷಣಾರ್ಥಿಗಳಿಗಾಗಿ ಪ್ರತ್ಯೇಕವಾದ 02 ವಸತಿ ನಿಲಯಗಳನ್ನು ಸರ್ಕಾರದಿಂದ ಬೆಂಗಳೂರಿನ ಕೆಂಗೇರಿಯಲ್ಲಿ ನಡೆಸಲಾಗುತ್ತಿದೆ. ಪ್ರತಿ ವಸತಿ ನಿಲಯದಲ್ಲಿ **50** ನಿವಾಸಿಗಳನ್ನು ದಾಖಲಿಸಲು ಅವಕಾಶವಿರುತ್ತದೆ.

ವಿವರಗಳು:

- ಸದರಿ ವಸತಿ ನಿಲಯದಲ್ಲಿ ಇರಲಿಚ್ಛಿಸುವ ಫಲಾನುಭವಿಗಳು ತಮ್ಮ ಆದಾಯದಲ್ಲಿನ ಶೇ.5%ರಷ್ಟನ್ನು ಸರ್ಕಾರಕ್ಕೆ ಬಾಡಿಗೆ ರೂಪದಲ್ಲಿ ಪಾವತಿಸಬೇಕಾಗಿರುತ್ತದೆ.
- ಊಟದ ವ್ಯವಸ್ಥೆಗೆ ಸಂಬಂಧಿಸಿದಂತೆ ಪ್ರತಿ ತಿಂಗಳು ಬರುವ ಒಟ್ಟು ಖರ್ಚಿನ ಬಾಬ್ತನ್ನು ಇರುವ ಫಲಾನುಭವಿಗಳು ಸ್ವತಃ (Sharing System ರೂಪದಲ್ಲಿ) ಭರಿಸಬೇಕಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಅಧೀಕ್ಷಕರನ್ನು ಹಾಗೂ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆ, ಬೆಂಗಳೂರು ನಗರ ಜಿಲ್ಲೆ, ಇವರುಗಳನ್ನು ಸಂಪರ್ಕಿಸಬಹುದಾಗಿದೆ.

**2. ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ವಸತಿ ನಿಲಯಗಳು–25**

ವಿಕಲಚೇತನ ಉದ್ಯೋಗಸ್ಥ ಮಹಿಳೆಯರು ಹಾಗೂ ವಿದ್ಯಾರ್ಥಿನಿ/ತರಬೇತಿದಾರರಿಗೆ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 22 ಜಿಲ್ಲೆಗಳಲ್ಲಿ (ಬೆಂಗಳೂರು ನಗರ ಜಿಲ್ಲೆಯಲ್ಲಿ 04 ವಸತಿ ನಿಲಯಗಳು ಸೇರಿದಂತೆ) 25 ಮಹಿಳಾ ವಸತಿ ನಿಲಯಗಳನ್ನು ನಡೆಸಲಾಗುತ್ತಿದೆ. ಈ ವಸತಿನಿಲಯಗಳ ನಿರ್ವಹಣೆಗಾಗಿ ರಾಜ್ಯ ಸರ್ಕಾರದಿಂದ ಅನುದಾನವನ್ನು ಬಿಡುಗಡೆ ಮಾಡಲಾಗುತ್ತದೆ. .

**ಯೋಜನೆಯ ವಿವರ:**

1. ಈ ವಸತಿ ನಿಲಯಗಳಲ್ಲಿ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ ಅಂಗವಿಕಲ ಉದ್ಯೋಗಸ್ಥ ಮಹಿಳೆಯರು/ವೃತ್ತಿಪರ ತರಬೇತಿ ಪಡೆಯುತ್ತಿರುವ ಮಹಿಳೆಯರಿಗೆ ಮಾತ್ರ ಊಟ ಮತ್ತು ವಸತಿ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ.
2. ಉದ್ಯೋಗಸ್ಥ ಮಹಿಳೆಯರು ಈ ವಸತಿ ನಿಲಯದಲ್ಲಿ ಪ್ರವೇಶ ಪಡೆದಲ್ಲಿ ಊಟದ ವೆಚ್ಚವಾಗಿ ಮಾಹೆಯಾನ ರೂ. 600/–ಗಳನ್ನು ಮಾತ್ರ ಪಾವತಿಸಬೇಕಾಗಿರುತ್ತದೆ.

3. ಈ ವಸತಿ ನಿಲಯದಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿನಿಯರು ಇತರೆ ಯಾವುದೇ ತರಹದ ಶಿಷ್ಯವೇತನವನ್ನು ಪಡೆಯಲು ಅರ್ಹರಿರುವುದಿಲ್ಲ. (ಪ್ರತಿಭಾನ್ವಿತ ಶಿಷ್ಯ ವೇತನ ಹೊರತುಪಡಿಸಿ)

**(ಸಿ)ಆರ್ಥಿಕ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳು:**

**1. ಸಮಾಜ ಸೇವಾ ಸಂಕೀರ್ಣ –01:**

ನಿರ್ಗತಿಕ ಬುದ್ಧಿಮಾಂದ್ಯ ಪುರುಷರಿಗಾಗಿ ಸಮಾಜ ಸೇವಾ ಸಂಕೀರ್ಣ ಸಂಸ್ಥೆಯು ಬೆಂಗಳೂರಿನಲ್ಲಿ ಸರ್ಕಾರದ ವತಿಯಿಂದ ನಡೆಯುತ್ತಿದ್ದು, ಈ ಸಂಸ್ಥೆಯಲ್ಲಿ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ, ಸಂರಕ್ಷಣೆ ಒದಗಿಸಲಾಗುತ್ತಿದೆ. ಈ ಕೇಂದ್ರದಲ್ಲಿ ಗರಿಷ್ಠ 40 ನಿವಾಸಿಗಳಿಗೆ ಪುನರ್ವಸತಿ ಕಲ್ಪಿಸಲು ಅವಕಾಶವಿದ್ದು, ಪ್ರಸ್ತುತ 77 ನಿವಾಸಿಗಳು ಇದ್ದಾರೆ.

**ಅರ್ಹತೆಗಳು**

1. 18 ವರ್ಷಕ್ಕಿಂತ ಮೇಲ್ಪಟ್ಟ ಪೋಷಕರಿಲ್ಲದ ಪುರುಷ ಬುದ್ಧಿಮಾಂದ್ಯ ವ್ಯಕ್ತಿಗಳನ್ನು ದಾಖಲು ಮಾಡಿಕೊಳ್ಳಲಾಗುವುದು.
2. ಸದರಿ ವ್ಯಕ್ತಿಗಳು ನಿಮ್ಹಾನ್ಸ ಅಥವಾ ತತ್ಸಮಾನ ಸಂಸ್ಥೆಗಳಿಂದ ಬುದ್ಧಿಮಾಂದ್ಯತೆ ಬಗ್ಗೆ ದೃಢೀಕರಣ ಪತ್ರ ಹೊಂದಿರಬೇಕು.
3. ನ್ಯಾಯಾಲಯದ ಆದೇಶದ ಮೇರೆಗೆ ಬರುವಂತಹ ಬುದ್ಧಿಮಾಂದ್ಯ ವ್ಯಕ್ತಿಗಳನ್ನು ದಾಖಲಿಸಿಕೊಳ್ಳಲಾಗುವುದು.
4. ಇತರೆ ಸರ್ಕಾರಿ ಸಂಸ್ಥೆಗಳಿಂದ ವರ್ಗಾವಣೆ ಆದಂತಹ ವ್ಯಕ್ತಿಗಳನ್ನು ಸಹ ದಾಖಲಿಸಿಕೊಳ್ಳಲಾಗುವುದು.

**2. ಮಂದಮತಿ ಮಹಿಳೆಯರ ಅನುಪಾಲನಾ ಗೃಹ –02:**

18 ವರ್ಷ ಮೇಲ್ಪಟ್ಟ ನಿರ್ಗತಿಕ ಮಹಿಳಾ ಬುದ್ಧಿಮಾಂದ್ಯರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ ಮತ್ತು ಸಂರಕ್ಷಣೆ ಒದಗಿಸುವ ಉದ್ದೇಶದಿಂದ ಮಂದಮತಿ ಮಹಿಳೆಯರ ಅನುಪಾಲನಾ ಗೃಹಗಳನ್ನು **ಬೆಂಗಳೂರು ನಗರ ಹಾಗೂ ಹುಬ್ಬಳ್ಳಿಯಲ್ಲಿ** ಇಲಾಖಾವತಿಯಿಂದ ನಡೆಸಲಾಗುತ್ತಿದೆ. ಬೆಂಗಳೂರಿನಲ್ಲಿ ಗರಿಷ್ಠ 100 ನಿವಾಸಿಗಳನ್ನು ದಾಖಲಿಸಲು ಅವಕಾಶವಿದ್ದು, 101 ನಿವಾಸಿಗಳಿರುತ್ತಾರೆ ಹಾಗೂ ಹುಬ್ಬಳ್ಳಿಯಲ್ಲಿ ಗರಿಷ್ಠ 50 ನಿವಾಸಿಗಳನ್ನು ದಾಖಲಿಸಲು ಅವಕಾಶವಿದ್ದು, 75 ನಿವಾಸಿಗಳು ಇರುತ್ತಾರೆ.

**ಅರ್ಹತೆಗಳು**

1. 18 ವರ್ಷಕ್ಕಿಂತ ಮೇಲ್ಪಟ್ಟ ಪೋಷಕರಿಲ್ಲದ ಬುದ್ಧಿಮಾಂದ್ಯ ಮಹಿಳೆಯರನ್ನು ದಾಖಲು ಮಾಡಿಕೊಳ್ಳಲಾಗುವುದು.
2. ಸದರಿ ವ್ಯಕ್ತಿಗಳು ನಿಮ್ಹಾನ್ಸ ಅಥವಾ ತತ್ಸಮಾನ ಸಂಸ್ಥೆಗಳಿಂದ ಬುದ್ಧಿಮಾಂದ್ಯತೆ ಬಗ್ಗೆ ದೃಢೀಕರಣ ಪತ್ರ ಹೊಂದಿರಬೇಕು.
3. ನ್ಯಾಯಾಲಯದ ಆದೇಶದ ಮೇರೆಗೆ ಬರುವಂತಹ ಬುದ್ಧಿಮಾಂದ್ಯ ವ್ಯಕ್ತಿಗಳನ್ನು ದಾಖಲಿಸಿಕೊಳ್ಳಲಾಗುವುದು.
4. ಇತರೆ ಸರ್ಕಾರಿ ಸಂಸ್ಥೆಗಳಿಂದ ವರ್ಗಾವಣೆ ಆದಂತಹ ಮಹಿಳೆಯರನ್ನು ಸಹ ದಾಖಲಿಸಿ ಕೊಳ್ಳಲಾಗುವುದು.

3. ಮಾನಸಿಕ ಅಸ್ವಸ್ಥರಿಗೆ ಮಾನಸ ಕೇಂದ್ರಗಳು (ಅಲ್ಪಾವಧಿ ಕೇಂದ್ರಗಳು)

ಮಾನಸಿಕ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದು ಗುಣಮುಖರಾದ ಮಾನಸಿಕ ಅಸ್ವಸ್ಥರು ಸಮಾಜದ ಮುಖ್ಯವಾಹಿನಿಯಲ್ಲಿ ಸೇರ್ಪಡೆಗೊಳ್ಳುವ ಮುನ್ನ ಅವರಿಗೆ ತರಬೇತಿ ಹಾಗೂ ಆಪ್ತ ಸಮಾಲೋಚನೆ ನೀಡಿ ಪುನರ್ವಸತಿ ಕಲ್ಪಿಸುವ ಉದ್ದೇಶದಿಂದ ಅಲ್ಪಾವಧಿ ಕೇಂದ್ರಗಳನ್ನು ಬೆಂಗಳೂರು ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ನಡೆಸುತ್ತಿದ್ದು, ರಾಜ್ಯ ಉಚ್ಚ ನ್ಯಾಯಾಲಯ ಮತ್ತು ಅಧೀನ ನ್ಯಾಯಾಲಯಗಳಿಂದ ಆದೇಶಿಸಲ್ಪಡುವ ಮಾನಸಿಕ ಅಸ್ವಸ್ಥರನ್ನು ಹಾಗೂ ರಸ್ತೆಗಳಲ್ಲಿ ಓಡಾಡುವ ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಈ ಕೇಂದ್ರಗಳಲ್ಲಿ ನಿರ್ದಿಷ್ಟ ವೈದ್ಯಕೀಯ ಪ್ರಾಧಿಕಾರದ ಆದೇಶದ ಮೇರೆಗೆ ದಾಖಲಿಸಲು ಅವಕಾಶವಿರುತ್ತದೆ. ಈ ಕೇಂದ್ರಗಳಲ್ಲಿ ಫಲಾನುಭವಿಗಳಿಗೆ ಉಚಿತ ಊಟ, ವಸತಿ, ವೈದ್ಯಕೀಯ ಶುಶ್ರೂಷೆ, ವೈದ್ಯಕೀಯ ಸಲಹೆ(ಕೌನ್ಸಲಿಂಗ್) ಸೌಲಭ್ಯವನ್ನು ನೀಡಲಾಗುತ್ತಿದ್ದು, ಇವು ಅಲ್ಪಾವಧಿ ತಾಣಗಳಾಗಿರುತ್ತವೆ.

ಉದ್ದೇಶ:

ರಾಜ್ಯದಲ್ಲಿ 2011ರ ಜನಗಣತಿಯ ಪ್ರಕಾರ 20,913 ಜನ ಮಾನಸಿಕ ಅಸ್ವಸ್ಥರು ಇರುತ್ತಾರೆ. ಮಾನಸಿಕ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದು ಗುಣಮುಖರಾದ ಮಾನಸಿಕ ಅಸ್ವಸ್ಥರು ಸಮಾಜದ ಮುಖವಾಹಿನಿಯಲ್ಲಿ ಸೇರ್ಪಡೆಗೊಳುವ ಮುನ್ನ ಅವರಿಗೆ ತರಬೇತಿ ಹಾಗೂ ಆಪ್ತ ಸಮಾಲೋಚನೆ ನೀಡಿ ಪುನರ್ವಸತಿ ಕಲ್ಪಿಸುವ ಉದ್ದೇಶದಿಂದ ಅಲ್ಪಾವಧಿ ಕೇಂದ್ರಗಳನ್ನು ಬೆಂಗಳೂರು ಹಾಗೂ ಬೆಳಗಾವಿಗಳಲ್ಲಿ ಪ್ರಾರಂಭಿಸಲಾಗಿದೆ.

**ಯೋಜನೆಯ ಸಂಕ್ಷಿಪ್ತ ಮಾಹಿತಿ:**

1. ಮಾನಸ ಕೇಂದ್ರದಲ್ಲಿ ಮಾನಸಿಕ ಅಸ್ವಸ್ಥರಿಗೆ ಅವಶ್ಯಕವಾಗಿ ಬೇಕಾಗಿರುವ ಆರೋಗ್ಯ, ಪೋಷಣೆ ಮತ್ತು ಆಶ್ರಯವನ್ನು ಒದಗಿಸುವುದು.
2. ಈ ಮಾನಸ ಕೇಂದ್ರಗಳಲ್ಲಿ ಮಹಿಳೆಯರಿಗೆ ಆದ್ಯತೆ ನೀಡಲಾಗುವುದು.
3. ಈ ಮಾನಸ ಕೇಂದ್ರಗಳ ಮಾನಸಿಕ ಅಸ್ವಸ್ಥರಿಗೆ ಖಾಯಂ ನೆಲಸುವ ಕೇಂದ್ರಗಳಾಗಿರದೇ, ಅಲ್ಪಾವಧಿ ತಾಣಗಳಾಗಿರುತ್ತವೆ. ಪೋಷಕರ ವಿಳಾಸ ತಿಳಿಯದ ಮಾನಸಿಕ ಅಸ್ವಸ್ಥರನ್ನು ಕೇಂದ್ರಕ್ಕೆ ಸೇರಿಸಿಕೊಂಡು ಪೋಷಕರನ್ನು ಗುರುತಿಸಲು ಕ್ರಮ ಕೈಗೊಂಡು ಫಲಾನುಭವಿಗಳನ್ನು ಪೋಷಕರಿಗೆ ಒಪ್ಪಿಸುವ ಕ್ರಮ ತೆಗೆದುಕೊಳ್ಳಲಾಗುವುದು.
4. ಮಾನಸ ಕೇಂದ್ರದಲ್ಲಿ ಮಾನಸಿಕ ಅಸ್ವಸ್ಥರಿಗೆ ಬೇಕಾಗುವ ಔಷಧಗಳನ್ನು ಜಿಲ್ಲಾ/ತಾಲ್ಲೂಕು ಆಸ್ಪತ್ರೆಗಳಿಂದ ಉಚಿತವಾಗಿ ಪಡೆದು ಸರಬರಾಜು ಮಾಡಲಾಗುವುದು.

**ಫಲಾನುಭವಿಗಳ ಆಯ್ಕೆ:**

1. ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ 2016ರಲ್ಲಿ ತಿಳಿಸಿರುವ ವ್ಯಾಖ್ಯಾನಕ್ಕೆ ಒಳಪಟ್ಟವರು.
2. ಫಲಾನುಭವಿಯು ಮಾನಸಿಕ ಅಸ್ವಸ್ಥರಾಗಿದ್ದು ಅವರ ಅಂಗವಿಕಲತೆಯು ಕನಿಷ್ಠ ಶೇಕಡ 40 ರಷ್ಟು ಇರತಕ್ಕದ್ದು.
3. ಫಲಾನುಭವಿಯ ಕುಟುಂಬದ ವಾರ್ಷಿಕ ಆದಾಯ ನಗರ ಪ್ರದೇಶಗಳಲ್ಲಿ 24,000 ಮತ್ತು ಗ್ರಾಮೀಣ ಪ್ರದೇಶದಲ್ಲಿ 11,500 ರೂ. ಕಡಿಮೆ ಇರತಕ್ಕದ್ದು.
4. ರಸ್ತೆಗಳಲ್ಲಿ ಓಡಾಡುವ (Wandering) ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಈ ಕೇಂದ್ರಗಳಿಗೆ ಸೇರಿಸಿಕೊಳ್ಳಲಾಗುವುದು.
5. ರಾಜ್ಯ ಉಚ್ಚ ನ್ಯಾಯಾಲಯದ ಮತ್ತು ಅಧೀನ ನ್ಯಾಯಾಲಯಗಳು ಆದೇಶಿಸುವ ಫಲಾನುಭವಿಗಳನ್ನು ಸಹ ಈ ಕೇಂದ್ರಗಳಿಗೆ ಸೇರಿಸಿಕೊಳ್ಳಲಾಗುವುದು.

## 4. ಬುದ್ಧಿಮಾಂದ್ಯ ಮಕ್ಕಳ ಪೋಷಕರಿಗೆ ವಿಮಾ ಯೋಜನೆ:

**ಉದ್ದೇಶ:**

ಬುದ್ಧಿಮಾಂದ್ಯ ವ್ಯಕ್ತಿಗಳ ತಂದೆ/ತಾಯಿ/ಪೋಷಕರ ಹೆಸರಲ್ಲಿ, ಭಾರತೀಯ ಜೀವ ವಿಮಾ ನಿಗಮಕ್ಕೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯದಿಂದ ವಾರ್ಷಿಕ ವಿಮಾ ಕಂತನ್ನು ಪಾವತಿ ಮಾಡಿ ವಿಮಾ ಸೌಲಭ್ಯವನ್ನು ಒದಗಿಸಲಾಗುತ್ತದೆ.

ಬುದ್ಧಿಮಾಂದ್ಯ ವ್ಯಕ್ತಿಗಳ ತಂದೆ/ತಾಯಿ/ಪೋಷಕರ ನಿಧನದ ಹೊಂದಿದ ಪಕ್ಷದಲ್ಲಿ ಬುದ್ಧಿಮಾಂದ್ಯ ವ್ಯಕ್ತಿಗಳ ಪೋಷಣೆಗಾಗಿ ಜೀವವಿಮಾ ನಿಗಮದಿಂದ ನಾಮನಿರ್ದೇಶಿತರಿಗೆ ತಲಾ 20,000/- ರಂತೆ ವಿಮಾ ಹಣ ದೊರೆಯುತ್ತದೆ.

ದಿನಾಂಕ:28-08-2006ರ ಸರ್ಕಾರದ ಆದೇಶದಲ್ಲಿ ಒಂದೇ ಕುಟುಂಬದಲ್ಲಿ ಒಂದಕ್ಕಿಂತ ಹೆಚ್ಚು ಮಕ್ಕಳು ಬುದ್ಧಿಮಾಂದ್ಯರಾಗಿದ್ದಲ್ಲಿ ಗರಿಷ್ಠ ಎರಡು ಬುದ್ಧಿಮಾಂದ್ಯ ಮಕ್ಕಳಿಗೆ ವಿಮಾ ಸೌಲಭ್ಯ ನೀಡಲು ಅವಕಾಶವಿರುತ್ತದೆ. ಪೋಷಕರು (ವಿಮಾದಾರರು) ಮರಣ ಹೊಂದಿದ ಪಕ್ಷದಲ್ಲಿ ನಾಮ ನಿರ್ದೇಶಿತರಿಗೆ ರೂ.20,000/-ಗಳ ವಿಮಾ ಹಣವನ್ನು ನೀಡಲಾಗುವುದು.

**ಅರ್ಹತೆ/ಷರತ್ತು/ನಿಯಮಗಳು:**

- ಬುದ್ಧಿಮಾಂದ್ಯ ವ್ಯಕ್ತಿಗಳ ತಂದೆ/ತಾಯಿ/ಪೋಷಕರು 18 ರಿಂದ 60 ವರ್ಷವರೆಗಿನ ವಯೋಮಿತಿಯವರಾಗಿರಬೇಕು.
- ಕುಟುಂಬದ ವಾರ್ಷಿಕ ವರಮಾನ ಗ್ರಾಮೀಣ ಪ್ರದೇಶದಲ್ಲಿ ರೂ 11,500/- ಮತ್ತು ನಗರ ಪ್ರದೇಶಗಳಲ್ಲಿ ರೂ 24,000/-ಗಳನ್ನು ಮೀರಿರಬಾರದು.
- ಬುದ್ಧಿಮಾಂದ್ಯತೆ ಬಗ್ಗೆ ತಜ್ಞ ವೈದ್ಯಾಧಿಕಾರಿಗಳಿಂದ ಯು.ಡಿ.ಐ.ಡಿ ಹೊಂದಿರಬೇಕು.
- ಬುದ್ಧಿಮಾಂದ್ಯ ವ್ಯಕ್ತಿಗಳ ತಂದೆ/ತಾಯಿ/ಪೋಷಕರಿಗೆ ರೂ.20,000/-ಗಳಿಗೆ ವಿಮೆ ಮಾಡಿಸಲಾಗುವುದು.
- ವಿಮಾ ಮೊತ್ತವು ಬುದ್ಧಿಮಾಂದ್ಯ ವ್ಯಕ್ತಿಗಳ ತಂದೆ/ತಾಯಿ/ಪೋಷಕರ ನಿಧನದ ನಂತರ ಬುದ್ಧಿಮಾಂದ್ಯ ವ್ಯಕ್ತಿಗಳಿಗೆ ನಾಮನಿರ್ದೇಶಿತರಿಗೆ ಜೀವ ವಿಮಾ ನಿಗಮವು ಹಣವನ್ನು ಪಾವತಿ ಮಾಡುತ್ತದೆ.

**ದಾಖಲೆಗಳು:**

ವಿಮೆಗೆ ಒಳಪಡುವ ಅಭ್ಯರ್ಥಿಯ ವಯಸ್ಸು, ಪೋಷಕರ ವಯಸ್ಸು, ಕುಟುಂಬದ ಆದಾಯ ಪ್ರಮಾಣ ಪತ್ರ, ಬುದ್ಧಿಮಾಂದ್ಯತೆಯ ವಿಶಿಷ್ಟ ಗುರುತಿನ ಚೀಟಿ, ನಾಮ ನಿರ್ದೇಶನ ಹಾಗೂ ಸಂಬಂಧಪಟ್ಟ ಪ್ರಮಾಣ ಪತ್ರಗಳೊಂದಿಗೆ ಅರ್ಜಿನಮೂನೆಯನ್ನು ದ್ವಿಪ್ರತಿಗಳಲ್ಲಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸಲ್ಲಿಸತಕ್ಕದ್ದು.

### 1. ವಿಕಲಚೇತನ ವ್ಯಕ್ತಿಗಳನ್ನು ಸಾಮಾನ್ಯರು ಮದುವೆಯಾದಲ್ಲಿ ಪ್ರೋತ್ಸಾಹ ಧನ ನೀಡುವ ಯೋಜನೆ:

ವಿಕಲಚೇತನ ಯುವಕ/ಯುವತಿಯರನ್ನು ವಿವಾಹವಾಗುವ ಸಾಮಾನ್ಯ ಯುವಕ/ ಯುವತಿಯರಿಗೆ ನಿರಂತರವಾಗಿ ಮಾಸಿಕ ಆದಾಯ ದೊರಕಿಸಲು ವಿಕಲಚೇತನ ವ್ಯಕ್ತಿಯ ಹೆಸರಿನಲ್ಲಿ ರೂ.50,000/-ಗಳನ್ನು ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ 05 ವರ್ಷಗಳ ಅವಧಿಗೆ ನಿಶ್ಚಿತ ಠೇವಣಿ ಇಡಲಾಗುವುದು. ಅದರಿಂದ ಬರುವ ಬಡ್ಡಿ ಹಣವನ್ನು ಜೀವನ ನಿರ್ವಹಣೆಗೆ ಉಪಯೋಗಿಸುವುದು. 05 ವರ್ಷಗಳ ನಂತರ ಠೇವಣಿ ಮೊತ್ತವನ್ನು

ವಾಪಸ್ಸು ಪಡೆಯಬಹುದು ಅಥವಾ ಮುಂದುವರಿಸಬಹುದು. ಈ ಯೋಜನೆಯು ದಿ:29-08-2013ರಿಂದ ಜಾರಿಗೆ ಬಂದಿರುತ್ತದೆ.

**ಯೋಜನೆಯ ಉದ್ದೇಶ.**

- ಸಾಮಾನ್ಯ ವ್ಯಕ್ತಿಗಳು ವಿಕಲಚೇತನ ವ್ಯಕ್ತಿಗಳನ್ನು ವಿವಾಹವಾಗಲು ಪ್ರೋತ್ಸಾಹಿಸುವುದು.
- ಸಾಮಾನ್ಯ ವ್ಯಕ್ತಿಗಳು ವಿಕಲಚೇತನ ವ್ಯಕ್ತಿಗಳು ಮದುವೆಯಾದಲ್ಲಿ ವಿಕಲಚೇತನರು ಸಹ ಸಾಮಾನ್ಯರಂತೆ ವೈವಾಹಿಕ ಜೀವನ ಸಾಗಿಸಲು ಸಾಧ್ಯವಾಗುತ್ತದೆ.

**ಷರತ್ತುಗಳು**

- ವಿಕಲಚೇತನ ವ್ಯಕ್ತಿಗಳೊಡನೆ ವಿವಾಹವಾಗುವ ಸಾಮಾನ್ಯ ವ್ಯಕ್ತಿಗಳಿಗೆ ಯಾವುದೇ ಆದಾಯ ಮಿತಿ ಇರುವುದಿಲ್ಲ.
- ವಿವಾಹವಾಗುವ ಯುವತಿಯರ ವಯಸ್ಸು 18 ಹಾಗೂ ಯುವಕರ ವಯಸ್ಸು 21 ವರ್ಷಕ್ಕಿಂತ ಮೇಲ್ಪಟ್ಟಿರಬೇಕು.
- ಈ ಯೋಜನೆಯಡಿ ಸೌಲಭ್ಯ ಪಡೆಯುವ ವಿಕಲಚೇತನ ವ್ಯಕ್ತಿಗಳು/ಸಾಮಾನ್ಯ ವ್ಯಕ್ತಿಗಳು 2ನೇ ಮದುವೆ ಮಾಡಿಕೊಂಡಲ್ಲಿ ಈ ಸೌಲಭ್ಯ ಪಡೆಯಲು ಅರ್ಹರಿರುವುದಿಲ್ಲ.
- ನೀಡಲಾಗುವ ಧನಸಹಾಯವನ್ನು ಐದು ವರ್ಷಗಳ ಅವಧಿಗೆ ಬ್ಯಾಂಕಿನಲ್ಲಿ ಠೇವಣಿ ರೂಪದಲ್ಲಿ ಇಡತಕ್ಕದ್ದು. ಹಾಗೂ ಈ ಠೇವಣಿಯಿಂದ ಬಂದ ಬಡ್ಡಿ ಹಣವನ್ನು ಅವರ ಜೀವನ ನಿರ್ವಹಣೆಗೆ ಉಪಯೋಗಿಸತಕ್ಕದ್ದು. 5 ವರ್ಷದ ನಂತರ ಪೂರ್ಣ ಹಣ ಪಡೆಯಬಹುದು ಅಥವಾ ಮುಂದುವರೆಸುವುದು ಫಲಾನುಭವಿಯ ಇಚ್ಛೆಗೆ ಒಳಪಟ್ಟಿದೆ.
- ವಿಕಲಚೇತನ ಯುವಕ/ಯುವತಿಯರ ವಿಕಲಚೇತನತೆಯ ಪ್ರಮಾಣ ಶೇ.40%ಕ್ಕಿಂತ ಹೆಚ್ಚಾಗಿರತಕ್ಕದ್ದು.
- ವಿವಾಹವಾಗುವ ಯುವಕ/ಯುವತಿಯರು ಕಡ್ಡಾಯವಾಗಿ ಸಂಬಂಧಪಟ್ಟವರಿಂದ ಪಡೆದ ವಾಸಸ್ಥಳ ದೃಢೀಕರಣ ಪತ್ರ ನೀಡತಕ್ಕದ್ದು.
- ವಿವಾಹವನ್ನು ವಿವಾಹ ನೊಂದಣಾಧಿಕಾರಿಗಳ ಕಛೇರಿಯಲ್ಲಿ ಕಡ್ಡಾಯವಾಗಿ ನೊಂದಾಯಿಸತಕ್ಕದ್ದು.
- ಪ್ರೋತ್ಸಾಹ ಧನವನ್ನು ಮಂಜೂರು ಮಾಡುವ ಪ್ರಾಧಿಕಾರವು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳದ್ದಾಗಿರುತ್ತದೆ.

2. **ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಭತ್ಯೆ ಒದಗಿಸುವ ಯೋಜನೆ :**

ಅಂಧ ಮಹಿಳೆಯರು ಮಗುವಿಗೆ ಜನ್ಮ ನೀಡಿದಾಗ ಆ ಮಗುವನ್ನು ಇತರೆ ಸಾಮಾನ್ಯ ತಾಯಂದಿರಂತೆ ಆರೈಕೆ ಮಾಡುವುದು ಕಷ್ಟಕರವಾಗಿರುತ್ತದೆ. ಇಂತಹ ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಮಾಡಲು ಆಯಾ ಸೇವೆ, ಆರೋಗ್ಯ ಪಾಲನೆ, ಪೌಷ್ಠಿಕ ಆಹಾರ, ಔಷಧೋಪಚಾರಗಳಿಗೆ **ಮಾಹೆಯಾನ ರೂ.2000/-ಗಳಂತೆ 05 ವರ್ಷಗಳ ಅವಧಿಗೆ** ಆರೈಕೆ ಭತ್ಯೆಯನ್ನು ನೀಡಲಾಗುತ್ತಿದೆ. ಈ ಸೌಲಭ್ಯವನ್ನು ಕನಿಷ್ಠ 02 ಮಕ್ಕಳವರೆಗೆ ಪಡೆಯಬಹುದಾಗಿದೆ.

ಈ ಮೊದಲು 02 ವರ್ಷಗಳ ಅವಧಿಗೆ ನೀಡುತ್ತಿದ್ದು, ಸರ್ಕಾರದ ದಿನಾಂಕ:16.10.2020ರ ಸರ್ಕಾರದ ಆದೇಶದನ್ವಯ 05 ವರ್ಷಗಳ ಅವಧಿಗೆ ವಿಸ್ತರಿಸಲಾಗಿದೆ.

**ಅರ್ಹತೆ/ಷರತ್ತುಗಳು:**

- ಅಂಥ ಮಹಿಳೆಯು ಭಾರತದ ಪ್ರಜೆಯಾಗಿರಬೇಕು. ಅರ್ಜಿ ಸಲ್ಲಿಸಿದ ದಿನಾಂಕಕ್ಕೆ ಕನಿಷ್ಠ 6 ವರ್ಷಗಳು ಕರ್ನಾಟಕದಲ್ಲಿ ವಾಸವಾಗಿರಬೇಕು.
- ಅಂಥ ಮಹಿಳೆಯ ವಯಸ್ಸು ಕನಿಷ್ಠ 18 ವರ್ಷಕ್ಕಿಂತ ಹೆಚ್ಚಾಗಿರಬೇಕು.
- ಕಂದಾಯ ಇಲಾಖೆಯಿಂದ ಪಡೆಯಲಾದ ಆದಾಯ ಪ್ರಮಾಣಪತ್ರವನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು. ಅವರುಗಳ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷಗಳ ಒಳಗಿರಬೇಕು.
- ಶಿಶು ಪಾಲನಾ ಭತ್ಯೆಯು 2 ಮಕ್ಕಳಿಗೆ ಮಾತ್ರ ಸೀಮಿತವಾಗಿರುತ್ತದೆ.
- ಸಹಾಯಕ್ಕಾಗಿ ಬರುವ ವ್ಯಕ್ತಿಯಿಂದ ಶಿಶು ಲಾಲನೆ, ಪಾಲನೆ, ಆರೋಗ್ಯ ಹಾಗೂ ಪೌಷ್ಠಿಕ ಆಹಾರ ಒದಗಿಸುವ ಕುರಿತು ಮುಚ್ಚಳಿಕೆ ಪಡೆಯತಕ್ಕದ್ದು.
- ಶಿಶು ಪಾಲನಾ ಭತ್ಯೆಯನ್ನು ಮಗುವಿನ ಆರೋಗ್ಯ, ಪೌಷ್ಠಿಕ ಆಹಾರ ಮತ್ತು ಪಾಲನೆಗೆ ಮಾತ್ರ ಉಪಯೋಗಿಸಲಾಗುವುದೆಂದು ದೃಢೀಕರಿಸತಕ್ಕದ್ದು
- ಶಿಶು ಪಾಲನಾ ಭತ್ಯೆಯನ್ನು ಮಂಜೂರು ಮಾಡುವ ಪ್ರಾಧಿಕಾರವು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳದ್ದಾಗಿರುತ್ತದೆ.
- ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು.

**3. ನಿರುದ್ಯೋಗಿ ವಿಕಲಚೇತನರಿಗೆ ನಿರುದ್ಯೋಗ ಭತ್ಯೆ:**

2011ರ ಜನಗಣತಿಯ ಪ್ರಕಾರ 18 ರಿಂದ 40ರ ವಯೋಮಿತಿಯಲ್ಲಿ 4,37,903 ವಿಕಲಚೇತನರಿದ್ದು, ವಿಕಲಚೇತನರಿಗಾಗಿ 'ಎ' ಅಂಡ್ 'ಬಿ' ವೃಂದದಲ್ಲಿ ಶೇ.4ರಷ್ಟು ಮೀಸಲಾತಿ ಹಾಗೂ 'ಸಿ' ಅಂಡ್ 'ಡಿ' ವೃಂದದಲ್ಲಿ ಶೇ.5ರಷ್ಟು ಮೀಸಲಾತಿ ನಿಗದಿಯಾಗಿರುತ್ತದೆ. ಆದರೆ ಎಲ್ಲಾ ವಿಕಲಚೇತನರಿಗೆ ಉದ್ಯೋಗಾವಕಾಶಗಳು ಲಭ್ಯವಾಗುತ್ತಿಲ್ಲ. ಈ ವಯೋಮಾನದ ವಿಕಲಚೇತನರಿಗೆ ಸಮಾಜ ಹಾಗೂ ಕುಟುಂಬದಲ್ಲಿ ಸಮಾನತೆ ದೊರೆಯದಿರುವುದರಿಂದ ಅವರುಗಳು ಖಿನ್ನತೆಗೊಳಗಾಗುತ್ತಿದ್ದಾರೆ. ಆದರೆ ಎಲ್ಲಾ ವಿಕಲಚೇತನರಿಗೆ ಉದ್ಯೋಗಾವಕಾಶಗಳನ್ನು ಕಲ್ಪಿಸಲು ಆಗುತ್ತಿಲ್ಲ ಕೇವಲ ಬೆರಳಣಿಕೆಯಷ್ಟು ವಿಕಲಚೇತನರಿಗೆ ಮಾತ್ರ ಉದ್ಯೋಗವಕಾಶಗಳು ಲಭ್ಯವಾಗುತ್ತಿವೆ. ಇನ್ನುಳಿದ ವಿಶಿಷ್ಟಚೇತನರು ಯಾವುದೇ ಉದ್ಯೋಗಗಳು ದೊರೆಯದೆ ತಮ್ಮ ಕುಟುಂಬ ವರ್ಗದವರಿಗೆ ಹೊರೆಯಾಗಿರುವ ಸಂದರ್ಭಗಳು ಹೆಚ್ಚಿರುತ್ತವೆ. ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮದ ಸೆಕ್ಷನ್ 68ರ ಪ್ರಕಾರ ಆಯಾ ರಾಜ್ಯ ಸರ್ಕಾರಗಳು ನಿರುದ್ಯೋಗಿ ವಿಕಲಚೇತನರಿಗೆ ನಿರುದ್ಯೋಗ ಭತ್ಯೆ ನೀಡಲು ಅವಕಾಶ ಕಲ್ಪಿಸಿಕೊಳ್ಳಬೇಕೆಂದು ತಿಳಿಸಲಾಗಿದೆ. ಅದರಂತೆ ರೂ.1000/-ಗಳ ನಿರುದ್ಯೋಗ ಭತ್ಯೆ ನೀಡಲಾಗುತ್ತಿದೆ.

**ಫಲಾನುಭವಿ ಅರ್ಹತೆಗಳು:**

- ಶೇ.40ರಷ್ಟು ಹಾಗೂ ಅದಕ್ಕಿಂತ ಹೆಚ್ಚಿನ ಅಂಗವೈಕಲ್ಯತೆ ಹೊಂದಿರಬೇಕು ಹಾಗೂ ಎಸ್.ಎಸ್.ಎಲ್.ಸಿ. ಮತ್ತು ನಂತರದ ವಿದ್ಯಾರ್ಹತೆ ಹೊಂದಿರಬೇಕು
- 25 ರಿಂದ 45 ವರ್ಷ ವಯೋಮಿತಿಯೊಳಗಿರಬೇಕು.
- ಭಾರತದ ಪ್ರಜೆಯಾಗಿದ್ದು, ಕರ್ನಾಟಕದಲ್ಲಿ ಕನಿಷ್ಠ 10 ವರ್ಷಗಳು ವಾಸವಾಗಿರಬೇಕು.
- ಈ ಸೌಲಭ್ಯ ಪಡೆಯಲು ಯಾವುದೇ ಆದಾಯ ಮಿತಿ ಇರುವುದಿಲ್ಲ
- ಬೇರೆ ಯಾವುದೇ ಯೋಜನೆಯಡಿ ಅಂದರೆ, ಮಾಸಿಕ ಪೋಷಣಾ ಭ್ಯತೆ/ಶುಲ್ಕ ಮರುಪಾವತಿ/ವಿದ್ಯಾರ್ಥಿ ವೇತನ ಯೋಜನೆಗಳಡಿ ಸೌಲಭ್ಯ ಪಡೆಯುತ್ತಿರುವ ಫಲಾನುಭವಿಗಳು ನಿರುದ್ಯೋಗ ಭತ್ಯೆ ಪಡೆಯಲು ಅರ್ಹರಿರುವುದಿಲ್ಲ.
- ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೋಂದಾಯಿತವಾಗಿ 2 ವರ್ಷಗಳು ಕಳೆದಿರಬೇಕು.

**ಸಲ್ಲಿಸಬೇಕಾದ ದಾಖಲೆಗಳು:**

- ಅರ್ಜಿ ಸಲ್ಲಿಸುವ ದಿನಾಂಕದಂದು ಇರುವಂತೆ ವಯಸ್ಸಿನ ಬಗ್ಗೆ ಎಸ್.ಎಸ್.ಎಲ್.ಸಿ. ಅಂಕಪಟ್ಟಿಯೊಂದಿಗೆ ದೃಢಿಕರಣ ಪತ್ರ ಸಲ್ಲಿಸುವುದು.
- ವಿಶಿಷ್ಟ ಗುರುತಿನ ಚೀಟಿ
- ನಿರುದ್ಯೋಗಿ ಅಂಗವಿಕಲರೆಂಬ ಬಗ್ಗೆ ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಣ ಪತ್ರ.
- ಅರ್ಜಿದಾರರು ಎಷ್ಟು ವರ್ಷಗಳಿಂದ ನಮೂದಿಸಿರುವ ವಿಳಾಸದಲ್ಲಿ ವಾಸವಾಗಿರುತ್ತಾರೆ ಎಂಬ ದೃಢೀಕರಣ ಪತ್ರ.
- ಅರ್ಜಿದಾರರ ಬ್ಯಾಂಕ್ ಖಾತೆ ವಿವರ (ಐ.ಎಫ್.ಎಸ್.ಸಿ ಕೋಡ್, ಬ್ಯಾಂಕ್ ಖಾತೆ ಸಂಖ್ಯೆ, ಬ್ಯಾಂಕ್‌ನ ಹೆಸರು ಮತ್ತು ವಿಳಾಸ)

**ಅನುಷ್ಠಾನ**

- ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು.
- ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಅರ್ಜಿಗಳನ್ನು ಪರಿಶೀಲಿಸಿ, ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿನ ಸಮಿತಿ ಸಭೆಯಲ್ಲಿ ಮಂಡಿಸಿ, ಅನುಮೋದನೆ ಪಡೆಯುವುದು.
- ಪ್ರತಿ ಫಲಾನುಭವಿಗೆ ರೂ.1000/-ಗಳ ನಿರುದ್ಯೋಗ ಭತ್ಯೆಯನ್ನು ಆರ್.ಟಿ.ಜಿ.ಎಸ್ ಮೂಲಕ ಫಲಾನುಭವಿಯ ಬ್ಯಾಂಕ್ ನೇರವಾಗಿ ಖಾತೆಗೆ ವರ್ಗಾಯಿಸಲಾಗುವುದು.

### 4. ಸ್ವಯಂ ಉದ್ಯೋಗಕ್ಕಾಗಿ ಆಧಾರ ಯೋಜನೆ

ವಿಕಲಚೇತನರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲುವ ನಿಟ್ಟಿನಲ್ಲಿ ಆಧಾರ ಯೋಜನೆಯು ಜಾರಿಯಲ್ಲಿದೆ. ಈ ಯೋಜನೆಯಡಿ ಮೊದಲು ನೀಡುತ್ತಿದ್ದ ರೂ.15000 ಮೌಲ್ಯದ ಪೆಟ್ಟಿಗೆ ಅಂಗಡಿ ಮತ್ತು ರೂ.20000/-ಗಳ ನಿರ್ವಹಣಾ ಬಂಡವಾಳದ ಬಡ್ಡಿರಹಿತ ಸಾಲ ಯೋಜನೆಯನ್ನು ಸರ್ಕಾರದ ಆದೇಶ ದಿನಾಂಕ:14.8.2018ರನ್ವಯ ಪರಿಷ್ಕರಿಸಿ, ಘಟಕ ವೆಚ್ಚವನ್ನು ರೂ.1.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ ಹಾಗೂ ಇದರಲ್ಲಿ ಶೇ.50ರಷ್ಟು ಬ್ಯಾಂಕ್ ಸಾಲ ಮತ್ತು ಶೇ.50ರಷ್ಟು ಸಬ್ಸಿಡಿ ಮೊತ್ತವನ್ನು ನೀಡಲಾಗುವುದು.

**ಉದ್ದೇಶ:**

ದೃಷ್ಟಿದೋಷವುಳ್ಳ, ಶ್ರವಣದೋಷವುಳ್ಳ, ಚಲನವಲನ ತೊಂದರೆ ಮತ್ತು ಮನೋವಿಕಲತೆಯುಳ್ಳ ವಿಕಲಚೇತನರಿಗೆ ಲಾಭದಾಯಕ ಉದ್ಯೋಗವನ್ನು ಒದಗಿಸಿಕೊಡುವುದು,ವಿಕಲಚೇತನರು ಸ್ವಯಂ ಉದ್ಯೋಗವನ್ನು ಕೈಗೊಳ್ಳಲು ಪ್ರೋತ್ಸಾಹಿಸುವುದು ಹಾಗೂ ಆರ್ಥಿಕ ಮಟ್ಟವನ್ನು ಅಭಿವೃದ್ಧಿಗೊಳಿಸಿ ಇವರು ಸಮಾಜದಲ್ಲಿ ಇತರರಿಗೆ ಸಮಾನವಾಗಿ ಬಾಳಲು ಅವಕಾಶ ಮಾಡಿಕೊಡುವುದು.

**ಅರ್ಹತೆ:**

- ಫಲಾನುಭವಿಗಳಿಗೆ ಶೇ 40 ಹಾಗೂ ಹೆಚ್ಚಿನ ಅಂಗವಿಕಲತೆ ಇರತಕ್ಕದ್ದು, ಗ್ರಾಮೀಣ ಅಭ್ಯರ್ಥಿಗಳಿಗೆ ರೂ.11,500/-ಗಳು ಮತ್ತು ನಗರದ ಅಭ್ಯರ್ಥಿಗಳಿಗೆ ರೂ.24,000/-ಗಳಿಗಿಂತ ಕಡಿಮೆ ವಾರ್ಷಿಕ ಆದಾಯ ಇರತಕ್ಕದ್ದು. ಅಕ್ಷರಸ್ಥರಾಗಿರಬೇಕು. ಸಣ್ಣ ವ್ಯಾಪಾರ ಮಾಡುವ ನೈಪುಣ್ಯವಿರಬೇಕು. ಕಳೆದ 10 ವರ್ಷಗಳಿಂದ ಕರ್ನಾಟಕ ರಾಜ್ಯದ ನಿವಾಸಿಗಳಾಗಿರಬೇಕು. ಸರ್ಕಾರಕ್ಕೆ ಸುಸ್ತಿದಾರರಾಗಿರಬಾರದು. ಕನಿಷ್ಠ 18 ಹಾಗೂ ಗರಿಷ್ಠ 55 ವರ್ಷಗಳೊಳಗಿನ ನಿರುದ್ಯೋಗಿಗಳು ಈ ಯೋಜನೆಯ ಸೌಲಭ್ಯ ಪಡೆಯಬಹುದಾಗಿದೆ.

**ಆಧಾರ ಯೋಜನೆಯಡಿ ಸಹಾಯಧನವನ್ನು ಮಂಜೂರು ಮಾಡುವಾಗ ಈ ಕೆಳಕಂಡ ಸೂಚನೆಯನ್ನು ಪಾಲಿಸುವುದು.**

1. ಬ್ಯಾಂಕುಗಳು ಮಂಜೂರು ಮಾಡಿ ಬಿಡುಗಡೆ ಮಾಡುವ ಸಾಲದ ಮೊತ್ತಕ್ಕೆ ಅನುಗುಣವಾಗಿ ವಿಕಲಚೇತನರಿಗೆ ಸಹಾಯಧನವನ್ನು ಯೋಜನಾ ವೆಚ್ಚದ ಶೇ.50 ರಷ್ಟು ಅಥವಾ ಗರಿಷ್ಠ ರೂ.50,000/-ಕ್ಕೆ ಮೀರಿದಂತೆ ಸಹಾಯಧನ ಬಿಡುಗಡೆ ಮಾಡುವ ಬಗ್ಗೆ ಖಾತರಿಪಡಿಸಿಕೊಳ್ಳತಕ್ಕದ್ದು. ಬ್ಯಾಂಕಿನವರು ಸಹಾಯಧನವನ್ನು ಆಧಾರ ಯೋಜನೆಯ Backend Subsidy ಎಂದು ಪರಿಗಣಿಸುವುದು. ಬ್ಯಾಂಕ್‌ನವರು ಸಾಲದ ಮಂಜೂರಾತಿ ಮಾಡಿದ ಬಗ್ಗೆ ಆದೇಶವನ್ನು ನೀಡಿ ಸಾಲದ ಮರುಪಾವತಿಯನ್ನು 36 ಮಾಸಿಕ ಕಂತುಗಳಲ್ಲಿ ಬ್ಯಾಂಕ್ ನಿಗದಿಪಡಿಸಿದ ಬಡ್ಡಿ ಸಮೇತವಾಗಿ ವಸೂಲಿ ಮಾಡತಕ್ಕದ್ದು.
2. ಬ್ಯಾಂಕ್‌ಗಳಿಂದ ಸಾಲ ಮಂಜೂರಾದ ನಂತರ ಸಾಲ ಬಿಡುಗಡೆಯಾಗುವ ಮುನ್ನಾ ಆಯ್ಕೆಯಾದ ಫಲಾನುಭವಿಗಳಿಗೆ ಆಯಾ ಜಿಲ್ಲೆಯ ಲೀಡ್ ಬ್ಯಾಂಕ್/ಇನ್ನಿತರ ಬ್ಯಾಂಕ್/ರೂಡ್ ಸೆಟ್ ತರಬೇತಿ ಕೇಂದ್ರಗಳ ಮೂಲಕ ಮೂರು ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿಯನ್ನು ಕೊಡಿಸುವುದು. ಈ ತರಬೇತಿಯು ಕಡ್ಡಾಯವಾಗಿ ಆದ ನಂತರವೇ ಸಾಲ/ಸಹಾಯಧನ ಬಿಡುಗಡೆಯಾಗುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಜಾಗ್ರತಿ ವಹಿಸತಕ್ಕದ್ದು, ಬುದ್ಧಿಮಾಂದ್ಯತೆ/ಬಹುವಿಧ ವಿಕಲಚೇತನರು/ ಶ್ರವಣದೋಷವುಳ್ಳವರು/ ತರಬೇತಿ ಪಡೆಯಲು ಆಸಕ್ತಿಯಾಗಿರುವ ವಿಕಲಚೇತನರೊಂದಿಗೆ ಅವರ ಪೋಷಕರು ಸಹ ತರಬೇತಿಗೆ ಹಾಜರಾಗತಕ್ಕದ್ದು.
3. ಫಲಾನುಭವಿಯು ಯಾವ ಉದ್ದೇಶಕ್ಕೆ ಸಾಲ ಪಡೆದಿರುತ್ತಾರೋ ಅದೇ ಉದ್ದೇಶಕ್ಕೆ ಸಾಲವನ್ನು ಉಪಯೋಗಿಸುಕೊಂಡಿರುವರೇ ಎಂಬ ಬಗ್ಗೆ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರ ಸಹಾಯ ಪಡೆದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಪಾಸಣೆ ನಡೆಸಿ ಖಾತರಿಪಡಿಸಿಕೊಳ್ಳತಕ್ಕದ್ದು.
4. ಸಾಲ ಹಾಗೂ ಸಹಾಯಧನವನ್ನು ಫಲಾನುಭವಿಗೆ ಬಿಡುಗಡೆ ಮಾಡಿದ ಬಗ್ಗೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಸಹಾಯಧನ ಉಪಯುಕ್ತತಾ ಪ್ರಮಾಣ ಪತ್ರವನ್ನು ಬ್ಯಾಂಕುಗಳಿಂದ ಪಡೆದು ತಪ್ಪದೇ ನಿರ್ದೇಶನಾಲಯದ ಕಛೇರಿಗೆ ಸಲ್ಲಿಸತಕ್ಕದ್ದು.
5. ಸಾಲ ಮಂಜೂರಾತಿ ಮಾಡಿರುವ ಎಲ್ಲಾ ಆಧಾರ ಫಲಾನುಭವಿಗಳ ಬಗ್ಗೆ ಬ್ಯಾಂಕುಗಳ ಕ್ಷೇತ್ರಾಧಿಕಾರಿಗಳು ಸ್ಥಳ ತಪಾಸಣೆ ಮಾಡಿ ಸ್ವಯಂ ಉದ್ಯೋಗ ಕೈಗೊಂಡು, ಸಾಲವನ್ನು ಸದುಪಯೋಗ ಪಡಿಸಿಕೊಂಡಿರುವ ಬಗ್ಗೆ ನೀಡಿರುವ ವಿವರಗಳನ್ನು ಮತ್ತೊಮ್ಮೆ ಪರಿಶೀಲಿಸಿ ಖಚಿತ ಪಡಿಸಿಕೊಂಡು ಉಪ ನಿರ್ದೇಶಕರು/ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಕ್ರೋಢೀಕರಿಸಿ ನಿರ್ದೇಶನಾಲಯಕ್ಕೆ ತ್ರೈಮಾಸಿಕ ವರದಿ ಸಲ್ಲಿಸತಕ್ಕದ್ದು.
6. ಸಾಲದ ಮೊತ್ತವನ್ನು ದುರುಪಯೋಗಪಡಿಸಿಕೊಂಡಿದ್ದಲ್ಲಿ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಹಕರಿಸಿ ಸಾಲದ ಮೊತ್ತವನ್ನು ವಸೂಲು ಮಾಡಲು ಸೂಕ್ತ ಕ್ರಮಗಳನ್ನು ಕೈಗೊಳ್ಳತಕ್ಕದ್ದು.
7. ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಈ ಯೋಜನೆಯನ್ನು ನಿಯಮಾನುಸಾರ ಸಮರ್ಪಕ ರೀತಿಯಲ್ಲಿ ಅನುಷ್ಠಾನಗೊಳಿಸುವಲ್ಲಿ ವೈಯಕ್ತಿಕ ಹೊಣೆಗಾರರಾಗಿರುತ್ತಾರೆ.
8. ಅಭ್ಯರ್ಥಿಗಳನ್ನು ಆಯ್ಕೆ ಮಾಡುವಾಗ ಶೇಕಡ.18 ರಷ್ಟು ಪ.ಜಾತಿ ಶೇ.7ರಷ್ಟು ಪ.ವರ್ಗದ ಹಾಗೂ ಒಟ್ಟು ಫಲಾನುಭವಿಗಳಲ್ಲಿ ಮೂರನೇ ಒಂದು ಭಾಗದಷ್ಟು ಮಹಿಳಾ ಅಭ್ಯರ್ಥಿಯನ್ನು ಆಯ್ಕೆ ಮಾಡಬೇಕು.
9. ಅಂಗವೈಕಲ್ಯತೆ ಪ್ರಮಾಣ ಹೆಚ್ಚಿರುವವರಿಗೆ ಆದ್ಯತೆ ನೀಡತಕ್ಕದ್ದು.
10. ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು.

ಫಲಾನುಭವಿಗಳ ಆಯ್ಕೆ:-ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು.

## (ಡಿ) ಪುನರ್ವಸತಿ ಯೋಜನೆಗಳು

### 1. ಅಂಗವಿಕಲರ ಗ್ರಾಮೀಣ ಪುನರ್ವಸತಿ ಯೋಜನೆ:

ಎ) ಈ ಯೋಜನೆಯಡಿ ವಿಕಲಚೇತನರಿಗೆ ವಿಕಲಚೇತನರ ಮೂಲಕವೇ ಅವರು ವಾಸಿಸುವ ಸ್ಥಳದಲ್ಲಿಯೇ ಶೈಕ್ಷಣಿಕ, ಉದ್ಯೋಗ ಮತ್ತು ತರಬೇತಿ, ಆರ್ಥಿಕ ಪುನರ್ವಸತಿ ಸಾಮಾಜಿಕ ಭದ್ರತೆ ಯೋಜನೆಗಳ ಹಾಗೂ ಇಲಾಖೆಯ ಸೌಲಭ್ಯಗಳನ್ನು ತಲುಪಿಸುವುದು ಮುಖ್ಯ ಉದ್ದೇಶವಾಗಿರುತ್ತದೆ.

ರೂಪುರೇಷೆ:

1. ಈ ಯೋಜನೆಯ ಅನುಷ್ಠಾನದಿಂದ ಗ್ರಾಮ ಪಂಚಾಯತಿ ಮಟ್ಟದಿಂದ ಜಿಲ್ಲಾ ಮಟ್ಟದಲ್ಲಿ ವಿಕಲಚೇತನರ ಸಮಸ್ಯೆಗಳಿಗೆ ನೇರವಾಗಿ ಸ್ಪಂದಿಸಲು ಅವಕಾಶವಿರುತ್ತದೆ.
2. ಈ ಯೋಜನೆಯನ್ನು ರಾಜ್ಯದ ಎಲ್ಲಾ 30 ಜಿಲ್ಲೆಗಳ 176 ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.
3. ಪ್ರತಿ ಗ್ರಾಮ ಪಂಚಾಯತಿಗೆ ಒಬ್ಬರಂತೆ ಎಸ್.ಎಸ್.ಎಲ್.ಸಿ ಪಾಸಾದ ಅಥವಾ ಎಸ್.ಎಸ್.ಎಲ್.ಸಿ ಯಲ್ಲಿ ಅನುತ್ತೀರ್ಣರಾದವರನ್ನು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರೆಂದು ನೇಮಕ ಮಾಡಲು ಅವಕಾಶವಿದ್ದು, ಅವರಿಗೆ ಮಾಸಿಕ ರೂ.12,000/- ಗೌರವಧನವನ್ನು ನೀಡಲಾಗುವುದು.
4. ಪ್ರತಿ ತಾಲ್ಲೂಕು ಪಂಚಾಯಿತಿ ವ್ಯಾಪ್ತಿಯಲ್ಲಿನ ಸ್ಥಳೀಯ ಪದವೀಧರರನ್ನು (ಅಥವಾ ಪದವಿಯಲ್ಲಿ ಅನುತ್ತೀರ್ಣರಾದವರನ್ನು) ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರನ್ನಾಗಿ ನೇಮಕ ಮಾಡಲು ಅವಕಾಶವಿದ್ದು, ಅವರಿಗೆ ಮಾಹೆಯಾನ ರೂ.15,000/- ಗೌರವಧನವನ್ನು ನೀಡಲಾಗುವುದು.
5. ಮೂರು ಜಿಲ್ಲೆಗಳಿಗೆ ಒಬ್ಬರಂತೆ ಜಿಲ್ಲಾ ಸಂಯೋಜಕರನ್ನು ನೇಮಿಸಲಾಗಿದ್ದು, ರೂ.19,000/-ಗಳ ಗೌರವಧನವನ್ನು ನೀಡಲಾಗುತ್ತಿದೆ.
6. ರಾಜ್ಯ ಸಂಯೋಜಕರನ್ನು ನೇಮಿಸಲಾಗಿದ್ದು, ರೂ.38,000/-ಗಳ ಗೌರವಧನವನ್ನು ನೀಡಲಾಗುತ್ತಿದೆ.
7. ಗ್ರಾಮೀಣ ಪುನರ್ವಸತಿ ಕಾರ್ಯಕರ್ತರನ್ನು(ವಿ.ಆರ್.ಡಬ್ಲ್ಯೂ) ಮತ್ತು ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರನ್ನು (ಎಂ.ಆರ್.ಡಬ್ಲ್ಯೂ) ಆಯ್ಕೆ ಮಾಡಲು ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ರಚಿಸಲಾಗಿದೆ.
8. ಕಾರ್ಯಕ್ರಮದ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಉಸ್ತುವಾರಿ ಸಮಿತಿಯನ್ನು ರಚಿಸಲಾಗಿದೆ.
9. ಸರ್ಕಾರದ ಆದೇಶ ಸಂಖ್ಯೆ:ಮಮಇ:203:ಪಿಹೆಚ್‌ಪಿ:2020 ದಿನಾಂಕ 16.09.2020ರನ್ವಯ ಗೌರವಧನದ ಆಧಾರದ ಮೇಲೆ ನೇಮಕಗೊಳ್ಳುವ ಕಾರ್ಯಕರ್ತರ ವಯೋನಿವೃತ್ತಿ ವಯಸ್ಸನ್ನು 60 ವರ್ಷಗಳಿಗೆ ನಿಗದಿಪಡಿಸಲಾಗಿರುತ್ತದೆ.

**ಬಿ) ಸದರಿ ಯೋಜನೆಯಡಿ ಕಾರ್ಯ ನಿರ್ವಹಿಸುತ್ತಿರುವ ವಿ.ಆರ್.ಡಬ್ಲ್ಯೂ / ಯು.ಆರ್.ಡಬ್ಲ್ಯೂ ಹಾಗೂ ಎಂ.ಆರ್.ಡಬ್ಲ್ಯೂಗಳು ಕರ್ತವ್ಯದ ಅವಧಿಯಲ್ಲಿ ಮರಣಹೊಂದಿದಲ್ಲಿ ಅವರ ಅವಲಂಬಿತರಿಗೆ ರೂ.1,00,000/-ಗಳ ಮರಣ ಪರಿಹಾರಧನ ನೀಡಲಾಗುವುದು.**

### 2. ವಿಕಲಚೇತನರಿಗೆ ಸಾಧನ ಸಲಕರಣೆಗಳು :

ಈ ಯೋಜನೆಯಡಿ ವಿಕಲಚೇತನರಿಗೆ ಅವಶ್ಯವಾಗಿರುವ ಸಾಧನ ಸಲಕರಣೆಗಳನ್ನು ನೀಡಲಾಗುತ್ತಿದೆ. ಈ ಯೋಜನೆಯಡಿ ರೂ.15,000/-ಗಳ ಮಿತಿಯೊಳಗೆ ವಿಕಲಚೇತನರಿಗೆ ಅವಶ್ಯವಿರುವ ಗಾಲಿಕುರ್ಚಿ, ಸಾದಾ ತ್ರಿಚಕ್ರವಾಹನ, ಕ್ಯಾಲಿಪರ್ಸ್, ಕ್ರಚಸ್, ಶ್ರವಣಸಾಧನ, ವೈಟ್‌ಕೇನ್, ಬ್ರೈಲ್‌ವಾಚ್ ಇನ್ನಿತರ ಸಲಕರಣೆಗಳನ್ನು ಉಚಿತವಾಗಿ ನೀಡಲಾಗುತ್ತಿದೆ.

**ಅರ್ಹತೆ/ಷರತ್ತುಗಳು:**

1. ಅಂಗವಿಕಲ ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿ 10 ವರ್ಷಗಳಿಂದ ವಾಸ ಮಾಡುತ್ತಿರುವ ಬಗ್ಗೆ ತಹಸೀಲ್ದಾರ್ ರವರಿಂದ ಪಡೆದ ದೃಢೀಕರಣ ಅಥವಾ ಕರ್ನಾಟಕದಲ್ಲಿ 10 ವರ್ಷಗಳಿಂದ ವ್ಯಾಸಂಗ ಮಾಡಿದ ವಿದ್ಯಾಭ್ಯಾಸದ ದೃಢೀಕರಣ ಪತ್ರ ಒದಗಿಸಬೇಕು.
2. ಅಂಗವಿಕಲತೆ ಹೊಂದಿರುವ ಬಗ್ಗೆ ಸಂಬಂಧಪಟ್ಟ ವೈದ್ಯಕೀಯ ಮಂಡಳಿಯಿಂದ ಯು.ಡಿ.ಐ.ಡಿ. ಹೊಂದಿರಬೇಕು.
3. ವಿಕಲಚೇತನ ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯ ನಗರ ವಾಸಿಯಾಗಿದ್ದಲ್ಲಿ ರೂ.24,000 ಮತ್ತು ಗ್ರಾಮೀಣ ವಾಸಿಯಾಗಿದ್ದಲ್ಲಿ ರೂ. 11,500 ಮೀರಿರಬಾರದು.
4. ಈ ಹಿಂದೆ ಸರ್ಕಾರದ ವತಿಯಿಂದಾಗಲಿ ಅಥವಾ ಸಂಘ ಸಂಸ್ಥೆಗಳಿಂದಾಗಲೀ ಸಹಾಯಧನ/ಸಾಧನ ಸಲಕರಣೆ ಪಡೆದಿರಬಾರದು.
5. ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು.

**3. ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ :**

ಎಸ್.ಎಸ್.ಎಲ್.ಸಿ. ನಂತರ ವ್ಯಾಸಂಗ ಮಾಡುತ್ತಿರುವ ದೃಷ್ಟಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಪಡೆಯಲು ಅನುಕೂಲವಾಗುವಂತೆ ಮಾತನಾಡುವ (ಟಾಕಿಂಗ್) ಲ್ಯಾಪ್‌ಟಾಪ್‌ಗಳನ್ನು ಅರ್ಹ ಫಲಾನುಭವಿಗಳಿಗೆ ನೀಡಲಾಗುತ್ತಿದೆ.

**ಅರ್ಹತೆ:**

- ಎಸ್.ಎಸ್.ಎಲ್.ಸಿ ಹಾಗೂ ನಂತರದ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರಬೇಕು.
- ಯೋಜನೆಯ ಸೌಲಭ್ಯ ಪಡೆಯಲು ಯಾವುದೇ ಆದಾಯಮಿತಿ ಇರುವುದಿಲ್ಲ.
- ವ್ಯಾಸಂಗ ಮಾಡುತ್ತಿರುವ ಬಗ್ಗೆ ಸಂಬಂಧಿತ ಕಾಲೇಜಿನ ಪ್ರಾಂಶುಪಾಲರಿಂದ ದೃಢೀಕರಣ ಪತ್ರ ಒದಗಿಸಬೇಕು
- ಒಂದು ವೇಳೆ ಹೆಚ್ಚಿನ ಫಲಾನುಭವಿಗಳಿಗೆ ಬೇಡಿಕೆ ಬಂದಲ್ಲಿ ಮೊದಲು ಶೇ.100ರಷ್ಟು ದೃಷ್ಠಿದೋಷ ಇರುವ ಪದವಿ ಹಾಗೂ ಪದವಿ ನಂತರದ ರೆಗ್ಯುಲರ್ ಕೋರ್ಸ್ ಮಾಡುತ್ತಿರುವವರಿಗೆ ಆದ್ಯತೆ ನೀಡಲಾಗುವುದು. ತದನಂತರ ಶೇ.100ಕ್ಕಿಂತ ಕಡಿಮೆ ಇರುವ ಪ್ರಕರಣಗಳಲ್ಲಿ ಹೆಚ್ಚಿನ ದೃಷ್ಟಿದೋಷ ಇರುವವರಿಗೆ ಮೊದಲ ಆದ್ಯತೆ ನೀಡಿ ನಂತರ ಕಡಿಮೆ ದೃಷ್ಟಿಹೀನತೆ ಹೊಂದಿರುವವರಿಗೆ ನೀಡುವುದು.

**ಷರತ್ತುಗಳು:-**

- ಸರ್ಕಾರ ನೀಡುವ ಲ್ಯಾಪ್‌ಟಾಪ್‌ನ್ನು ಯಾವುದೇ ಕಾರಣಕ್ಕೂ ಪರಭಾರೆ ಮಾಡಬಾರದು.
- ಜೀವಿತ ಕಾಲದಲ್ಲಿ ಒಂದು ಬಾರಿ ಈ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ.
- ಬೇರೆ ಇಲಾಖೆಗಳು ಅಥವಾ ಸಂಘ ಸಂಸ್ಥೆಗಳಿಂದ ಲ್ಯಾಪ್‌ಟಾಪ್ ಪಡೆದಿದ್ದಲ್ಲಿ ಅರ್ಹರಿರುವುದಿಲ್ಲ. ಈ ಬಗ್ಗೆ ಸ್ವಯಂ ಘೋಷಿತ ದೃಢೀಕರಣ ನೀಡಬೇಕು.
- ಜಿಲ್ಲಾ ಮಟ್ಟದಲ್ಲಿ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಸಮಿತಿ ಮೂಲಕ ಆಯ್ಕೆ ಮಾಡಲಾಗುವುದು.
- ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು.

4. ತೀವ್ರತರಹ ದೈಹಿಕ ವಿಕಲಚೇತನರಿಗೆ "ಯಂತ್ರಚಾಲಿತ ದ್ವಿಚಕ್ರವಾಹನ" ಯೋಜನೆ:

20 ರಿಂದ 60 ವರ್ಷದ ವಯೋಮಾನದ ತೀವ್ರತರವಾದ ದೈಹಿಕ ವಿಕಲಚೇತನರಿಗೆ ಓಡಾಡಲು ಅನುಕೂಲವಾಗುವಂತೆ ಜೀವಿತ ಕಾಲದಲ್ಲಿ ಒಂದು ಬಾರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ಮಂಜೂರು ಮಾಡಲಾಗುತ್ತದೆ.

**ಅರ್ಹತೆಗಳು:**

1. ವಿಕಲಚೇತನ ವ್ಯಕ್ತಿಗಳು ಭಾರತದ ಪ್ರಜೆಯಾಗಿದ್ದು, ಕರ್ನಾಟಕದಲ್ಲಿ ಕನಿಷ್ಠ 10 ವರ್ಷಗಳು ವಾಸವಾಗಿರಬೇಕು. 20 ರಿಂದ 60ರ ವಯೋಮಾನದ ತೀವ್ರತರನಾದ ದೈಹಿಕ ವಿಕಲಚೇತನರಿಗೆ ಜೀವಿತ ಕಾಲದಲ್ಲಿ 01 ಬಾರಿ ಮಾತ್ರ ಸೌಲಭ್ಯ ಕಲ್ಪಿಸಲಾಗಿದೆ.
2. ಈ ಯೋಜನೆಯ ಸೌಲಭ್ಯ ಪಡೆಯಲು ಕುಟುಂಬದ ವಾರ್ಷಿಕ ಆದಾಯ ರೂ.2 ಲಕ್ಷಗಳಿಗಿಂತ ಕಡಿಮೆಯಿರಬೇಕು.
3. ಯು.ಡಿ.ಐ.ಡಿ. ಹೊಂದಿರಬೇಕು. ಇತರ ಇಲಾಖೆಗಳು ಅಥವಾ ಸಂಘ ಸಂಸ್ಥೆಗಳಿಂದ ಯಂತ್ರಚಾಲಿತ ದ್ವಿಚಕ್ರವಾಹನ ಪಡೆದಿದ್ದಲ್ಲಿ ಅಂತಹವರು ಅರ್ಹರಾಗಿರುವುದಿಲ್ಲ.
4. ಈ ಸೌಲಭ್ಯ ಪಡೆಯುವ ಚಲನದೋಷವುಳ್ಳ ವಿಕಲಚೇತನರು ಶೇ.75ಕ್ಕಿಂತ ಹೆಚ್ಚಿನ ದೈಹಿಕ ಅಂಗವಿಕಲತೆ ಹೊಂದಿರಬೇಕು ಹಾಗೂ ಸೊಂಟದ ಕೆಳಗೆ ಅಂದರೆ ಎರಡು ಕಾಲುಗಳಲ್ಲಿ ಸ್ವಾಧೀನ ಕಳೆದುಕೊಂಡಿರುವ, ಎರಡು ಕೈಗಳು ಸ್ವಾಧೀನದಲ್ಲಿರುವ ಹಾಗೂ ಇತರೆ ಎಲ್ಲಾ ರೀತಿಯಲ್ಲಿ ಸದೃಢವಾಗಿರುವ ವಿಕಲಚೇತನರಾಗಿರಬೇಕು. ಇಂತಹ ನ್ಯೂನತೆಯನ್ನು ಹೊಂದಿರುವ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಿಗೆ ಮೊದಲ ಆದ್ಯತೆ ಮೇಲೆ ಈ ಸೌಲಭ್ಯ ನೀಡಬಹುದು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್‌ರವರ ಅಧ್ಯಕ್ಷತೆಯಲ್ಲಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ವೈದ್ಯಾಧಿಕಾರಿಗಳು, ಆರೋಗ್ಯ ಇಲಾಖೆ, ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಹಾಗೂ ದೈಹಿಕ ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಒಂದು ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿ ಇರುವ ಸಮಿತಿಯ ಮೂಲಕ ಫಲಾನುಭವಿಗಳನ್ನು ಆಯ್ಕೆ ಮಾಡುವುದು.
6. ಈ ಸೌಲಭ್ಯ ಪಡೆಯಲಿಚ್ಚಿಸುವ ವಿಕಲಚೇತನರು ದ್ವಿಚಕ್ರವಾಹನ ಚಾಲನೆ ಮಾಡುವ ಪರವಾನಗಿ ಪತ್ರ ಪಡೆದಿರಬೇಕು, ಯಂತ್ರಚಾಲಿತ ದ್ವಿಚಕ್ರವಾಹನವನ್ನು ಅವರ ಜೀವಿತಾವಧಿಯಲ್ಲಿ ಯಾವುದೇ ಕಾರಣಕ್ಕೆ ಪರಭಾರೆ ಮಾಡಬಾರದು, ಮಾಡಿದ್ದು ಕಂಡುಬಂದಲ್ಲಿ ಅಂತಹವರ ಮೇಲೆ ಕಾನೂನು ಕ್ರಮ ಜರುಗಿಸಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.
7. ವಿಕಲಚೇತನರಿಗೆ ನೀಡುವ ದ್ವಿಚಕ್ರವಾಹನವನ್ನು ಸಾರಿಗೆ ಇಲಾಖೆಯಿಂದ ನೊಂದಣಿ ಮಾಡಿಸಿ ನೀಡಬೇಕು. ಆರ್.ಸಿ ಪುಸ್ತಕದ ಪ್ರತಿಯನ್ನು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ನೀಡಬೇಕು ಹಾಗೂ ಆರ್.ಸಿ. ಪುಸ್ತಕದಲ್ಲಿ "ಫಲಾನುಭವಿ ಜೀವಿತವಾಗಿರುವವರೆಗೆ ಸರ್ಕಾರ ಮಂಜೂರು ಮಾಡುವ ವಾಹನ ಮರು ಮಾರಾಟ ಮತ್ತು ವರ್ಗಾವಣೆ ಮಾಡುವಂತಿಲ್ಲ" ಎಂದು ನಮೂದಿಸಬೇಕು.
8. ಈ ಸೌಲಭ್ಯ ಪಡೆಯುವ ದೈಹಿಕ ವಿಕಲಚೇತನರು ಶೇ.75% ಕ್ಕಿಂತ ಹೆಚ್ಚಿನ ದೈಹಿಕ ವಿಕಲಚೇತನರಾಗಿರಬೇಕು. ಹಾಗೂ ಸೊಂಟದ ಕೆಳಗೆ ಅಂದರೆ ಎರಡು ಕಾಲುಗಳಲ್ಲಿ ಸ್ವಾದೀನ ಕಳೆದುಕೊಂಡಿರುವ ಎರಡು ಕೈಗಳು ಸ್ವಾಧೀನದಲ್ಲಿರುವ ಹಾಗೂ ಇತರೆ ಎಲ್ಲಾ ರೀತಿಯಲ್ಲಿ ಸದೃಢವಾಗಿರುವ ವಿಕಲಚೇತನರಾಗಿರಬೇಕು" ಎಂಬುದರ ಬದಲಾಗಿ "ಅಪಘಾತ ಅಥವಾ

ಅನಾರೋಗ್ಯ ಅಥವಾ ಹುಟ್ಟಿನಿಂದ ಒಂದು ಅಥವಾ ಎರಡು ಕಾಲುಗಳನ್ನು ಕಳೆದುಕೊಂಡು ಅಥವಾ ಸ್ವಾಧೀನ ಇಲ್ಲದಿರುವ ಹಾಗೂ ಅಂಗವೈಕಲ್ಯತೆಯ ಪ್ರಮಾಣ ಶೇ.75 ಕ್ಕಿಂತ ಹೆಚ್ಚು ಇದ್ದು, ಎರಡು ಕೈಗಳು ಸ್ವಾಧೀನವಾಗಿರುವ ಮತ್ತು ಇತರೆ ಎಲ್ಲಾ ರೀತಿಯಲ್ಲಿ ದೈಹಿಕವಾಗಿ ಸದೃಢವಾಗಿರುವ ವಿಶೇಷಚೇತನರಿಗೆ ಪ್ರಥಮ ಆದ್ಯತೆ ನೀಡುವುದು.

9. ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು.

**5. ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ ಯೋಜನೆ:-**

ವಿಕಲಚೇತನರನ್ನು ಗುರುತಿಸಿ ಅವರಿಗೆ ಶೈಕ್ಷಣಿಕ, ಉದ್ಯೋಗ ಮತ್ತು ತರಬೇತಿ, ಸಾಮಾಜಿಕ ಭದ್ರತೆ ಹಾಗೂ ಪುನರ್ವಸತಿ ಸೇವೆಗಳನ್ನು ಅವರ ಮನೆ ಬಾಗಿಲಿನಲ್ಲಿಯೇ ಒದಗಿಸಿ ಅವರ ಸರ್ವಾಂಗೀಣ ಪುನರ್ವಸತಿಯನ್ನು ಕಲ್ಪಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ. 2011-12ನೇ ಸಾಲಿನಿಂದ ಜಿಲ್ಲಾ ಪುನರ್ವಸತಿ ಕೇಂದ್ರಗಳನ್ನು ಪ್ರಾರಂಭಿಸಲು ಅನುಮೋದನೆ ನೀಡಲಾಗಿರುತ್ತದೆ. ವಿಕಲಚೇತನರಿಗೆ ಅಗತ್ಯವಿರುವ ವೈದ್ಯಕೀಯ ಸೇವೆ, ವೃತ್ತಿ ಚಿಕಿತ್ಸೆ, ವಿವಿಧ ರೀತಿಯ ಸಾಧನ ಸಲಕರಣೆಗಳನ್ನು ಕೇಂದ್ರಗಳಲ್ಲಿ ತಯಾರಿಸಿ ಒದಗಿಸಲಾಗುವುದು. ಪ್ರತಿ ಕೇಂದ್ರಕ್ಕೆ ನಿಗದಿಗೊಳಿಸಿರುವ ವಾರ್ಷಿಕ ಅನುದಾನವನ್ನು ಒಂದು ಕೇಂದ್ರಕ್ಕೆ ರೂ.36.00ಲಕ್ಷ.

**ಯೋಜನೆಯ ಉದ್ದೇಶ**

1. ತಪಾಸಣಾ ಶಿಬಿರಗಳ ಮೂಲಕ ಅಂಗವಿಕಲರ ಸಮೀಕ್ಷೆ ಹಾಗೂ ಗುರುತಿಸುವಿಕೆ.
2. ಅಂಗವಿಕಲತೆಯನ್ನು ತಡೆಗಟ್ಟುವ ಬಗ್ಗೆ ಪ್ರೋತ್ಸಾಹಿಸಲು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು.
3. ಬಾಲ್ಯಾವಸ್ಥೆಯಲ್ಲಿಯೇ ಅಂಗವಿಕಲತೆಯನ್ನು ಪತ್ತೆಹಚ್ಚಿ ತಡೆಗಟ್ಟುವುದು.
4. ಅಗತ್ಯವಿರುವ ಸಾಧನ ಸಲಕರಣೆಗಳನ್ನು ಗುರುತಿಸುವುದು ಹಾಗೂ ಅವುಗಳನ್ನು ತಯಾರಿಸಿ ನೀಡುವುದು ಮತ್ತು ದುರಸ್ತಿ ಕಾರ್ಯ ಕೈಗೊಳ್ಳುವುದು.
5. ಯು.ಡಿ.ಐ.ಡಿ ಕಾರ್ಡ್ ಒದಗಿಸುವುದು, ರಿಯಾಯಿತಿ ದರದ ಬಸ್‌ಪಾಸ್ ಅಂಗವಿಕಲರಿಗೆ ಇತರೆ ರಿಯಾಯಿತಿಗಳನ್ನು ಒದಗಿಸಲು ಕ್ರಮವಹಿಸುವುದು.
6. ಅಂಗವಿಕಲತೆ ನಿವಾರಣೆ ಶಸ್ತ್ರಚಿಕಿತ್ಸೆಗೆ ಸರ್ಕಾರಿ ಆಸ್ಪತ್ರೆ ಹಾಗೂ ಇತರೆ ಖಾಸಗಿ ಆಸ್ಪತ್ರೆಗಳಿಗೆ ಅಂಗವಿಕಲರನ್ನು ಕಳುಹಿಸಲು ಮಾಹಿತಿ, ಸೇವೆ ನೀಡಲು ವ್ಯವಸ್ಥೆ ಮಾಡುವುದು.
7. ಸ್ವಯಂ ಉದ್ಯೋಗಕ್ಕೆ ಬ್ಯಾಂಕ್ ಹಾಗೂ ಇತರೆ ಆರ್ಥಿಕ ಸಂಸ್ಥೆಗಳಿಂದ ಸಾಲ ಸೌಲಭ್ಯಗಳನ್ನು ಒದಗಿಸಲು ಕ್ರಮವಹಿಸುವುದು.
8. ಶಿಕ್ಷಕರು, ಸಮುದಾಯ ಹಾಗೂ ವಿಕಲಚೇತನರ ಕುಟುಂಬಗಳಿಗೆ ತರಬೇತಿಯನ್ನು ನೀಡುವುದು.
9. ಸ್ಥಳೀಯ ಸಂಪನ್ಮೂಲಗಳನ್ನು ಬಳಸಿಕೊಂಡು ವಿಕಲಚೇತನರಿಗೆ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅವರನ್ನು ಸೂಕ್ತ ಕೆಲಸಗಳಲ್ಲಿ ತೊಡಗಿಸುವುದರ ಮೂಲಕ ಆರ್ಥಿಕವಾಗಿ ಸಬಲೀಕರಿಸುವುದು.

**ಅನುಷ್ಠಾನ:** ಯೋಜನೆಯ ಅನುಷ್ಠಾನಕ್ಕಾಗಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ನಿರ್ವಹಣಾ ಸಮಿತಿಯನ್ನು ರಚಿಸಲಾಗಿದ್ದು, ಪುನರ್ವಸತಿ ಕೇಂದ್ರದ ಎಲ್ಲಾ ಚಟುವಟಿಕೆಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳುವ ಕುರಿತು ಸದರಿ ಸಮಿತಿಯು ಮೇಲ್ವಿಚಾರಣೆ ಮಾಡುವುದು.

6. **ಅಂಗವಿಕಲತೆಯನ್ನು ನಿವಾರಿಸುವ ಶಸ್ತ್ರಚಿಕಿತ್ಸೆಗಾಗಿ ವೈದ್ಯಕೀಯ ಪರಿಹಾರ ನಿಧಿ ಯೋಜನೆ:-**

ಅಂಗವಿಕಲ ವ್ಯಕ್ತಿಗಳಿಗೆ ಅಂಗವಿಕಲತೆಯನ್ನು ನಿವಾರಿಸಲು ಶಸ್ತ್ರ ಚಿಕಿತ್ಸೆಗಾಗಿ ರಾಜ್ಯದ ಎಲ್ಲಾ ಸರ್ಕಾರಿ ಆಸ್ಪತ್ರೆಗಳು, ಸಂಜಯಗಾಂಧಿ ಆಸ್ಪತ್ರೆಯಲ್ಲಿ ಹಾಗೂ ಸುಸಜ್ಜಿತ ಖಾಸಗಿ ಆಸ್ಪತ್ರೆಗಳಲ್ಲಿ ಅಂಗವಿಕಲತೆ ನಿವಾರಣಾ ಶಸ್ತ್ರ ಚಿಕಿತ್ಸೆಗಾಗಿ ರೂ.1.00 ಲಕ್ಷಗಳವರೆಗೆ ಸಹಾಯ ಧನವನ್ನು ಮಂಜೂರು ಮಾಡಲಾಗುತ್ತಿದೆ.

ಅರ್ಹತೆ/ಷರತ್ತು/ನಿಯಮಗಳು:

- ಶಸ್ತ್ರ ಚಿಕಿತ್ಸೆಯಿಂದ ಅಂಗವಿಕಲತೆ ನಿವಾರಣೆಯಾಗುವ ಇಲ್ಲವೆ ಅಂಗವಿಕಲತೆಯ ಪ್ರಮಾಣ ಕಡಿಮೆಯಾಗುವ ಕುರಿತಂತೆ ತಜ್ಞ ವೈದ್ಯಾಧಿಕಾರಿಗಳಿಂದ ಪಡೆದ ದೃಢೀಕರಣ ಒದಗಿಸಬೇಕು.
- ಮರುಪಾವತಿ ಪಡೆಯಲು, ಚಿಕಿತ್ಸೆಗೆ ಸಂಬಂಧಪಟ್ಟ ಔಷಧಿ ಖರೀದಿ, ಬೆಡ್ ಖರ್ಚು, ವೈದ್ಯಕೀಯ ಪರೀಕ್ಷೆಗಳ ವೆಚ್ಚ ಮತ್ತು ಶಸ್ತ್ರಚಿಕಿತ್ಸೆಗೆ ತಗಲುವ ವೆಚ್ಚದ ಮೂಲ ರಶೀದಿ ಒದಗಿಸಬೇಕು.
- ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು.

ಅನುದಾನ ಮಂಜೂರಾತಿ ವಿಧಾನ:

ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಭರ್ತಿ ಮಾಡಿ, ಸಂಬಂಧಪಟ್ಟ ಆಸ್ಪತ್ರೆಯ ಮುಖ್ಯಸ್ಥರು ಶಸ್ತ್ರಚಿಕಿತ್ಸೆ ಕೈಗೊಂಡ ನಂತರ ತಗಲಿದ ವೆಚ್ಚ ದೃಢೀಕರಿಸಿ, ಮೂಲ ರಸೀದಿಯೊಂದಿಗೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ನಿಗದಿತ ನಮೂನೆಯಲ್ಲಿ ಕೋರಿಕೆ ಸಲ್ಲಿಸಿದಲ್ಲಿ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಸದರಿ ಪ್ರಸ್ತಾವನೆಯನ್ನು ಜಿಲ್ಲಾ ಪಂಚಾಯತ್‌ನ ಮುಖ್ಯಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ ಜಿಲ್ಲಾಮಟ್ಟದ ಸಮಿತಿಯಲ್ಲಿ ಮಂಡಿಸಿ, ಅನುಮೋದನೆ ಪಡೆದು ಚಿಕಿತ್ಸೆ ನಡೆಸಿದ ಆಸ್ಪತ್ರೆಗೆ ನೇರವಾಗಿ ಸಂದಾಯ ಮಾಡಲಾಗುತ್ತದೆ. ಅತಿ ವಿರಳ ಸಂದರ್ಭಗಳಲ್ಲಿ ಮೊದಲೇ ಆಸ್ಪತ್ರೆಗೆ ಭರಿಸಲಾದ ಮೊತ್ತವನ್ನು ಕೇಂದ್ರ ಕಛೇರಿಯ ಅನುಮೋದನೆ ಪಡೆದು ಫಲಾನುಭವಿಗೆ ನೀಡಲು ಜಿಲ್ಲಾ ಅಂಗವಿಲರ ಕಲ್ಯಾಣಾಧಿಕಾರಿಗಳು ಕ್ರಮವಹಿಸಬಹುದಾಗಿದೆ.

7. **ಅಂಧ ವಿದ್ಯಾರ್ಥಿಗಳಿಗೆ "ಬ್ರೈಲ್ ಕಿಟ್"ಗಳ ವಿತರಿಸುವ ಯೋಜನೆ:–**

ಅಂಧ ವಿದ್ಯಾರ್ಥಿಗಳು ತಮ್ಮ ದೈನಂದಿನ ಚಟುವಟಿಕೆಗಳಲ್ಲಿ ಸ್ವಾವಲಂಬಿಗಳಾಗಲು ರಾಜ್ಯದ ಅಂಧ ವಿದ್ಯಾರ್ಥಿಗಳಿಗೆ ಟಾಂಕಿಗ್ ಮೊಬೈಲ್, ಬ್ರೈಲ್‌ವಾಚ್, ವಾಕಿಂಗ್ ಸ್ಟಿಕ್ ಮತ್ತು ಇನ್ನಿತರ ಸಾಧನೆಗಳನ್ನು ಒಳಗೊಂಡ ತಲಾ ರೂ.25000/–ಗಳ ಕಿಟ್‌ಗಳನ್ನು ವಿತರಿಸಲಾಗುತ್ತಿದೆ.

ಷರತ್ತುಗಳು:

- ಅಂಧ ವಿದ್ಯಾರ್ಥಿಗಳು ಭಾರತದ ಪ್ರಜೆಯಾಗಿರಬೇಕು ಹಾಗೂ ಕರ್ನಾಟಕದಲ್ಲಿ ಕನಿಷ್ಠ ಹತ್ತು ವರ್ಷಗಳ ವಾಸಿಯಾಗಿರಬೇಕು.
- ಕನಿಷ್ಠ ಎಸ್.ಎಸ್.ಎಲ್.ಸಿ ಹಾಗೂ ನಂತರದ ಉನ್ನತ ಶಿಕ್ಷಣದ ವ್ಯಾಸಂಗ ಮಾಡುತ್ತಿರಬೇಕು, ಶಾಲಾ ಕಾಲೇಜುಗಳ ಮುಖ್ಯಸ್ಥರಿಂದ ಶಿಕ್ಷಣ ಪಡೆಯುತ್ತಿರುವ ಬಗ್ಗೆ ದೃಢೀಕರಣನ ಒದಗಿಸತಕ್ಕದ್ದು
- ಯೋಜನೆಯ ಸೌಲಭ್ಯ ಪಡೆಯಲು ಯಾವುದೇ ಆದಾಯ ಮಿತಿಯಿರುವುದಿಲ್ಲ, ಕಡ್ಡಾಯವಾಗಿ ವಾಸಸ್ಥಳ ದೃಢೀಕರಣ ನೀಡುವುದು.
- ಈ ಯೋಜನೆಯ ಸೌಲಭ್ಯ ಪಡೆಯುವ ಅಂಧ ವಿದ್ಯಾರ್ಥಿಗಳು ಬೇರೆ ಯಾವುದೇ ಮೂಲಗಳಿಂದ ಇದೇ ರೀತಿಯ ಸೌಲಭ್ಯ ಪಡೆದಿರಬಾರದು.
- ದೃಷ್ಟಿದೋಷ ಪ್ರಮಾಣ ಕನಿಷ್ಟ ಶೇ.40 ಅಥವಾ ಅದಕ್ಕಿಂತ ಹೆಚ್ಚಿನ ಅಂಗವಿಕಲತೆಯನ್ನು ಹೊಂದಿರುವುದು.
- ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು.
- ಸೌಲಭ್ಯವನ್ನು ಮಂಜೂರು ಮಾಡುವ ಪ್ರಾಧಿಕಾರವು ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿರುವ ಜಿಲ್ಲಾ ಮಟ್ಟದ ಸಮಿತಿ.

**8. ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ "ಹೊಲಿಗೆ ಯಂತ್ರ"ವನ್ನು ವಿತರಿಸುವ ಯೋಜನೆ:-**

ಶ್ರವಣದೋಷವುಳ್ಳವರು ಸ್ವಯಂ ಉದ್ಯೋಗ ಕೈಗೊಂಡು ಸ್ವಾವಲಂಬಿಗಳಾಗಲು ಅನುವಾಗುವಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರವನ್ನು ವಿತರಿಸಲಾಗುತ್ತಿದೆ.

**ಷರತ್ತುಗಳು:**

- ಶ್ರವಣದೋಷವುಳ್ಳ ವ್ಯಕ್ತಿಯು ಭಾರತದ ಪ್ರಜೆಯಾಗಿರಬೇಕು ಹಾಗೂ ಕರ್ನಾಟಕದಲ್ಲಿ ಕನಿಷ್ಠ ಹತ್ತು ವರ್ಷಗಳ ವಾಸಿಯಾಗಿರಬೇಕು.
- ಶ್ರವಣದೋಷವುಳ್ಳ ವ್ಯಕ್ತಿಯು ಕನಿಷ್ಠ ಎಸ್.ಎಸ್.ಎಲ್.ಸಿ. ವರೆಗೆ ವ್ಯಾಸಂಗ ಮಾಡಿರಬೇಕು ಹಾಗೂ ವೃತ್ತಿಗೆ ಸಂಬಂಧಿಸಿದಂತೆ ಪ್ರಮಾಣಪತ್ರ ಸಲ್ಲಿಸಬೇಕು.
- ಶ್ರವಣದೋಷವುಳ್ಳ ವ್ಯಕ್ತಿಯು ಯೋಜನೆಯ ಸೌಲಭ್ಯ ಪಡೆಯಲು ಯಾವುದೇ ಆದಾಯ ಮಿತಿಯಿರುವುದಿಲ್ಲ.
- ಶ್ರವಣದೋಷ ಪ್ರಮಾಣ ಶೇ.40 ಅಥವಾ ಅದಕ್ಕಿಂತ ಹೆಚ್ಚಾಗಿರತಕ್ಕದ್ದು.
- ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು.
- ಶ್ರವಣದೋಷವುಳ್ಳ ವ್ಯಕ್ತಿಯು ಕಡ್ಡಾಯವಾಗಿ ಸಂಬಂಧ ಪಟ್ಟವರಿಂದ ಪಡೆದ ವಾಸಸ್ಥಳ ದೃಢೀಕರಣ ಪತ್ರ ನೀಡುವುದು.
- ಈ ಯೋಜನೆಯಡಿ ಜೀವಿತಾವಧಿಯಲ್ಲಿ ಒಮ್ಮೆ ಮಾತ್ರ ಸೌಲಭ್ಯ ನೀಡಲಾಗುವುದು. ಸೌಲಭ್ಯ ಪಡೆದ ನಂತರ ಬೇರೆಯವರಿಗೆ ಹಸ್ತಾಂತರಿಸಬಾರದು/ ಪರಭಾರೆ ಮಾಡಬಾರದು.

## (ಇ). "ಸಾಧನೆ ಯೋಜನೆ"

ವಿಕಲಚೇತನ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡಲು "ಸಾಧನೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ಕ್ರೀಡೆಗಳಲ್ಲಿ ವಿಶೇಷ ಸಾಧನೆಗೈದ ವಿಕಲಚೇತನರಿಗೆ ರೂ.50,000/-ಗಳ ಧನ ಸಹಾಯವನ್ನು ನೀಡಲಾಗುತ್ತಿದೆ.

**ಉದ್ದೇಶ:**
ವಿವಿಧ ಬಗೆಯ ಅಂಗವಿಕಲತೆಯಿರುವ ಕ್ರೀಡಾ ಪಟುಗಳಿಗೆ ಅವರ ಕ್ರೀಡಾ ಚಾತುರ್ಯವನ್ನು ಪ್ರದರ್ಶಿಸಲು ಅವಕಾಶ ನೀಡುವುದು ಹಾಗೂ ಅವರಿಗೆ ಹೆಚ್ಚಿನ ಪ್ರಗತಿ ಸಾಧಿಸಲು ಪ್ರೋತ್ಸಾಹ ನೀಡುವುದು.

**ಷರತ್ತುಗಳು:**

1. ಈ ನಗದು ಪುರಸ್ಕಾರವನ್ನು ಕರ್ನಾಟಕದ ಕ್ರೀಡಾಪಟುಗಳಿಗೆ ಮಾತ್ರ ನೀಡತಕ್ಕದ್ದು.
2. ಕರ್ನಾಟಕ ರಾಜ್ಯವನ್ನು ಪ್ರತಿನಿಧಿಸಿ ಭಾರತ ಸರ್ಕಾರದಿಂದ ಅಂಗೀಕೃತವಾಗುವಂತಹ ರಾಷ್ಟ್ರೀಯ ಕ್ರೀಡಾ ತಂಡಗಳಿಂದ ಆಯ್ಕೆಯಾಗಿ ಭಾರತವನ್ನು ಪ್ರತಿನಿಧಿಸುತ್ತಿರುವ ಅಂತರಾಷ್ಟ್ರೀಯ ಕ್ರೀಡಾಕೂಟಗಳಿಗೆ ಮಾತ್ರ ನೀಡತಕ್ಕದ್ದು.
3. ಕ್ರೀಡಾಪಟುಗಳು ಕರ್ನಾಟಕ ಮೂಲದವರಾಗಿದ್ದು, ರಾಜ್ಯದ ಹೊರಗಡೆ ವಾಸಿಸುತ್ತಿರುವ ಬೇರೆ ರಾಜ್ಯ ಅಥವಾ ಕ್ರೀಡಾ ತಂಡಗಳನ್ನು ಪ್ರತಿನಿಧಿಸುವ ಕ್ರೀಡಾಪಟುಗಳಿಗೆಧನಸಹಾಯ ನೀಡಲಾಗುವುದು.
4. ಅಂತರಾಷ್ಟ್ರೀಯ ಕ್ರೀಡಾಕೂಟಕ್ಕೆ ಕ್ರೀಡಾಪಟು ಯಾವ ರಾಜ್ಯವನ್ನು ಅಥವಾ ಯಾವ ಸಂಸ್ಥೆಯನ್ನು ಪ್ರತಿನಿಧಿಸಿ ಆಯ್ಕೆಯಾಗಿದ್ದಾರೆ ಎಂಬುದರ ಬಗ್ಗೆ ಭಾರತ ಸರ್ಕಾರದ ಮಾನ್ಯತೆ ಪಡೆದ ಸಂಬಂಧಪಟ್ಟ ಕ್ರೀಡೆಯ ರಾಷ್ಟ್ರೀಯ ಫೆಡೆರೇಷನ್/ಭಾರತೀಯ ಕ್ರೀಡಾ ಪ್ರಾಧಿಕಾರ ಇವರಿಂದ ದೃಢೀಕರಣ ಪತ್ರ ಒದಗಿಸತಕ್ಕದ್ದು.

5. ಯಾವುದೇ ಅಂತರಾಷ್ಟ್ರೀಯ ಕ್ರೀಡಾ ಸ್ಪರ್ಧೆಯಲ್ಲಿ ನೇರ ಪ್ರವೇಶ ಪಡೆದಂತಹ ಕ್ರೀಡಾಪಟುಗಳಿಗೆ ಈ ಪುರಸ್ಕಾರ ನೀಡಲು ಅವಕಾಶವಿರುವುದಿಲ್ಲ.
6. ಅಂತರಾಷ್ಟ್ರೀಯ ಸಂಸ್ಥೆ ಮತ್ತು ಇತರೆ ಮಾನ್ಯತೆ ಪಡೆದ ಕ್ರೀಡಾ ಸಂಸ್ಥೆಗಳು ನಡೆಸುವ ಅಧಿಕೃತ ಗೇಮ್ಸ್‌ಗಳಿಗೆ ಮಾತ್ರ ಧನಸಹಾಯ ನೀಡಲಾಗುವುದು.
7. ಭಾಗವಹಿಸಿದ ಕ್ರೀಡಾಪಟುಗಳು ರಾಜ್ಯ ಕ್ರೀಡಾ ಸಂಸ್ಥೆಯ ಮುಖಾಂತರ ದೃಢೀಕರಣದೊಂದಿಗೆ ದಾಖಲಾತಿಯನ್ನು ಸಲ್ಲಿಸತಕ್ಕದ್ದು.
8. ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು.

### (ಎಫ್). "ಪ್ರತಿಭೆ ಯೋಜನೆ"

ವಿಕಲಚೇತನರು ನೀಡುವ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡುವ ಸಲುವಾಗಿ "ಪ್ರತಿಭೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ವಿಕಲಚೇತನರ ಕ್ಷೇಮಾಭಿವೃದ್ಧಿ ಕಾರ್ಯಕ್ರಮಗಳಲ್ಲಿ ತೊಡಗಿರುವ ಸ್ವಯಂ ಸೇವಾ ಸಂಸ್ಥೆಗಳು ವಿಕಲಚೇತನ ಕಲಾವಿದರನ್ನು ಒಳಗೊಂಡು ಏರ್ಪಡಿಸುವ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ತಂಡವೊಂದಕ್ಕೆ ಗರಿಷ್ಠ ಮೊತ್ತ ರೂ.10,000/-ಗಳ ಧನಸಹಾಯ ಹಾಗೂ ವಿಕಲಚೇತನರು ವೈಯಕ್ತಿಕವಾಗಿ ನೀಡುವ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ತಲಾ ರೂ.2,000/- ಧನಸಹಾಯ ನೀಡಲಾಗುತ್ತದೆ.

**ಉದ್ದೇಶ:**

ವಿವಿಧ ಬಗೆಯ ಅಂಗವಿಕಲತೆ ಹೊಂದಿದ್ದರೂ ಕೂಡ ಅನೇಕ ವಿಕಲಚೇತನ ವ್ಯಕ್ತಿಗಳು ಉತ್ತಮ ಮಟ್ಟದ ಕಲಾವಿದರಾಗಿದ್ದಾರೆ. ಈ ಕಲಾವಿದರಿಗೆ ತಮ್ಮ ಕಲೆಯ ಪ್ರದರ್ಶನಕ್ಕೆ ಸೂಕ್ತ ಅವಕಾಶ ಕಲ್ಪಿಸಿಕೊಡುವುದು ಹಾಗೂ ಆ ಮೂಲಕ ಅವರ ಕಲೆಗೆ ಪ್ರೋತ್ಸಾಹ ನೀಡುವುದು ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ.

**ಅರ್ಹತೆ/ಷರತ್ತು/ನಿಯಮಗಳು:**

1. ಜಿಲ್ಲೆಯ ಕಲಾವಿದರನ್ನು ಆಯಾ ಜಿಲ್ಲೆಯಲ್ಲಿ ಸ್ಥಳೀಯ ಕಲಾವಿದರೆಂದು ಪರಿಗಣಿಸಲಾಗುವುದು.
2. ಪ್ರಾಯೋಜಿತ ಕಾರ್ಯಕ್ರಮ ನೀಡುವ ಕಲಾವಿದರು ಅಲ್ಲವೇ ಪ್ರಾಯೋಜಿತ ಕಾರ್ಯಕ್ರಮಗಳನ್ನು ಪಡೆಯಲು ಉದ್ದೇಶಿಸಿರುವ ನೊಂದಾಯಿತ ಸಂಸ್ಥೆ ಕಲಾವಿದರು ಹಾಗೂ ಕಾರ್ಯಕ್ರಮದ ಕುರಿತು ಎಲ್ಲಾ ವಿವರಗಳೊಂದಿಗೆ ಸಂಬಂಧಪಟ್ಟ ಜಿಲ್ಲೆಯ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಕನಿಷ್ಠ 1 ತಿಂಗಳ ಮೊದಲು ಅರ್ಜಿಯನ್ನು ಸಲ್ಲಿಸತಕ್ಕದ್ದು.
3. ಕಾರ್ಯಕ್ರಮ ನಡೆದಿರುವ ಬಗ್ಗೆ ಸೂಕ್ತ ವಿವರಗಳನ್ನು ಹಾಗೂ ಅಗತ್ಯವಿರುವ ದಾಖಲೆಗಳನ್ನು ಪಡೆದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಾಯೋಜಿತ ಕಾರ್ಯಕ್ರಮಗಳಿಗೆ ಸಹಾಯಧನವನ್ನು ಮಂಜೂರು ಮಾಡುವರು. ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು.

### (ಜಿ). "ನಿರಾಮಯ ಆರೋಗ್ಯ ವಿಮಾ ಯೋಜನೆ"

ಈ ಯೋಜನೆಯನ್ನು ಕೇಂದ್ರ ಸರ್ಕಾರದ ನ್ಯಾಷನಲ್ ಟ್ರಸ್ಟ್ ಆಕ್ಟ್-1999ರಡಿ 04 ಬಗೆಯ ವಿಕಲಚೇತನರಿಗೆ (ಬುದ್ಧಿಮಾಂದ್ಯ, ಸೆರೆಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲರು) ನಿರಾಮಯ ಆರೋಗ್ಯ ವಿಮಾ ಯೋಜನೆಯನ್ನು ಜಾರಿಗೆ ತಂದಿದ್ದು, ಕರ್ನಾಟಕ ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ 04 ಬಗೆಯ ವಿಕಲಚೇತನ ವ್ಯಕ್ತಿಗಳಿಗೆ ಪ್ರಥಮ ಬಾರಿಗೆ ಒಂದು ಸಲ ವಾರ್ಷಿಕ ರೂ.250/-ಗಳನ್ನು ಸರ್ಕಾರದ

ವತಿಯಿಂದ ವಿಮಾ ಕಂತಾಗಿ ಪಾವತಿಸಿ ಪ್ರತಿ ವರ್ಷ ರೂ.1.00 ಲಕ್ಷಗಳವರೆಗೆ ವೈದ್ಯಕೀಯ ಸೌಲಭ್ಯ ಪಡೆಯಬಹುದಾಗಿರುತ್ತದೆ. ಈ ಮೊತ್ತವು ರೂ.60,000/–ಗಳವರೆಗೆ ಸರ್ಜರಿ ವೆಚ್ಚ ಉಳಿದ ರೂ.40,000/–ಗಳಲ್ಲಿ ವೈದ್ಯಕೀಯ ಖರ್ಚು ಥೆರಪಿ, ಪ್ರಯಾಣ ವೆಚ್ಚಗಳನ್ನು ಒಳಗೊಂಡಿರುತ್ತದೆ.

**ವಿವರ:**

ಈ ಯೋಜನೆಯನ್ನು ರಾಜ್ಯದಲ್ಲಿ ಕೇಂದ್ರ ಸರ್ಕಾರದ ನ್ಯಾಷನಲ್ ಟ್ರಸ್ಟ್ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ.

- ಕರ್ನಾಟಕ ರಾಜ್ಯಾದ್ಯಾಂತ ಕೇಂದ್ರ ಸರ್ಕಾರದ ನ್ಯಾಷನಲ್ ಟ್ರಸ್ಟ ಆಕ್ಟ್–1999ರಡಿ ಬರುವ 04 ಬಗೆಯ ವಿಕಲಚೇತನರಿಗೆ (ಬುದ್ಧಿಮಾಂದ್ಯರು, ಸೆರಬ್ರಲ್ ಪಾಲ್ಸಿ, ಆಟಿಸಂ, ಮತ್ತು ಬಹುವಿಧ ಅಂಗವಿಕಲರು) ವಿಮಾ ಸೌಲಭ್ಯ ಒದಗಿಸಲಾಗುವುದು.
- ಈ ಯೋಜನೆಯಡಿ ಬಡತನ ರೇಖೆಗಿಂತ ಕೆಳಗಿರುವ ವಿಕಲಚೇತನ ವ್ಯಕ್ತಿಗಳಿಗೆ ಪ್ರತಿ ವರ್ಷ 1.00 ಲಕ್ಷದವರೆಗೆ ವೈದ್ಯಕೀಯ ವೆಚ್ಚ ಮರುಪಾವತಿ ಪಡೆಯಲು ಅವಕಾಶವಿದೆ.
- ವಿಕಲಚೇತನ ವ್ಯಕ್ತಿಗಳ ಮಾನಸಿಕ ಮತ್ತು ದೈಹಿಕ ಮಟ್ಟ ಹೆಚ್ಚಿಸಲು ಸಹಕಾರ ಕಲ್ಪಿಸುವುದು.

### (ಹೆಚ್). ವಿಕಲಚೇತನರ ಮಾಹಿತಿ ಸಲಹಾ ಕೇಂದ್ರ:–

ವಿಕಲಚೇತನರಿಗಾಗಿ ರಾಜ್ಯ ಸರ್ಕಾರದ ಹಾಗೂ ಕೇಂದ್ರ ಸರ್ಕಾರದಿಂದ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆಗಳ ಹಾಗೂ ವಿಶೇಷ ಶಾಲೆಗಳು ಹಾಗೂ ವೃತ್ತಿ ತರಬೇತಿ ಸಂಸ್ಥೆಗಳ ಬಗ್ಗೆ ಮಾಹಿತಿಯನ್ನು ವಿಕಲಚೇತನರಿಗೆ ಒದಗಿಸಲು ಪ್ರಧಾನ ಕಚೇರಿಯಲ್ಲಿ 01 ಮಾಹಿತಿ ಸಲಹಾ ಕೇಂದ್ರ ಹಾಗೂ ರಾಜ್ಯದ 30 ಜಿಲ್ಲೆಗಳಲ್ಲಿ ಜಿಲ್ಲಾ ಕಚೇರಿಗಳಲ್ಲಿ ವಿಕಲಚೇತನರ ಸಹಾಯವಾಣಿ / ಮಾಹಿತಿ ಕೇಂದ್ರಗಳನ್ನು ನಡೆಸಲಾಗುತ್ತಿದೆ. ಈ ಕೇಂದ್ರಗಳಲ್ಲಿ ಸಿಬ್ಬಂದಿಗಳ ಗೌರವಧನ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

## ಜಿಲ್ಲಾ ವಲಯ

## 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳು:

1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 34 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ.ರಾಜ್ಯ ಸರ್ಕಾರದಿಂದ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕಬಿಡುಗಡೆ ಮಾಡಲಾಗುತ್ತಿದೆ.

**ಉದ್ದೇಶ:**

ವಿವಿಧ ವಿಕಲಚೇತನ ಮಕ್ಕಳಿಗೆ ಉಚಿತ ವಿದ್ಯಾಭ್ಯಾಸ, ಊಟ, ವಸತಿ ಮತ್ತು ಶೈಕ್ಷಣಿಕ ಸೌಲಭ್ಯಗಳನ್ನು ಕಲ್ಪಿಸಿ ಸಮಾಜದಲ್ಲಿ ಇತರೆ ಮಕ್ಕಳಂತೆ ವಿದ್ಯಾಭ್ಯಾಸವನ್ನು ಒದಗಿಸಲು ಉದ್ದೇಶಿಸಿರುವ ಸ್ವಯಂ ಸೇವಾ ಸಂಸ್ಥೆಗಳಿಗೆ ರಾಜ್ಯ ಸರ್ಕಾರವು ಜಿಲ್ಲಾ ಪಂಚಾಯಿತಿ ಮೂಲಕ ಅನುದಾನ ನೀಡುವ ಯೋಜನೆ.

30

## ಅರ್ಹತೆ:

1. ಈ ಯೋಜನೆಯನ್ನು ಜಿಲ್ಲಾ ಪಂಚಾಯಿತಿಗಳ ವತಿಯಿಂದ ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ಜಾರಿಗೆ ತರಲಾಗುತ್ತಿದೆ.
2. ವಿವಿಧ ರೀತಿಯ ಅಂಗವಿಕಲತೆಗೆ ಸಂಬಂಧಿಸಿದಂತೆ ವಿಶೇಷ ಶಾಲೆಗಳಿಗೆ ರಾಜ್ಯ ಸರ್ಕಾರದಿಂದ ಶೇಕಡಾ 100 ರಷ್ಟು ವೇತನಾನುದಾನವನ್ನು ಒದಗಿಸಲಾಗುತ್ತಿದೆ.

## III. ಕೇಂದ್ರ ವಲಯದ ಯೋಜನೆಗಳು

### 1. ದೀನ್ ದಯಾಳ್ ದಿವ್ಯಾಂಗಜನ್ ರಿಹ್ಯಾಬಿಲಿಟೇಷನ್ ಯೋಜನೆ (DDRS) ವಿಕಲಚೇತನರಿಗೆ ಶೈಕ್ಷಣಿಕ ಹಾಗೂ ವೃತ್ತಿ ತರಬೇತಿ ಯೋಜನೆಗಳು

**ಉದ್ದೇಶ:**

ವಿವಿಧ ವಿಕಲಚೇತನ ಮಕ್ಕಳಿಗೆ ಉಚಿತ ವಿದ್ಯಾಭ್ಯಾಸ, ತರಬೇತಿ, ಊಟ, ವಸತಿ ಮತ್ತು ಶೈಕ್ಷಣಿಕ ಸೌಲಭ್ಯಗಳನ್ನು ಕಲ್ಪಿಸಿ ಸಮಾಜದಲ್ಲಿ ಇತರೆ ಮಕ್ಕಳಿಗೆ ವಿದ್ಯಾಭ್ಯಾಸವನ್ನು ಒದಗಿಸಲು ಉದ್ದೇಶಿಸಿರುವ ಸ್ವಯಂ ಸೇವಾ ಸಂಸ್ಥೆಗಳಿಗೆ ಕೇಂದ್ರ ಸರ್ಕಾರದ ಮೂಲಕ ಧನ ಸಹಾಯ ನೀಡುವ ಯೋಜನೆ.

- ಕೇಂದ್ರ ಸರ್ಕಾರದ ವಿಕಲಚೇತನರ (ದಿವ್ಯಾಂಗಜನ್) ಸಬಲೀಕರಣ ಇಲಾಖೆ, ನವದೆಹಲಿ ಇದರ ಅಡಿಯಲ್ಲಿ ಡಿ.ಡಿ.ಆರ್.ಎಸ್ ಯೋಜನೆಯನ್ನು 2009ನೇ ಸಾಲಿನಿಂದ ಅನುಷ್ಠಾನಗೊಳಿಸುತ್ತಿದೆ.
- ಈ ಯೋಜನೆಯಡಿ ವಿಶೇಷ ಚೇತನರಿಗೆ ಸಾಧನ ಸಲಕರಣೆ, ಶಿಕ್ಷಣ, ವೃತ್ತಿ ತರಬೇತಿ ಪುನರ್ವಸತಿ, ಉದ್ಯೋಗ ಮತ್ತು ಸಬಲೀಕರಣಕ್ಕಾಗಿ ಯೋಜನೆಗಳನ್ನು ರೂಪಿಸಿ, ಅನುಷ್ಠಾನಗೊಳಿಸುತ್ತಿದೆ.
- ಈ ಯೋಜನೆಯಡಿ ಕರ್ನಾಟಕ ರಾಜ್ಯದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 03 ವಿಶೇಷ ಶಾಲೆಗಳು ಮತ್ತು 01 ಕುಷ್ಠರೋಗ ನಿವಾರಿತರ ಪುನರ್ವಸತಿ ಕೇಂದ್ರವನ್ನು ನಡೆಸಲಾಗುತ್ತಿದೆ.
- ಪ್ರತಿ ವರ್ಷ ಅನುದಾನ ಕೋರಿ ಇ-ಅನುದಾನ ಪೋರ್ಟಲ್ ಮೂಲಕ ಅನುದಾನ ಕೋರಿ ಸ್ವಯಂ ಸೇವಾ ಸಂಸ್ಥೆಗಳು ಅರ್ಜಿ(ಪ್ರಸ್ತಾವನೆಗಳನ್ನು)ಗಳನ್ನು ಸಲ್ಲಿಸುತ್ತವೆ. ಇವುಗಳನ್ನು ಕೇಂದ್ರ ಅನುದಾನ ಶಿಫಾರಸ್ಸು ಸಮಿತಿ ಸಭೆಯಲ್ಲಿ ಮಂಡಿಸಿ, ಶಿಫಾರಸ್ಸಾದ ಪ್ರಸ್ತಾವನೆಗಳನ್ನು ಕೇಂದ್ರ ಸರ್ಕಾರಕ್ಕೆ ಅನುದಾನ ಬಿಡುಗಡೆ ಮಾಡಲು ಸಲ್ಲಿಸಲಾಗುವುದು. ಕೇಂದ್ರ ಸರ್ಕಾರ ನೇರವಾಗಿ ಅನುದಾನವನ್ನು ಸ್ವಯಂಸೇವಾ ಸಂಸ್ಥೆಗಳ ಬ್ಯಾಂಕ್ ಖಾತೆಗೆ ಆರ್.ಟಿ.ಜಿ.ಎಸ್/ನೆಫ್ಟ್ ಮೂಲಕ ಜಮಾ ಮಾಡುವುದು.

**ಅರ್ಹತೆ:**

1. ಈ ಯೋಜನೆಯನ್ನು ಕೇಂದ್ರ ಸರ್ಕಾರವು ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ಜಾರಿಗೆ ತರಲಾಗುತ್ತಿದೆ. ಯೋಜನೆಗೆ ಶೇ.90 ರಷ್ಟು ಅನುದಾನವನ್ನು ಕೇಂದ್ರ ಸರ್ಕಾರವು ಒದಗಿಸುತ್ತಿದೆ. ಉಳಿದ ಶೇ. 10ರಷ್ಟು ಸ್ವಯಂ ಸೇವಾ ಸಂಸ್ಥೆಗಳೇ ಭರಿಸಬೇಕಾಗುತ್ತದೆ.
2. ಯೋಜನೆಯ ಸೌಲಭ್ಯ ಪಡೆಯಲು ಸ್ವಯಂ ಸೇವಾ ಸಂಸ್ಥೆಯು ಅಸ್ತಿತ್ವಕ್ಕೆ ಬಂದು ಕನಿಷ್ಠ 2 ವರ್ಷಗಳಾಗಿರಬೇಕು.
3. ಸ್ವಯಂ ಸೇವಾ ಸಂಸ್ಥೆಯು ಸಾಕಷ್ಟು ಸಿಬ್ಬಂದಿ ವರ್ಗದೊಂದಿಗೆ ಅಗತ್ಯವಾದ ಮೂಲಸೌಲಭ್ಯ ಸಂಪನ್ಮೂಲ ಹಾಗೂ ಅನುಭವ ಹೊಂದಿದ್ದು ಮತ್ತು ಆರ್ಥಿಕವಾಗಿ ಸದೃಢ ಹೊಂದಿರಬೇಕು.
4. ಸ್ವಯಂ ಸೇವಾ ಸಂಸ್ಥೆಯು ಶಾಲೆಯನ್ನು ನಡೆಸುವಲ್ಲಿ ಅಥವಾ ಇಂತಹುದೇ ಇನ್ನಿತರ ಕಾರ್ಯಕ್ರಮಗಳನ್ನು ನಡೆಸುವಲ್ಲಿ ಅನುಭವ ಹೊಂದಿರಬೇಕು. ವಿಶೇಷ ಶಾಲೆಗಳಿಗೆ ಬೇಕಾಗಿರುವ ಮೂಲಭೂತ ಸೌಲಭ್ಯಗಳನ್ನು ಹೊಂದಿರಬೇಕು.
5. ಸಂಸ್ಥೆಯು ಯಾವುದೇ ಯೋಜನೆಯನ್ನು ಒಂದು ಜನಾಂಗದ ಲಾಭಕ್ಕಾಗಿ ನಡೆಸುತ್ತಿರಬಾರದು.
6. ಸಂಸ್ಥೆಯು ಅಧಿಕೃತವಾಗಿ ರಚಿತವಾಗಿರುವ ಆಡಳಿತ ಮಂಡಳಿಯನ್ನು ಹೊಂದಿದ್ದು ಆಡಳಿತ ವರ್ಗದ ಅಧಿಕಾರ, ಕರ್ತವ್ಯಗಳು ಮತ್ತು ಜವಾಬ್ದಾರಿಗಳನ್ನು ಸ್ಪಷ್ಟ ಹಾಗೂ ಖಚಿತವಾಗಿ ಸಂಸ್ಥೆಯ ಬರವಣಿಗೆಯಲ್ಲಿರುವ ಸಂವಿಧಾನದಲ್ಲಿ ನಿರೂಪಿತವಾಗಿರಬೇಕು.

7. ಸಂಸ್ಥೆಯು ಯಾವುದೇ ಜಾತಿ, ಪಂಥ, ಮತ ಮತ್ತು ಭಾಷೆಗಳನ್ನು ಪರಿಗಣಿಸದೇ ಎಲ್ಲರಿಗೂ ಸೌಲಭ್ಯ ಒದಗಿಸಬೇಕು.
8. ಕೇಂದ್ರ ಸರ್ಕಾರವು ದೃಷ್ಟಿದೋಷ, ಶ್ರವಣದೋಷ, ಬುದ್ದಿಮಾಂದ್ಯ, ಮಾನಸಿಕ ಅಸ್ವಸ್ಥರ ಹಾಗೂ ಇತರೆ ವಿಶೇಷ ಶಾಲೆ ಹಾಗೂ ವೃತ್ತಿ ತರಬೇತಿ ಕೇಂದ್ರಗಳಿಗೆ ಅನುದಾನವನ್ನು ಬಿಡುಗಡೆ ಮಾಡುತ್ತಿದೆ.

ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಇಚ್ಛಿಸುವ ಸ್ವಯಂ ಸೇವಾ ಸಂಸ್ಥೆಗಳು ಪ್ರಸ್ತಾವನೆಯನ್ನು ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಆನ್‌ಲೈನ್ ಮೂಲಕ ಸಲ್ಲಿಸಬೇಕಾಗುತ್ತದೆ. ವೆಬ್ ಸೈಟ್ ವಿಳಾಸdisabilityaffairs.gov.in ಅನ್ನು ಸಂಪರ್ಕಿಸಬಹುದು.
ಈ ಯೋಜನೆಯಡಿ ಸ್ವಯಂಸೇವಾಸಂಸ್ಥೆಗಳು ಅನುದಾನ ಕೋರಿ e-anudan ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ.

2. **ಸಿಪ್ಡ ಯೋಜನೆ (Scheme for Implementation of the Rights of Persons with Disabilities Act 2016 - SIPDA):**

- ಯೋಜನೆಯಡಿ ವಿಕಲಚೇತನರು ಸುಗಮವಾಗಿ ಓಡಾಡಲು ತಡೆರಹಿತ ವಾತಾವರಣ ನಿರ್ಮಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ.
- ಸದರಿ ಯೋಜನೆಯಡಿ ರಾಜ್ಯದ 3 ಧಾರ್ಮಿಕ ಸ್ಥಳಗಳಲ್ಲಿ (ಚಾಮುಂಡೇಶ್ವರಿ ದೇವಸ್ಥಾನ ಮೈಸೂರು, ಬಾಹುಬಲಿ ಗೊಮ್ಮಟೇಶ್ವರ ಜೈನಮಂದಿರ, ಶ್ರವಣಬೆಳಗೋಳ ಮತ್ತು ಗೋಕರ್ಣದ ಮಹಾಬಲೇಶ್ವರ ದೇವಸ್ಥಾನ, ಉತ್ತರ ಕನ್ನಡ ಜಿಲ್ಲೆ) ತಡೆರಹಿತ ವಾತಾವರಣ ನಿರ್ಮಿಸಲು ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮಕೈಗೊಳ್ಳಲಾಗುತ್ತಿದೆ.

**ಉದ್ದೇಶ:**

ಸಿಪ್ಡಾ (ಅಂಗವಿಕಲ ವ್ಯಕ್ತಿಗಳ-ಸಮಾನ ಅವಕಾಶ, ಹಕ್ಕುಗಳ ಸಂರಕ್ಷಣೆ ಮತ್ತು ಸಂಪೂರ್ಣ ಭಾಗವಹಿಸುವಿಕೆ ಅಧಿನಿಯಮ-1995) ಯೋಜನೆಯ ಪ್ರಕಾರ ವಿಕಲಚೇತನರು ಸಾರ್ವಜನಿಕ ಕಟ್ಟಡ ಹಾಗೂ ಸ್ಥಳಗಳಲ್ಲಿ ತಡೆ ರಹಿತವಾಗಿ ಸುಲಭವಾಗಿ ಓಡಾಡಲು ಅನುವಾಗುವಂತೆ (ರ್‍ಯಾಂಪ್) ಇಳಿಜಾರು ದಾರಿ, ಅಂಗವಿಕಲಸ್ನೇಹಿ ಶೌಚಾಲಯ, ಸೂಚನಾ ಫಲಕಗಳು, ಟ್ಯಾಕ್ಟೈಲ್ ಫ್ಲೋರಿಂಗ್, ಲಿಫ್ಟ್‌ಗಳಲ್ಲಿ ಬ್ರೈಲ್ ಸಂಕೇತ ಮತ್ತು ಶಬ್ದ ಸಂಕೇತಗಳನ್ನು ಕಲ್ಪಿಸುವುದು ಇದರ ಉದ್ದೇಶವಾಗಿರುತ್ತದೆ.

ಮಾನ್ಯ ಉಚ್ಛನ್ಯಾಯಲಯ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಂಖ್ಯೆ:37434/09ಕ್ಕೆ ದಿನಾಂಕ:09/04/2010 ರಲ್ಲಿ ನೀಡಿರುವ ತೀರ್ಪಿನನ್ವಯ ಎಲ್ಲಾ ಸಾರ್ವಜನಿಕ ಕಟ್ಟಡಗಳಲ್ಲಿ / ಕಛೇರಿಗಳಲ್ಲಿ ತಡೆರಹಿತ ವಾತಾವರಣವನ್ನು ಲೋಕೋಪಯೋಗಿ ಇಲಾಖೆ ನಿರ್ವಹಿಸತಕ್ಕದೆಂದು ಹಾಗೂ ವಿಕಲಚೇತನರು ಸುಲಭವಾಗಿ ಓಡಾಡಲು ಅನುಕೂಲವಾಗುವಂತೆ ಇಳಿಜಾರು ದಾರಿ, ಅಂಗವಿಕಲ ಸ್ನೇಹಿ ಶೌಚಾಲಯ, ಸೂಚನಾ ಫಲಕಗಳು, ಟ್ಯಾಕ್ಟೈಲ್ ಫ್ಲೋರಿಂಗ್, ಲಿಫ್ಟ್‌ಗಳಲ್ಲಿ ಬ್ರೈಲ್ ಸಂಕೇತ ಮತ್ತು ಶಬ್ದಸಂಕೇತಗಳನ್ನು ಎಲ್ಲಾ ಸಾರ್ವಜನಿಕ ಕಟ್ಟಡಗಳಲ್ಲಿ ನಿರ್ಮಿಸಲು ಸೂಚಿಸಲಾಗಿರುತ್ತದೆ. ಅದರಂತೆ ದಿನಾಂಕ:20.09.2010ರ ಸುತ್ತೋಲೆಯಲ್ಲಿ ಸರ್ಕಾರಿ ಕಛೇರಿಗಳ ಕಟ್ಟಡ ಕಟ್ಟುವ ನಕ್ಷೆಯಲ್ಲಿ ಅಂಗವಿಕಲರಿಗೆ ಇಳಿಜಾರು ವ್ಯವಸ್ಥೆ ಹಾಗೂ

ವಾಹನ ನಿಲುಗಡೆಗೆ ಸೂಕ್ತ ಸ್ಥಳ ವ್ಯವಸ್ಥೆ ಕಲ್ಪಿಸಿ ಕಟ್ಟಡ ನಿರ್ಮಾಣ ಮಾಡುವಂತೆ, ಪ್ರಸ್ತಾವನೆಗಳನ್ನು ಲೋಕೋಪಯೋಗಿ ಇಲಾಖೆಗೆ, ಸಂಬಂಧಿಸಿದ ಇಲಾಖೆಗಳು ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಅಧೀನ ಕಛೇರಿಗೆ ಸೂಕ್ತ ನಿರ್ದೇಶನ ನೀಡುವಂತೆ ಎಲ್ಲಾ ಇಲಾಖೆಯ ಮುಖ್ಯಸ್ಥರುಗಳಿಗೆ ಸೂಚಿಸಲಾಗಿದೆ.

3. **ಅಡಿಪ್ ಯೋಜನೆ- ADIP (Assistive Devices for Persons with Disabilities)**

- ರಾಜ್ಯದಲ್ಲಿ ಈ ಯೋಜನೆಯನ್ನು 1995ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ.
- ಈ ಯೋಜನೆಯಡಿ ಅಂಗವಿಕಲರಿಗೆ ಸಾಧನ ಸಲಕರಣೆಗಳನ್ನು ಉಚಿತವಾಗಿ / ರಿಯಾಯಿತಿ ದರದಲ್ಲಿ ವಿತರಿಸಲಾಗುತ್ತದೆ.
- ಜಿಲ್ಲಾ ಪುನರ್ವಸತಿ ಕೇಂದ್ರಗಳ ಹಾಗೂ ಕೇಂದ್ರ ಸರ್ಕಾರ ಸಾಮ್ಯದ Artificial Limbs manufacturing corporation of India (ALIMCO) ಸಂಸ್ಥೆಯ ಮುಖಾಂತರ ಅಂಗವಿಕಲರಿಗೆ ಸಾಧನ ಸಲಕರಣೆಗಳನ್ನು ವಿತರಿಸಲಾಗುತ್ತಿದೆ. ಗ್ರಾಮೀಣ/ ತಾಲ್ಲೂಕು ಮಟ್ಟದಲ್ಲಿ ವಿ.ಆರ್.ಡಬ್ಲ್ಯೂ ಎಂ.ಆರ್.ಡಬ್ಲ್ಯೂ ಮುಖಾಂತರ & ಸ್ವಯಂ ಸೇವಾ ಸಂಸ್ಥೆಗಳ ಸಹಕಾರದಲ್ಲಿ ಅಂಗವಿಕಲರನ್ನು ಗುರುತಿಸಲಾಗುವುದು. ಜಿಲ್ಲೆಗಳ ಜಿ.ಅಂ.ಕ. ರವರು ಫಲಾನುಭವಿಗಳ ಪಟ್ಟಿಯನ್ನು ALIMCO ಸಂಸ್ಥೆಗೆ ಸಲ್ಲಿಸಿ ತದನಂತರ ಅಂಗವಿಕಲರಿಗೆ ಕ್ಯಾಂಪ್ ಮುಖಾಂತರ ವಿತರಿಸಲಾಗುವುದು.

**ಸೌಲಭ್ಯ ಪಡೆಯಲು ಫಲಾನುಭವಿಗೆ ಇರಬೇಕಾದ ಅರ್ಹತೆಗಳು:**

- ಅಂಗವಿಕಲತೆಯ ಪ್ರಮಾಣ ಶೇ.40ಕ್ಕಿಂತ ಹೆಚ್ಚಿರುವ ಯು.ಡಿ.ಐ.ಡಿಹೊಂದಿರಬೇಕು.
- ಮಾಸಿಕ ಆದಾಯ ರೂ.15,000/- ಒಳಗಿದ್ದಲ್ಲಿ ಸಾಧನ ಸಲಕರಣೆಗಳನ್ನು ಉಚಿತವಾಗಿ ನೀಡಲಾಗುವುದು. ಮಾಸಿಕ ಆದಾಯ ರೂ.15,000/- ರಿಂದ 20,000/- ಒಳಗಿದ್ದಲ್ಲಿ ಸಾಧನ ಸಲಕರಣೆಯ ಶೇ.50 ರಷ್ಟು ವೆಚ್ಚವನ್ನು ಫಲಾನುಭವಿಗಳು ಭರಿಸಬೇಕಾಗುತ್ತದೆ.
- ಈ ಯೋಜನೆಯಡಿ ಸೌಲಭ್ಯ ಪಡೆಯಲು ಯಾವುದೇ ಮೂಲಗಳಿಂದ ಸಾಧನ ಸಲಕರಣೆಗಳನ್ನು ಪಡೆದು ಕನಿಷ್ಠ 3 ವರ್ಷಗಳಾಗಿರಬೇಕು. 12 ವರ್ಷಕ್ಕಿಂತ ಕಡಿಮೆಯಿರುವ ಮಗುವಿಗೆ ಈ ಮಿತಿಯನ್ನು ಒಂದು ವರ್ಷಕ್ಕೆ ನಿಗದಿಪಡಿಸಿದೆ.
- ವಿಕಲಚೇತನರಿಗೆ ಒದಗಿಸುವ ಪ್ರತಿ ಸಾಧನ ಸಲಕರಣೆಯ ಗರಿಷ್ಠ ಮೌಲ್ಯ ರೂ.10000/-ಗಳಾಗಿರುತ್ತದೆ.

**ಅಡಿಪ್ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಸ್ಥೆಗಿರಬೇಕಾದ ಅರ್ಹತೆಗಳು:**

- ಸಂಘಗಳ ನೊಂದಣಿ ಅಧಿನಿಯಮ 1860, ಟ್ರಸ್ಟ್ ಆಕ್ಟ್‌ನಡಿ ನೊಂದಣಿಯಾದ ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಡಿ.ಡಿ.ಆರ್.ಸಿ, ಜಿಲ್ಲಾ ಪಂಚಾಯತ್ ಪುರಸಭೆಗಳು, ಜಿಲ್ಲಾ ಸ್ವಾಯುತ್ತ ಸಂಸ್ಥೆಗಳು, ನೆಹರು ಯುವಕ ಕೇಂದ್ರ, ನೊಂದಾಯಿತ ಆಸ್ಪತ್ರೆಗಳು ಪ್ರಸ್ತಾವನೆಗಳನ್ನು ಸಲ್ಲಿಸಬಹುದಾಗಿದೆ.
- ಪ್ರಸ್ತಾವನೆಗಳನ್ನು ಕೇಂದ್ರ ಸರ್ಕಾರಕ್ಕೆ ಆನ್‌ಲೈನ್ ಮೂಲಕ ಸಲ್ಲಿಸಬೇಕಾಗುತ್ತದೆ. ಪ್ರಸ್ತಾವನೆಯು ನಿಗದಿತ ಅರ್ಜಿ ನಮೂನೆ, 2 ವರ್ಷಗಳ ಲೆಕ್ಕತಪಾಸಣಾ ವರದಿ, ವಾರ್ಷಿಕ ವರದಿ, ಫಲಾನುಭವಿಗಳ ಪಟ್ಟಿ, ತಾಂತ್ರಿಕ ವರದಿ, ಇತ್ಯಾದಿಗಳನ್ನು ಸಲ್ಲಿಸಬೇಕು.
- **ವೆಬ್‌ಸೈಟ್ ವಿಳಾಸ www.ministry of social justice and empowerment.nic.in ಅನ್ನು ಸಂಪರ್ಕಿಸಬಹುದು ಹಾಗೂ ಈ ಯೋಜನೆಯಡಿ ಸ್ವಯಂಸೇವಾಸಂಸ್ಥೆಗಳು ಅನುದಾನ ಕೋರಿ e-anudan ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ.**

### 4. ರಾಷ್ಟ್ರೀಯ ವಿದ್ಯಾರ್ಥಿ ವೇತನ ಯೋಜನೆ (National E-Scholarship):

- ಕೇಂದ್ರ ಸರ್ಕಾರವು ನ್ಯಾಷನಲ್ ಇ ಸ್ಕಾಲರ್‌ಶಿಪ್ ಯೋಜನೆಯಡಿ ವಿಕಲಚೇತನ ವಿದ್ಯಾರ್ಥಿಗಳ ವ್ಯಾಸಂಗವನ್ನು ಉತ್ತೇಜಿಸುವ ನಿಟ್ಟಿನಲ್ಲಿ 09 ಮತ್ತು 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರಿ-ಮೆಟ್ರಿಕ್ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ.
- ಪಿ.ಯು.ಸಿಯಿಂದ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪೋಸ್ಟ್‌ಮೆಟ್ರಿಕ್ ವಿದ್ಯಾರ್ಥಿವೇತನ ಗರಿಷ್ಠ ರೂ.15000/-ಗಳನ್ನು ನೀಡಲಾಗುತ್ತದೆ.
- ಸ್ನಾತಕೋತ್ತರ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಟಾಪ್‌ಮೆಟ್ರಿಕ್ ವೇತನ ಗರಿಷ್ಠ ರೂ.2.00 ಲಕ್ಷಗಳನ್ನು ಈ ಯೋಜನೆಯಡಿ ನೀಡಲಾಗುತ್ತಿದೆ.

### 5. ಸುಗಮ್ಯ ಭಾರತ ಅಭಿಯಾನ (Accessible India Campaign – AIC ):

ಈ ಯೋಜನೆಯನ್ನು ರಾಜ್ಯದಲ್ಲಿ 2018-19ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯಡಿ ಕೇಂದ್ರ ಸರ್ಕಾರವು ಗುರುತಿಸಲ್ಪಟ್ಟ 50 ಸರ್ಕಾರಿ ಸಾರ್ವಜನಿಕ ಕಟ್ಟಡಗಳ ಪೈಕಿ 47 ಸರ್ಕಾರಿ ಸಾರ್ವಜನಿಕ ಕಟ್ಟಡಗಳಲ್ಲಿ ತಡೆರಹಿತ ವಾತಾವರಣ ನಿರ್ಮಿಸಲು ಕೇಂದ್ರ ಸರ್ಕಾರದಿಂದ 2018-19ನೇ ಸಾಲಿನಲ್ಲಿ 20 ಕಟ್ಟಡಗಳಿಗೆ ಹಾಗೂ 2019-20ರ ಸಾಲಿನಲ್ಲಿ 27 ಕಟ್ಟಡಗಳಿಗೆ ಆಯವ್ಯಯವನ್ನು ಬಿಡುಗಡೆ ಮಾಡಿದ್ದು, ಅದರಲ್ಲಿ 18 ಕಟ್ಟಡಗಳ ಕಾಮಗಾರಿ ಪೂರ್ಣಗೊಂಡಿರುತ್ತದೆ. ಉಳಿದ 02 ಕಟ್ಟಡಗಳ ಕಾಮಗಾರಿಗಳಲ್ಲಿ ಲೇಡಿ ಕರ್ಜನ್ & ಬೌರಿಂಗ್ ಆಸ್ಪತ್ರೆಯ ಕಟ್ಟಡಕ್ಕೆ ಬಿಡುಗಡೆ ಮಾಡಿದ ಆಯವ್ಯಯವನ್ನು ಹಿಂದಿರುಗಿಸಿರುತ್ತಾರೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯವರು ಆಯವ್ಯಯದ ಅವಶ್ಯಕತೆಯಿಲ್ಲವೆಂದು ತಿಳಿಸಿರುತ್ತಾರೆ.

### 6. ಮಾದಕ ವಸ್ತು ವ್ಯಸನಿಗಳ ಪುನರ್ವಸತಿ ಕೇಂದ್ರಗಳು (Integrated Rehabilitation Center for Drug Addicts):

1. ಈ ಯೋಜನೆಯಡಿ ಮಾದಕ ವಸ್ತು ವ್ಯಸನಿಗಳನ್ನು ಪುನರ್ವಸತಿಗಾಗಿ ಈ ಕೇಂದ್ರಗಳಿಗೆ ದಾಖಲು ಮಾಡಲಾಗುವುದು.
2. ಸದರಿ ಯೋಜನೆಯಡಿ 26 ಜಿಲ್ಲೆಗಳಲ್ಲಿ 32 "ಮಾದಕ ವಸ್ತು ವ್ಯಸನಿಗಳ ಪುನರ್ವಸತಿ ಕೇಂದ್ರಗಳನ್ನು" ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ. ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿಯನ್ನು ಸಂಪರ್ಕಿಸಬಹುದು.
3. ಈ ಯೋಜನೆಯಡಿ ಸ್ವಯಂ ಸೇವಾಸಂಸ್ಥೆಗಳು ಅನುದಾನ ಕೋರಿ e-anudan ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ.

### 7. ನ್ಯಾಷನಲ್ ಆಕ್ಷನ್ ಪ್ಲಾನ್ ಫಾರ್ ಡ್ರಗ್ ಡಿಮ್ಯಾಂಡ್ ರಿಡಕ್ಷನ್ (National Action Plan for Drug Demand Reduction-NAPDDR):

ಈ ಯೋಜನೆಯನ್ನು ರಾಜ್ಯದಲ್ಲಿ 2018-19ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ.ಈ ಯೋಜನೆಯಡಿ ಮಾದಕ ವಸ್ತು ವ್ಯಸನಿಗಳ ತಡೆಗಟ್ಟುವ ಶಿಕ್ಷಣ, ಮಾದಕ ವಸ್ತು ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತಿ, ಸಾಮರ್ಥ್ಯವರ್ಧನೆ, ನಿರ್ದಿಷ್ಟ ಗುಂಪುಗಳಲ್ಲಿ ಮಾದಕ

34

ವಸ್ತು ತಡೆಗಟ್ಟುವ ಮಧ್ಯಸ್ಥಿಕೆ (Preventive education and Awareness generation, Capacity Buidling, Specific Intervention) ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತದೆ.

**8. ನಶಾ ಮುಕ್ತ ಭಾರತ ಅಭಿಯಾನ:**

1. ಈ ಯೋಜನೆಯನ್ನು ರಾಜ್ಯದಲ್ಲಿ 2020-21ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ.
2. ಮಾದಕ ವಸ್ತು ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ವ್ಯಾಪಕ ಪ್ರಚಾರ ನೀಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ.
3. ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಮೊದಲ ಹಂತದಲ್ಲಿ 06 ಜಿಲ್ಲೆಗಳನ್ನು (ಬೆಂಗಳೂರು, ರಾಮನಗರ, ಮೈಸೂರು, ಕೊಡಗು, ಉಡುಪಿ ಹಾಗೂ ಕೋಲಾರ) 2ನೇ ಹಂತದಲ್ಲಿ 04 ಜಿಲ್ಲೆಗಳನ್ನು (ಬೆಳಗಾವಿ, ರಾಯಚೂರು, ವಿಜಯಪುರ ಹಾಗೂ ತುಮಕೂರು) ಮತ್ತು 3ನೇ ಹಂತದಲ್ಲಿ ಬಾಕಿ ಉಳಿದ 21 ಜಿಲ್ಲೆಗಳನ್ನು ಗುರುತಿಸಲಾಗಿರುತ್ತದೆ.
4. ಮೊದಲ ಹಂತದ 06 ಜಿಲ್ಲೆಗಳಲ್ಲಿ ಕೇಂದ್ರ ಸರ್ಕಾರದಿಂದ ನೇರವಾಗಿ ಜಿಲ್ಲಾಧಿಕಾರಿಗಳ ಮುಖಾಂತರ ಅನುಷ್ಠಾನಗೊಳಿಸಲಾಗುತ್ತಿದೆ. 02ನೇ ಮತ್ತು 03ನೇ ಹಂತದಲ್ಲಿ ಗುರುತಿಸಲಾದ ಜಿಲ್ಲೆಗಳಿಗೆ ಕೇಂದ್ರ ಸರ್ಕಾರದಿಂದ ಆಯವ್ಯಯ ಬಿಡುಗಡೆ ಮಾಡಿರುವುದಿಲ್ಲ.

**9. ವಿಕಲಚೇತನರಲ್ಲಿಯ ಅಂಗವಿಕಲತೆಯನ್ನು ನಿರ್ಧರಿಸಲು ವೈದ್ಯಕೀಯ ಪ್ರಾಧಿಕಾರ ಹಾಗೂ ವಿಕಲಚೇತನರಿಗೆ ವಿಶಿಷ್ಟ ಗುರುತಿನ ಚೀಟಿ (ಯು.ಡಿ.ಐ.ಡಿ) ವಿತರಣೆ**

**ವಿಕಲಚೇತನರಿಗೆ ವಿಶಿಷ್ಠ ಗುರುತಿನ ಚೀಟಿ**(UNIQUE DISABILITY ID): ನೀಡುವ ಯೋಜನೆಯು ಕೇಂದ್ರ ಸರ್ಕಾರ ಪ್ರಾಯೋಜಿತ ಯೋಜನೆಯಾಗಿದೆ. ಈ ಯೋಜನೆಯನ್ನು ರಾಜ್ಯ ಸರ್ಕಾರವು 2019ರಲ್ಲಿ ಅನುಷ್ಟಾನಗೊಳಿಸಿರುತ್ತದೆ. ಈ ಯೋಜನೆಯಡಿಯಲ್ಲಿ ನೀಡಲಾಗುವ ಗುರುತಿನ ಚೀಟಿಯನ್ನು ವಿವಿಧ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಉಪಯೋಗಿಸಿಕೊಳ್ಳಬಹುದಾಗಿದೆ. ರಾಜ್ಯ ಸರ್ಕಾರದಿಂದ ನೇಮಿಸಲಾಗುವ ವೈದ್ಯಕೀಯ ಪ್ರಾಧಿಕಾರಗಳಿಂದ ದೃಢೀಕರಿಸಲಾಗುವ ವೈದ್ಯಕೀಯ ಪ್ರಮಾಣ ಪತ್ರದ ಸಮಗ್ರ ಮಾಹಿತಿಯುಳ್ಳ ಗಣಕೀಕೃತ ಗುರುತಿನ ಚೀಟಿಯನ್ನು ವಿಕಲಚೇತನ ವ್ಯಕ್ತಿಗಳಿಗೆ ನೀಡುವ ವ್ಯವಸ್ಥೆಯಾಗಿದ್ದು, ಇದರಲ್ಲಿ ವಿಕಲಚೇತನ ವ್ಯಕ್ತಿಯ ವಿವರಗಳು ಹಾಗೂ ಅವರಲ್ಲಿರುವ ವಿಕಲತೆಯ ವಿವರ ಮತ್ತು ಪ್ರಮಾಣವನು ನಮೂದಿಸಲಾಗಿರುತ್ತದೆ.

**ನೋಂದಣಿ ಪ್ರಕ್ರಿಯೆಗೆ ಬೇಕಾಗುವ ಅಗತ್ಯ ದಾಖಲೆಗಳು:**

1. ಸ್ಕ್ಯಾನ್ ಮಾಡಲಾದ ಪಾಸ್‌ಪೋರ್ಟ್ ಅಳತೆಯ ಫೋಟೋ
2. ಸ್ಕ್ಯಾನ್ ಮಾಡಲಾದ ಸಹಿ/ ಹೆಬ್ಬೆಟ್ಟಿನ ಗುರುತಿನ ಪ್ರತಿ
3. ಆಧಾರ್ ಕಾರ್ಡ್/ಡ್ರೈವಿಂಗ್ ಲೈಸೆನ್ಸ್/ಪಾಸ್‌ಪೋರ್ಟ್/ ರೇಷನ್ ಕಾರ್ಡ್/ ವೋಟರ್ ಐಡಿ/ ವಾಸಸ್ಥಳ ಧೃಢೀಕರಣ ಪ್ರಮಾಣ ಪತ್ರ ಯಾವುದಾದರೂ ಒಂದು.
4. ಅಂಗವೈಕಲ್ಯ ಪ್ರಮಾಣ ಪತ್ರ ಹೊಂದಿದ್ದಲ್ಲಿ ಸ್ಕ್ಯಾನ್‌ಮಾಡಿ ಅಪ್ ಲೋಡ್ ಮಾಡಬೇಕು.

ವೆಬ್‌ಸೈಟ್-**www.swavlambancard.gov.in**ಮೂಲಕ ಆನ್‌ಲೈನ್ ನೋಂದಣಿ ಮಾಡಬಹುದು.

**ಪ್ರಯೋಜನ:**

- ಯು.ಡಿ.ಐ.ಡಿ ಕಾರ್ಡ್ ವಿಕಲಚೇತನ ವ್ಯಕ್ತಿಗಳ ಗುರುತಿನ ಏಕೈಕ ದಾಖಲೆಯಾಗಿರುತ್ತದೆ.
- ಯು.ಡಿ.ಐ.ಡಿ ಕಾರ್ಡ್ ಭಾರತದಾದ್ಯಂತ ವಿಕಲಚೇತನ ವ್ಯಕ್ತಿಗಳ ಅಂಗವೈಕಲ್ಯತೆ ಪುರಾವೆಯಾಗಿ ಪರಿಗಣಿಸಲಾಗುತ್ತದೆ.
- ವಿಕಲಚೇತನರು ಸರ್ಕಾರದ ವಿವಿಧ ಯೋಜನೆಗಳಾದ ವಿದ್ಯಾರ್ಥಿ ವೇತನ, ಕೌಶಲ್ಯ ತರಬೇತಿ, ಸಮನ್ವಯ ಶಿಕ್ಷಣ, ಪುನರ್ವಸತಿ ಯೋಜನೆ, ಪಿಂಚಣಿ, ರೈಲ್ವೆ ರಿಯಾಯಿತಿ ಮುಂತಾದ ಸೌಲಭ್ಯಗಳನ್ನು ಪಡೆಯಬಹುದು.
- ಯು.ಡಿ.ಐ.ಡಿ ಕಾರ್ಡನ ಸಹಾಯದಿಂದ ಎಲ್ಲಾ ಹಂತಗಳಲ್ಲಿ ವಿಕಲಚೇತನರಿಗೆ ಒದಗಿಸಲಾಗುವ ಸೌಲಭ್ಯಗಳ ಆರ್ಥಿಕ ಹಾಗೂ ಭೌತಿಕ ಪ್ರಗತಿಯನ್ನು ಗುರುತಿಸಲು ಸಹಾಯಕಾರಿ.
- ವಿಕಲಚೇತನರ ಅಂಕಿ ಅಂಶಗಳನ್ನು ನಿರ್ವಹಣೆಗೆ ಸುಲಭವಾಗಿರುತ್ತದೆ.
- ಸ್ಮಾರ್ಟ್ ಕಾರ್ಡ್ ರೂಪದಲ್ಲಿ ಗುರುತಿನ ಚೀಟಿಯನ್ನು ನೀಡುವುದರಿಂದ ನಿರ್ವಹಣೆ ಸುಲಭ
- ಯುಡಿಐಡಿ ಕಾರ್ಡ್ ವಿಕಲಚೇತನ ವ್ಯಕ್ತಿಗಳ ಗುರುತು, ಅಂಗವೈಕಲ್ಯತೆಯ ಪ್ರಮಾಣ ಹಾಗೂ ಎಲ್ಲಾ ಅಗತ್ಯ ವಿವರಗಳನ್ನು ದಾಖಲಿಸಿಕೊಳ್ಳುವುದರಿಂದ ಇ-ರೀಡರ್ ಸಹಾಯದಿಂದ ಡಿಕೋಡ್ ಮಾಡುವುದರಿಂದ ಏಕಕಾಲದಲ್ಲಿ ವಿಕಲಚೇತನ ವ್ಯಕ್ತಿಗಳ ಇತರೆ ದಾಖಲೆಗಳನ್ನು ಕಾಣಬಹುದಾಗಿರುತ್ತದೆ.

**ಷರತ್ತುಗಳು:**

- ಶೇ.40ಕ್ಕಿಂತ ಮೇಲ್ಪಟ್ಟು ಅಂಗವಿಕಲತೆಗೆ ಹೊಂದಿರುವ ವಿಕಲಚೇತನರಿಗೆ ಮಾತ್ರ ಗುರುತಿನ ಚೀಟಿ (ವೈದ್ಯಕೀಯ ಪ್ರಮಾಣ ಪತ್ರ)ನೀಡಲಾಗುವುದು.
- ಯು.ಡಿ.ಐ.ಡಿ ಕಾರ್ಡ್‌ನ್ನು ಅಂಚೆ ಮೂಲಕ ಪೋಸ್ಟ್ ಮೂಲಕ ವಿಕಲಚೇತನರಿಗೆ ತಲುಪಿಸಲಾಗುತ್ತದೆ.
- ವಿವಿಧ ಬಗೆಯ ಅಂಗವಿಕಲರಿಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡುವ ವಿಧಾನವನ್ನು ಸರಳೀಕರಿಸಲು ವೈದ್ಯಕೀಯ ಪ್ರಾಧಿಕಾರಗಳನ್ನು ರಚಿಸಿದೆ.
- ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಸೂಚನೆ ಸಂಖ್ಯೆ: ಹೆಚ್.ಎಫ್.ಡಬ್ಲ್ಯೂ39 ಸಿ.ಜಿ.ಇ:2018, ದಿನಾಂಕ:20.02.2019ರನ್ವಯ ಈ ಕೆಳಕಂಡಂತೆ ಅಂಗವಿಲತೆ ಪ್ರಮಾಣ ಪತ್ರವನ್ನು ನೀಡುವ ಉದ್ದೇಶಕ್ಕೆ **"Certifying Authority"** ಎಂದು ಮಾಡಲಾಗಿದೆ.

**ಜಿಲ್ಲಾ ಮಟ್ಟದಲ್ಲಿ ಯುಡಿಐಡಿ ಪ್ರಕ್ರಿಯೆ**

ಪ್ರತಿ ಜಿಲ್ಲೆಯಲ್ಲಿ ಆಯಾ ಜಿಲ್ಲೆಯ ಅಧಿಕಾರ ವ್ಯಾಪ್ತಿಯೊಂದಿಗೆ ಕೆಳಗೆ ನಿರ್ದಿಷ್ಟಪಡಿಸಿದ ಸದಸ್ಯರನ್ನು ಒಳಗೊಂಡಿರುವ ಪ್ರಮಾಣೀಕರಿಸುವ ಪ್ರಾಧಿಕಾರಗಳು ಇರುತ್ತವೆ, ಅವುಗಳೆಂದರೆ,

**ಎ) ವೈದ್ಯಕೀಯ ಕಾಲೇಜಿಗೆ ಹೊಂದಿಕೊಂಡಿರುವ ಸರ್ಕಾರಿ ಆಸ್ಪತ್ರೆಯಲ್ಲಿ:**

1) ವೈದ್ಯಕೀಯ ಅಧೀಕ್ಷಕರು

2) ಅಧ್ಯಕ್ಷರಿಂದ ನೇಮಕಗೊಂಡ ಸಂಬಂಧಿತ ಅಂಗವೈಕಲ್ಯಕ್ಕೆ ಸಂಬಂಧಿಸಿದಂತೆ ಓರ್ವ ಸರ್ಕಾರಿತಜ್ಞರು ಅಂಗವೈಕಲ್ಯ ಹೊಂದಿರುವ ವ್ಯಕ್ತಿ 18 ವರ್ಷಕ್ಕಿಂತ ಮೇಲ್ಪಟ್ಟವರಾಗಿದ್ದರೆ ಸ್ನಾತಕೋತ್ತರ ಪದವಿ ಹೊಂದಿರುವ ಓರ್ವ ಸರ್ಕಾರಿ ವೈದ್ಯರು(ಜನರಲ್ ಫಿಜಿಶಿಯನ್) ಹಾಗೂ ಅಂಗವೈಕಲ್ಯತೆಯುಳ್ಳ ಚಿಕ್ಕ ಮಕ್ಕಳಿಗೆ ಓರ್ವ ಮಕ್ಕಳ ವೈದ್ಯರು(ಪಿಡಿಯಾಟ್ರಿಷಿಯನ್)ಗಳನ್ನು ಅಧ್ಯಕ್ಷರು ನೇಮಿಸುತ್ತಾರೆ.

**ಬಿ) ವೈದ್ಯಕೀಯ ಕಾಲೇಜಿಗೆ ಹೊಂದಿಕೊಂಡಿರದ ಸರ್ಕಾರಿ ಆಸ್ಪತ್ರೆಯಲ್ಲಿ:**

1) ವೈದ್ಯಕೀಯ ಅಧೀಕ್ಷಕರು / ಆಸ್ಪತ್ರೆಯ ಮುಖ್ಯಸ್ಥರು ಅಥವಾ ಜಿಲ್ಲಾ ಸರ್ಜನ್ – ಅಧ್ಯಕ್ಷರು

2) ಸಂಬಂಧಿತ ಅಂಗವೈಕಲ್ಯಕ್ಕೆ ಸಂಬಂಧಿಸಿದಂತೆ ಅಧ್ಯಕ್ಷರಿಂದ ನೇಮಕಗೊಂಡ ಸಂಬಂಧಿತ ಅಂಗವಿಕಲತೆಯ ಒಬ್ಬೊಬ್ಬರು ಸರ್ಕಾರಿ ತಜ್ಞರು

3) ಅಂಗವೈಕಲ್ಯ ಹೊಂದಿರುವ ವ್ಯಕ್ತಿ 18 ವರ್ಷಕ್ಕಿಂತ ಮೇಲ್ಪಟ್ಟವರಾಗಿದ್ದರೆ ಸ್ನಾತಕೋತ್ತರ ಪದಪಿ ಹೊಂದಿರುವ ಓರ್ವ ಸರ್ಕಾರಿ ವೈದ್ಯರು(ಜನರಲ್ ಫಿಜಿಶಿಯನ್) ಹಾಗೂ ಅಂಗವೈಕಲ್ಯತೆಯುಳ್ಳ ಚಿಕ್ಕ ಮಕ್ಕಳಿಗೆ ಓರ್ವ ಮಕ್ಕಳ ವೈದ್ಯರು(ಪಿಡಿಯಾಟ್ರಿಷಿಯನ್)ಗಳನ್ನು ಅಧ್ಯಕ್ಷರು ನೇಮಿಸುತ್ತಾರೆ.

**ತಾಲ್ಲೂಕು ಮಟ್ಟದಲ್ಲಿ ಯುಡಿಐಡಿ ಪ್ರಕ್ರಿಯೆ**

1. **ಸರ್ಕಾರಿ ಆಸ್ಪತ್ರೆಯಲ್ಲಿ ಪ್ರತಿ ತಾಲ್ಲೂಕಿನಲ್ಲಿ ಆಯಾ ತಾಲ್ಲೂಕಿನ ಅಧಿಕಾರ ವ್ಯಾಪ್ತಿಯೊಂದಿಗೆ ಕೆಳಗೆ ನಿರ್ದಿಷ್ಟಪಡಿಸಿದ ಸದಸ್ಯರನ್ನು ಒಳಗೊಂಡಿರುವ ಪ್ರಮಾಣೀಕರಿಸುವ ಪ್ರಾಧಿಕಾರವಿರುತ್ತದೆ.**
2. ಆಡಳಿತ ವೈದ್ಯಕೀಯ ಅಧಿಕಾರಿಯನ್ನು ತಾಲ್ಲೂಕು ಆಸ್ಪತ್ರೆ ಆಡಳಿತ ವೈದ್ಯಕೀಯ ಅಧಿಕಾರಿ ಎಂದು ಬರೆಯಬೇಕು.
3. ತಾಲ್ಲೂಕು ಆಸ್ಪತ್ರೆ ಆಡಳಿತ.
4. ಅಧ್ಯಕ್ಷರಿಂದ ನೇಮಕಗೊಂಡ ಸಂಬಂಧಿತ ಅಂಗವೈಕಲ್ಯಕ್ಕೆ ಸಂಬಂಧಿಸಿದಂತೆ ಓರ್ವ ಸರ್ಕಾರಿ ತಜ್ಞರು.
5. ಅಂಗವೈಕಲ್ಯ ಹೊಂದಿರುವ ವ್ಯಕ್ತಿ 18 ವರ್ಷಕ್ಕಿಂತ ಮೇಲ್ಪಟ್ಟವರಾಗಿದ್ದರೆ ಸ್ನಾತಕೋತ್ತರ ಪದವಿ ಹೊಂದಿರುವ ಓರ್ವ ಸರ್ಕಾರಿ ವೈದ್ಯರು(ಜನರಲ್ ಫಿಜಿಶಿಯನ್) ಹಾಗೂ
6. ಅಂಗವೈಕಲ್ಯತೆಯುಳ್ಳ ಚಿಕ್ಕ ಮಕ್ಕಳಿಗೆ ಓರ್ವ ಮಕ್ಕಳ ವೈದ್ಯರು(ಪಿಡಿಯಾಟ್ರಿಷಿಯನ್)ಗಳನ್ನು ಅಧ್ಯಕ್ಷರು ನೇಮಿಸುತ್ತಾರೆ.

**ಹಿರಿಯ ನಾಗರಿಕರಿಗಾಗಿ ರಾಜ್ಯ ಸರ್ಕಾರವು ಜಾರಿಗೊಳಿಸುತ್ತಿರುವ ಯೋಜನೆಗಳು**

ಹಿರಿಯ ನಾಗರಿಕರು ಎಂದರೆ 60 ವರ್ಷ ಹಾಗೂ ಅದಕ್ಕೂ ಹೆಚ್ಚು ವಯಸ್ಸಾಗಿರುವ ಭಾರತದ ನಾಗರಿಕನಾಗಿರುವ ಯಾವುದೇ ವ್ಯಕ್ತಿ. 2011ರ ಜನಗಣತಿಯಂತೆ ಕರ್ನಾಟಕದಲ್ಲಿ ಅಂದಾಜು ಒಟ್ಟು ಜನಸಂಖ್ಯೆಯ ಶೇ.7.72ರಷ್ಟು ಅಂದರೆ 57.91 ಲಕ್ಷ ಹಿರಿಯ ನಾಗರಿಕರು ಇರುತ್ತಾರೆ.

## I. ರಾಜ್ಯವಲಯ ಯೋಜನೆಗಳು

**1. ಹಿರಿಯ ನಾಗರಿಕರಿಗಾಗಿ ಹಗಲು ಯೋಗಕ್ಷೇಮ ಕೇಂದ್ರಗಳು:**

ರಾಜ್ಯದ 30 ಜಿಲ್ಲೆಗಳಿಗೆ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದ ಮಂಜೂರಾತಿ ದೊರೆತಿದ್ದು, ಪ್ರತಿ ಕೇಂದ್ರದಲ್ಲಿ ಸುಮಾರು 50–150 ಫಲಾನುಭವಿಗಳಿಗೆ ಅವಕಾಶ ಕಲ್ಪಿಸಿಕೊಡಲಾಗಿದ್ದು, ಸದರಿ ಯೋಜನೆಗೆ ಸರ್ಕಾರದಿಂದ ವಾರ್ಷಿಕ ರೂ.11.20 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗುತ್ತದೆ. ಪ್ರಸ್ತುತ 24 ಜಿಲ್ಲೆಗಳಲ್ಲಿ (ಬೆಂಗಳೂರು ನಗರ ಜಿಲ್ಲೆ 02 ಸೇರಿದಂತೆ) 25 ಹಗಲು ಯೋಗಕ್ಷೇಮ ಕೇಂದ್ರಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ.

**ಉದ್ದೇಶ:**

ಹಿರಿಯ ನಾಗರಿಕರಿಗೆ ಆರೋಗ್ಯ ಮತ್ತು ವೈದ್ಯಕೀಯ ಸೌಲಭ್ಯಗಳನ್ನು ಕಲ್ಪಿಸುವುದು, ಹಿರಿಯರಲ್ಲಿ ಅಡಗಿರುವ ಸಂಪನ್ಮೂಲ ಶಕ್ತಿಯನ್ನು ಉಪಯೋಗಿಸಿಕೊಂಡು ದೇಶದ ಅಭಿವೃದ್ಧಿಗೆ ಶ್ರಮಿಸುವುದು ಆದ್ಯ ಕರ್ತವ್ಯವಾಗಿರುತ್ತದೆ.

**ಸೌಲಭ್ಯ ಪಡೆಯಬಹುದಾದ ಹಿರಿಯ ನಾಗರಿಕರು:**

- ಸಂಕಷ್ಟ/ಸೌಲಭ್ಯ ವಂಚಿತರಾಗಿರುವ ಯಾವುದೇ ಹಿರಿಯ ನಾಗರಿಕರು.

**ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರ ನಡೆಸಲು ಸ್ವಯಂ ಸೇವಾ ಸಂಸ್ಥೆಗೆ ಇರಬೇಕಾದ ಅರ್ಹತೆಗಳು:**

- ಸೊಸೈಟಿಸ್ ರಿಜಿಸ್ಟ್ರೇಷನ್ ಆಕ್ಟ್ / ಟ್ರಸ್ಟ್ ಆಕ್ಟ್‌ನಡಿ ನೋಂದಣಿಯಾದ ಸಂಸ್ಥೆಯಾಗಿರಬೇಕು
- ಸಂಸ್ಥೆಯು ನೋಂದಣಿಯಾಗಿ ಕನಿಷ್ಠ 2 ವರ್ಷಗಳಾಗಿರಬೇಕು.
- ಹಗಲು ಯೋಗಕ್ಷೇಮ ಕೇಂದ್ರದಲ್ಲಿ ಸರ್ಕಾರದ ಆದೇಶಗಳಲ್ಲಿ ನಿಗದಿಪಡಿಸಲಾದ ವಿದ್ಯಾರ್ಹತೆಯುಳ್ಳ ಸೇವಾ ಮನೋಭಾವದ ಸಿಬ್ಬಂದಿಗಳನ್ನು ಹೊಂದಿರಬೇಕು.
- ಹಿರಿಯ ನಾಗರಿಕರ ಅವಶ್ಯಕತೆಗಳನ್ನು ಪೂರೈಸುವ, ಮೂಲಭೂತ ಸೌಕರ್ಯ ಒದಗಿಸುವ ಸೇವಾ ಮನೋಭಾವ ಹೊಂದಿರುವ ಆಡಳಿತ ಮಂಡಳಿಯನ್ನು ಹೊಂದಿರಬೇಕು. ಸಂಸ್ಥೆಯ ಆಡಳಿತ ಮಂಡಳಿಯ, ಕರ್ತವ್ಯಗಳು ಮತ್ತು ಜವಾಬ್ದಾರಿಗಳನ್ನು ಸ್ಪಷ್ಟ ಹಾಗೂ ಖಚಿತವಾಗಿರುವ ಉಪನಿಯಮಗಳನ್ನು (ಬೈಲಾ) ಹೊಂದಿರಬೇಕು.
- ಸಂಸ್ಥೆಯ ಆರ್ಥಿಕ ಸ್ಥಿತಿಗತಿಯು ಸದೃಡವಾಗಿರಬೇಕು.
- ಯಾವುದೇ ವ್ಯಕ್ತಿ ಹಾಗೂ ಜನಾಂಗದ ಲಾಭಕ್ಕಾಗಿ ಸಂಸ್ಥೆಯನ್ನು ನಡೆಸುತ್ತಿರಬಾರದು.
- ಸಂಸ್ಥೆಯು ಯಾವುದೇ ಜಾತಿ, ಪಂಥ, ಮತ ಮತ್ತು ಭಾಷೆಗಳನ್ನು ಪರಿಗಣಿಸದೇ ಎಲ್ಲರಿಗೂ ಸೌಲಭ್ಯ ಒದಗಿಸಬೇಕು.

**ಸಂಸ್ಥೆಯ ಆಯ್ಕೆ ವಿಧಾನ:**

- ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರ ಪ್ರಾರಂಭಿಸಲು ಇಚ್ಛಿಸುವ ಸ್ವಯಂ ಸೇವಾ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಿ ಪತ್ರಿಕಾ ಪ್ರಕಟಣೆ ನೀಡುವುದು.
- ಸ್ವೀಕೃತವಾದ ಅರ್ಜಿಗಳನ್ನು ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣಾ ಕಾಯ್ದೆ 2007ರನ್ವಯ ಸಮರ್ಪಕವಾಗಿ ಅನುಷ್ಠಾನಗೊಳಿಸಲು ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳವರ ಅಧ್ಯಕ್ಷತೆಯಲ್ಲಿರುವ ಜಿಲ್ಲಾ ಮಟ್ಟದ ಸಮಿತಿಯಲ್ಲಿ ಮಂಡಿಸುವುದು. ಸಮಿತಿಯಲ್ಲಿ ಆಯ್ಕೆಯಾದ ಒಂದು ಪ್ರಸ್ತಾವನೆಯನ್ನು ಮಾತ್ರ ಆಡಳಿತಾತ್ಮಕ ಅನುಮೋದನೆಗಾಗಿ ಜಿಲ್ಲಾ ಮಟ್ಟದ ಸಮಿತಿಯ ಸಭಾ ನಡವಳಿ, ತಪಾಸಣಾ ವರದಿ ಹಾಗೂ ಪ್ರಸ್ತಾವನೆಯೊಂದಿಗೆ ಪ್ರಧಾನ ಕಛೇರಿಗೆ ಸಲ್ಲಿಸುವುದು.
- ಸರ್ಕಾರದಿಂದ ಆಡಳಿತಾತ್ಮಕ ಮಂಜೂರಾತಿ ದೊರೆತ ನಂತರ ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರ ಪ್ರಾರಂಭಿಸುವುದು.

2. **ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು:**

ಹಿರಿಯ ನಾಗರಿಕರು ಕಿರುಕುಳ, ಹಣಕಾಸಿನ ಶೋಷಣೆ, ಮಾನಸಿಕ ತುಮುಲ ಮತ್ತು ದುರ್ಬಲರಾಗಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇಂತಹ ಸಮಸ್ಯೆಗಳ ನಿವಾರಣೆಗಾಗಿ ಹಾಗೂ ತುರ್ತು ಸಹಾಯಕ್ಕಾಗಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ರಾಜ್ಯದ 30 ಜಿಲ್ಲೆಗಳಲ್ಲಿ ನಡೆಸಲು ಆಡಳಿತಾತ್ಮಕ ಮಂಜೂರಾತಿ ದೊರೆತಿರುತ್ತದೆ. ಬೆಳಗಾವಿ, ಕಲಬುರಗಿ, ಉತ್ತರ ಕನ್ನಡ ಮತ್ತು ಹಾವೇರಿ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದಂತೆ 26 ಜಿಲ್ಲೆಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ, ಸ್ವಯಂಸೇವಾ ಸಂಸ್ಥೆಗಳ ಸಹಯೋಗದಿಂದ ನಡೆಸಲಾಗುತ್ತಿದೆ.

**ಉದ್ದೇಶ:**

ಹಿರಿಯ ನಾಗರಿಕರ ರಕ್ಷಣೆಗಾಗಿ, ಉಚಿತ ಕಾನೂನು ಸಲಹೆ, ಆಪ್ತ ಸಲಹೆ ನೀಡಲು ಹಾಗೂ ಸಮಸ್ಯೆಗಳ ತುರ್ತು ಸ್ಪಂದನೆಗಾಗಿ ದಿನದ 24 ಗಂಟೆಯೂ ಕಾರ್ಯನಿರ್ವಹಿಸುವ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ (ಟೋಲ್ ಫ್ರೀ ದೂರವಾಣಿ ಸಂಖ್ಯೆ:1090)ಗಳನ್ನು ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿಯ ಆವರಣದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. ಕೇಂದ್ರ ಸರ್ಕಾರದಿಂದ ರಾಷ್ಟ್ರೀಯ ಹಿರಿಯ ನಾಗರಿಕರ

ಸಹಾಯವಾಣಿ 14567 ಕೂಡ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿದೆ. ಪ್ರಸ್ತುತ 26 ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು ನಡೆಯುತ್ತಿವೆ.

**ಸೌಲಭ್ಯ ಪಡೆಯಲು ಇರಬೇಕಾದ ಅರ್ಹತೆಗಳು:**

- ಸಂಕಷ್ಟದಲ್ಲಿರುವ ಅಥವಾ ಸೌಲಭ್ಯವಂಚಿತರಾದ ಹಿರಿಯ ನಾಗರಿಕರು ಸಹಾಯವಾಣಿಗೆ ಕರೆ ಮಾಡಿ ತಮ್ಮ ಅಹವಾಲನ್ನು ಸಲ್ಲಿಸಬಹುದು.

**ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ ನಡೆಸಲು ಸ್ವಯಂ ಸೇವಾ ಸಂಸ್ಥೆಗೆ ಇರಬೇಕಾದ ಅರ್ಹತೆಗಳು:**

- ಸೊಸೈಟಿಸ್ ರಿಜಿಸ್ಟ್ರೇಷನ್ ಆಕ್ಟ್ / ಟ್ರಸ್ಟ್ ಆಕ್ಟ್‌ನಡಿ ನೋಂದಣಿಯಾದ ಸಂಸ್ಥೆಯಾಗಿರಬೇಕು.
- ಸಂಸ್ಥೆಯು ನೋಂದಣಿಯಾಗಿ ಕನಿಷ್ಠ 2 ವರ್ಷಗಳಾಗಿರಬೇಕು.
- ಸಹಾಯವಾಣಿ ಕೇಂದ್ರದಲ್ಲಿ ಸರ್ಕಾರದ ಅದೇಶಗಳಲ್ಲಿ ನಿಗದಿಪಡಿಸಲಾದ ವಿದ್ಯಾರ್ಹತೆಯುಳ್ಳ ಸೇವಾಮನೋಭಾವದ ಸಿಬ್ಬಂದಿಗಳನ್ನು ಹೊಂದಿರಬೇಕು.
- ಹಿರಿಯ ನಾಗರಿಕರ ಅವಶ್ಯಕತೆಗಳನ್ನು ಪೂರೈಸುವ, ಮೂಲಭೂತ ಸೌಕರ್ಯ ಒದಗಿಸುವ ಮನೋಭಾವ ಹೊಂದಿರುವ ಆಡಳಿತ ಮಂಡಳಿಯನ್ನು ಹೊಂದಿರಬೇಕು. ಸಂಸ್ಥೆಯು ಆಡಳಿತ ಮಂಡಳಿಯ, ಕರ್ತವ್ಯಗಳು ಮತ್ತು ಜವಾಬ್ದಾರಿಗಳನ್ನು ಸ್ಪಷ್ಟ ಹಾಗೂ ಖಚಿತವಾಗಿರುವ ಉಪನಿಯಮಗಳನ್ನು (ಬೈಲಾ) ಹೊಂದಿರಬೇಕು. ಸಂಸ್ಥೆಯ ಆರ್ಥಿಕ ಸ್ಥಿತಿಗತಿಯು ಸಧೃಡವಾಗಿರಬೇಕು, ಯಾವುದೇ ಓರ್ವ ವ್ಯಕ್ತಿ ಹಾಗೂ ಜನಾಂಗದ ಲಾಭಕ್ಕಾಗಿ ಸಂಸ್ಥೆಯನ್ನು ನಡೆಸುತ್ತಿರಬಾರದು.
- ಸಂಸ್ಥೆಯು ಯಾವುದೇ ಜಾತಿ, ಪಂಥ, ಮತ ಮತ್ತು ಭಾಷೆಗಳನ್ನು ಪರಿಗಣಿಸದೇ ಎಲ್ಲರಿಗೂ ಸೌಲಭ್ಯ ಒದಗಿಸಬೇಕು.

**ಸಂಸ್ಥೆಯ ಆಯ್ಕೆ ವಿಧಾನ:**

- ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ ಪ್ರಾರಂಭಿಸಲು ಇಚ್ಚಿಸುವ ಸ್ವಯಂ ಸೇವಾ ಸಂಸ್ಥೆಗಳು ಅರ್ಜಿ ಸಲ್ಲಿಸುವಂತೆ ಪತ್ರಿಕಾ ಪ್ರಕಟಣೆ ನೀಡುವುದು.ಸ್ವೀಕೃತವಾದ ಅರ್ಜಿಗಳನ್ನು ಪಾಲಕರ ಪೋಷಣೆ ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣಾ ಕಾಯ್ದೆ 2007ನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು (ಮುಖ್ಯ ಜಿಲ್ಲಾಧಿಕಾರಿಗಳು, ಕಾರ್ಯನಿರ್ವಾಹಣಾಧಿಕಾರಿಗಳವರ) ಅಧ್ಯಕ್ಷತೆಯಲ್ಲಿರುವ ಜಿಲ್ಲಾಮಟ್ಟದ ಸಮಿತಿಯಲ್ಲಿ ಮಂಡಿಸುವುದು.

ಸಮಿತಿಯಲ್ಲಿ ಆಯ್ಕೆಯಾದ ಒಂದು ಪ್ರಸ್ತಾವನೆಯನ್ನು ಮಾತ್ರ ಆಡಳಿತಾತ್ಮಕ ಅನುಮೋದನೆಗಾಗಿ ಜಿಲ್ಲಾಮಟ್ಟದ ಸಮಿತಿಯ ಸಭಾ ನಡವಳಿ, ತಪಾಸಣಾ ವರದಿ ಹಾಗೂ ಪ್ರಸ್ತಾವನೆಯೊಂದಿಗೆ ಪ್ರಧಾನ ಕಛೇರಿಗೆ ಸಲ್ಲಿಸುವುದು.

- ಸರ್ಕಾರದಿಂದ ಆಡಳಿತಾತ್ಮಕ ಮಂಜೂರಾತಿ ದೊರೆತ ನಂತರ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ ಪ್ರಾರಂಭಿಸುವುದು.

**ಅನುದಾನ:** ಸ್ವಯಂ ಸೇವಾ ಸಂಸ್ಥೆಗಳಿಗೆ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳ ನಿರ್ವಹಣೆಗಾಗಿ ಅನುದಾನ ವಾರ್ಷಿಕ ರೂ.7.15ಲಕ್ಷಗಳ ಅನುದಾನ ನೀಡಲಾಗುತ್ತಿದೆ.

**3. ಹಿರಿಯ ನಾಗರಿಕರಿಗೆ ಗುರುತಿನ ಚೀಟಿಗಳು:**

60 ವರ್ಷ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರು ಗುರುತಿನ ಚೀಟಿ ಪಡೆಯಲು ಸೇವಾ ಸಿಂಧು ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ದಿ:01.10.2018ರಿಂದ ಹಿರಿಯ ನಾಗರಿಕರು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಹಿರಿಯ ನಾಗರಿಕರ ಗುರುತಿನ ಚೀಟಿಯನ್ನು ಪಡೆಯಬಹುದಾಗಿದೆ.

ಉದ್ದೇಶ :

2011ರ ಜನಗಣತಿಯ ಪ್ರಕಾರ ಕರ್ನಾಟಕ ರಾಜ್ಯದಲ್ಲಿ ಅಂದಾಜು 57.91ಲಕ್ಷ ಹಿರಿಯ ನಾಗರಿಕರಿದ್ದು, ಇವರನ್ನು ಸುಲಭವಾಗಿ ಗುರುತಿಸಲು ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹಿರಿಯ ನಾಗರಿಕರಿಗಾಗಿ ವಿವಿಧ ಇಲಾಖೆಗಳ ಮೂಲಕ ಅನುಷ್ಠಾನಗೊಳಿಸುವ ಯೋಜನೆಗಳ ಪ್ರಯೋಜನ ಪಡೆಯಲು ಅನುವಾಗುವಂತೆ ಹಿರಿಯನಾಗರಿಕರಿಗೆ ಗುರುತಿನ ಚೀಟಿಗಳನ್ನು ನೀಡಲಾಗುತ್ತಿದ್ದು, ಗುರುತಿನ ಚೀಟಿ ಪಡೆಯಲು "ಸೇವಾಸಿಂಧು" ತಂತ್ರಾಂಶದ ಮೂಲಕ ಆನ್‌ಲೈನ್ ಅರ್ಜಿಸಲ್ಲಿಸಬಹುದು.

**ಗುರುತಿನ ಚೀಟಿ ಪಡೆಯುವ ವಿಧಾನ:**

ಹಿರಿಯ ನಾಗರಿಕರು ಅರ್ಜಿಯನ್ನು **"ಸೇವಾಸಿಂಧು"** ವೆಬ್ ಪೋರ್ಟಲ್- www.sevasindhu.karnataka.gov.in ಅಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸೇವೆಗಳ ವಿಭಾಗದಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಆನ್‌ಲೈನ್‌ನಲ್ಲಿಯೇ ಸಲ್ಲಿಸತಕ್ಕದ್ದು, ಅರ್ಜಿಯು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಂದ ಪರಿಶೀಲನೆಗೊಳಪಟ್ಟು, 21 ದಿನಗಳೊಳಗೆ ಹಿರಿಯ ನಾಗರಿಕರ ಗುರುತಿನ ಚೀಟಿ ನೀಡಲಾಗುವುದು.

**ಕಾರ್ಡ್ ಪಡೆಯಲು ಅನುಸರಿಸಬೇಕಾದ ಕ್ರಮಗಳು:**

- ಅರ್ಜಿಸಲ್ಲಿಸಲು ಮೊಬೈಲ್ ನಂಬರ್ ನೋಂದಾಯಿತ ಆಧಾರ ಕಾರ್ಡ್ ಹೊಂದಿರಬೇಕು.01 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ನೋಂದಣಿ ಮಾಡುವುದು.
- ಹಿರಿಯ ನಾಗರಿಕರ ಗುರುತಿನ ಚೀಟಿಯನ್ನು ಅರ್ಜಿಯಲ್ಲಿ ನೀಡುವ ಇಮೇಲ್ ಮುಖಾಂತರವೇ ಆನ್‌ಲೈನ್ ಮೂಲಕ ಪಡೆಯಬಹುದು.
- ನೋಂದಣಿಗೆ ಯಾವುದೇ ಶುಲ್ಕ ಇರುವುದಿಲ್ಲ.

**ಗುರುತಿನ ಚೀಟಿ ಪಡೆಯುವವರಿಗೆ ಇರಬೇಕಾದ ಅರ್ಹತೆಗಳು:**

60ವರ್ಷ ಹಾಗೂ ಮೇಲ್ಪಟ್ಟ ಭಾರತೀಯ ಪೌರತ್ವವನ್ನು ಹೊಂದಿದ ವಯೋವೃದ್ಧರಾಗಿರಬೇಕು.

**4. ತಂದೆ ತಾಯಿಯರ ಮತ್ತು ಹಿರಿಯ ನಾಗರಿಕರ ಪಾಲನೆ, ಪೋಷಣೆ ಹಾಗೂ ಕಲ್ಯಾಣ ಅಧಿನಿಯಮ 2007:**

ಈ ಕಾಯ್ದೆಯಡಿ ಹಿರಿಯ ನಾಗರಿಕರ ಪಾಲನೆ, ಪೋಷಣೆ ಮತ್ತು ರಕ್ಷಣೆಗಾಗಿ ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ದೌರ್ಜನ್ಯ, ಶೋಷಣೆ, ಮೋಸ ವಂಚನೆಗೆ ಒಳಪಟ್ಟ ಹಿರಿಯ ನಾಗರಿಕರು ಕಾಯ್ದೆಯಡಿ ರಚಿತವಾಗಿರುವ ಆಯಾ ಕಂದಾಯ ಉಪವಿಭಾಗದ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ನಿರ್ವಹಣಾ ನ್ಯಾಯ ಮಂಡಳಿಯಲ್ಲಿ ಪ್ರಕರಣ ದಾಖಲಿಸಿ ನ್ಯಾಯ ಪಡೆಯಬಹುದಾಗಿದೆ. ನಿರ್ವಹಣಾ ನ್ಯಾಯ ಮಂಡಳಿಯ ತೀರ್ಪು ತಮಗೆ ವಿರುದ್ಧವಾಗಿದ್ದಲ್ಲಿ ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ಮೇಲ್ಮನವಿ ನ್ಯಾಯಮಂಡಳಿಯಲ್ಲಿ ನ್ಯಾಯವನ್ನು ಪಡೆಯಬಹುದಾಗಿದೆ.

ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯ್ದೆ-2007 ಅನ್ನು ದಿನಾಂಕ:01.04.2008ರಿಂದ ಕರ್ನಾಟಕ ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ಸದರಿ ಕಾಯ್ದೆಯಡಿ ದೌರ್ಜನ್ಯ, ಶೋಷಣೆ, ಮೋಸ, ವಂಚನೆಗೆ ಒಳಪಟ್ಟ ಹಿರಿಯ ನಾಗರಿಕರು ಕಾಯ್ದೆಯ ಪರಿಚ್ಛೇದ 7ರ ಉಪನಿಯಮ (1)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಪ್ರತಿ ಕಂದಾಯ ಉಪವಿಭಾಗದ ಆಯಾ ಉಪವಿಭಾಗದ ಉಪವಿಭಾಗ ಅಧ್ಯಕ್ಷತೆಯಲ್ಲಿ ರಚಿಸಿರುವ ನಿರ್ವಹಣೆ ನ್ಯಾಯಮಂಡಳಿಯಲ್ಲಿ ಪ್ರಕರಣಗಳನ್ನು ದಾಖಲಿಸಿ ಗರಿಷ್ಠ 90 ದಿನಗಳ ಒಳಗಾಗಿ ನ್ಯಾಯ ಪಡೆಯಬಹುದಾಗಿರುತ್ತದೆ.

ನಿರ್ವಹಣಾ ನ್ಯಾಯಮಂಡಳಿಯು ತಿಂಗಳಿಗೆ ಗರಿಷ್ಠ ರೂ.10,000/-ಗಳ ಮಾಸಿಕ ನಿರ್ವಹಣಾ ಭತ್ಯೆಯಾಗಿ ನೀಡುವಂತೆ ಆದೇಶಿಸಬಹುದಾಗಿದೆ, ತಪ್ಪಿದಲ್ಲಿ 3 ತಿಂಗಳು ಜೈಲುವಾಸ ಅಥವಾ ರೂ.5,000/-ಗಳ ದಂಡ ಅಥವಾ ಎರಡೂ ಶಿಕ್ಷೆ ವಿಧಿಸಬಹುದಾಗಿದೆ.

ನಿರ್ವಹಣಾ ನ್ಯಾಯಮಂಡಳಿಯ ತೀರ್ಪು ತಮಗೆ ವಿರುದ್ಧವಾಗಿದ್ದಲ್ಲಿ/ಇಷ್ಟವಿಲ್ಲದಿದ್ದಲ್ಲಿ ಆ ತೀರ್ಪಿನ ವಿರುದ್ಧ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ಮೇಲ್ಮನವಿ ನ್ಯಾಯಮಂಡಳಿಯಲ್ಲಿ ಪ್ರಕರಣ ದಾಖಲಿಸಿ ಗರಿಷ್ಠ 30 ದಿನಗಳ ಒಳಗಾಗಿ ನ್ಯಾಯ ಪಡೆಯಬಹುದಾಗಿದೆ, ಮೇಲ್ಮನವಿ ನ್ಯಾಯ ಮಂಡಳಿಯ ಆದೇಶ ಅಂತಿಮವಾಗಿದೆ.

ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯ್ದೆ2007ರ ಪ್ರಕಾರ ಆಯಾ ಜಿಲ್ಲೆಯ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರನ್ನು ನಿರ್ವಹಣಾಧಿಕಾರಿಗಳೆಂದು ಪದನಾಮಗೊಳಿಸಿ ಸರ್ಕಾರವು ಆದೇಶಿಸಿದೆ.

### ರಾಜ್ಯ ಪ್ರಶಸ್ತಿ

ವಿಶ್ವ ಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಅಕ್ಟೋಬರ್ 01 ಅಂತರಾಷ್ಟ್ರೀಯ ಹಿರಿಯ ನಾಗರಿಕರ ದಿನಾಚರಣೆಯನ್ನಾಗಿ ಆಚರಿಸಲು ತೀರ್ಮಾನ ಕೈಗೊಂಡಿದ್ದು, ಅದರಂತೆ ಪ್ರತಿ ವರ್ಷ ಅಕ್ಟೋಬರ್ 01 ರಂದು ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಆಚರಿಸಲಾಗುತ್ತಿದೆ,

ಈ ಸಂದರ್ಭದಲ್ಲಿ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸಾಧನೆಗೈದ 01 ಸಂಸ್ಥೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ 06 ಹಿರಿಯ ನಾಗರಿಕರನ್ನು ಸೇರಿದಂತೆ ಒಟ್ಟು 07 ರಾಜ್ಯ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು. ಈ ಸಂದರ್ಭದಲ್ಲಿ ಪ್ರಶಸ್ತಿ ವಿಜೇತರಿಗೆ ಈ ಕೆಳಕಂಡಂತೆ ನಗದು ಪುರಸ್ಕಾರವನ್ನು ಡಿ.ಡಿ. ರೂಪದಲ್ಲಿ ನೀಡಲಾಗುವುದು.

| ಕ್ರ.ಸಂ. | ಪ್ರಶಸ್ತಿ ವಿವರ | ಪ್ರಶಸ್ತಿಗಳ ಸಂಖ್ಯೆ | ಪ್ರಶಸ್ತಿ ಮೊತ್ತ(ರೂ. ಲಕ್ಷಗಳಲ್ಲಿ) |
|---|---|---|---|
| 01 | ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸಾಧನೆಗೈದ ಸಂಸ್ಥೆ | 01 | 1,00,000/- |
| 02 | ಕಲಾ ಕ್ಷೇತ್ರ | 01 | 1,00,000/- |
| 03 | ಕಾನೂನು ಕ್ಷೇತ್ರ | 01 | 1,00,000/- |
| 04 | ಸಾಹಿತ್ಯ ಕ್ಷೇತ್ರ | 01 | 1,00,000/- |
| 05 | ಸಮಾಜ ಸೇವೆ | 01 | 1,00,000/- |
| 06 | ಕ್ರೀಡೆ ಕ್ಷೇತ್ರ | 01 | 1,00,000/- |
| 07 | ಶಿಕ್ಷಣ ಕ್ಷೇತ್ರ | 01 | 1,00,000/- |

## II. ಜಿಲ್ಲಾವಲಯ ಯೋಜನೆಗಳು

**ಎ) ವೃದ್ಧಾಶ್ರಮಗಳು:**

ರಾಜ್ಯದ 30 ಜಿಲ್ಲೆಗಳಲ್ಲಿ ನಿರ್ಗತಿಕ ಹಿರಿಯ ನಾಗರಿಕರಿಗಾಗಿ ವೃದ್ಧಾಶ್ರಮಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದ್ದು, ಈ ವೃದ್ಧಾಶ್ರಮದಲ್ಲಿ 25 ನಿರ್ಗತಿಕ ಹಿರಿಯ ನಾಗರಿಕರನ್ನು ದಾಖಲಿಸಿಕೊಳ್ಳಲು ಅವಕಾಶವಿದ್ದು, ಒಂದು ವೃದ್ಧಾಶ್ರಮದ ನಿರ್ವಹಣೆಗಾಗಿ ವಾರ್ಷಿಕ ರೂ.12.00 ಲಕ್ಷಗಳ ಅನುದಾನವನ್ನು

ಬಿಡುಗಡೆ ಮಾಡಲಾಗುತ್ತಿದ್ದು, ಇದರಲ್ಲಿ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳಿಗಾಗಿ ಒಟ್ಟು ಯೋಜನಾ ವೆಚ್ಚದ ಶೇ.90ರಷ್ಟು ಅನುದಾನವನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಲಾಗುತ್ತಿದ್ದು ಉಳಿದ ಶೇ.10ರಷ್ಟನ್ನು ಸಂಸ್ಥೆಯು ಭರಿಸಬೇಕಾಗುತ್ತದೆ. ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ

ರಾಜ್ಯದ 30 ಜಿಲ್ಲೆಗಳಲ್ಲಿ ಜಿಲ್ಲೆಗೆ ಒಂದರಂತೆ ಹಾಗೂ ಪ್ರತಿ ಕಂದಾಯ ಉಪ ವಿಭಾಗದಲ್ಲಿ 01 ವೃದ್ಧಾಶ್ರಮವನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಪ್ರಾರಂಭಿಸಲು ಅವಕಾಶವಿರುತ್ತದೆ.

ಪ್ರಸ್ತುತ 26 ಜಿಲ್ಲೆಗಳಲ್ಲಿ ಹಾಗೂ 09 ಕಂದಾಯ ಉಪ ವಿಭಾಗಗಳಲ್ಲಿ ಸೇರಿದಂತೆ ಒಟ್ಟು 35 ವೃದ್ಧಾಶ್ರಮಗಳು ನಡೆಯುತ್ತಿವೆ.

**ಅರ್ಹತೆಗಳು:**

1. ಈ ಯೋಜನೆಯನ್ನು ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ಅನುಷ್ಠಾನಗೊಳಿಸಲಾಗುತ್ತಿದೆ.
2. ವೃದ್ಧಾಶ್ರಮಕ್ಕೆ ತಗಲುವ ಅನುಮೋದಿತ ಒಟ್ಟು ವೆಚ್ಚದಲ್ಲಿ ರಾಜ್ಯ ಸರ್ಕಾರದ ಪಾಲು ಶೇ.90 ರಷ್ಟಾಗಿದ್ದು ಉಳಿದ ಶೇ.10ರಷ್ಟು ವೆಚ್ಚವನ್ನು ಸ್ವಯಂ ಸೇವಾ ಸಂಸ್ಥೆಗಳು ತನ್ನ ಸಂಪನ್ಮೂಲಗಳಿಂದಲೇ ಭರಿಸತಕ್ಕದ್ದು.
3. ಸ್ವಯಂ ಸೇವಾ ಸಂಸ್ಥೆಯು ಅಸ್ತಿತ್ವಕ್ಕೆ ಬಂದು ಕನಿಷ್ಠ ಎರಡು ವರ್ಷಗಳಾಗಿರಬೇಕು.
4. ಸ್ವಯಂ ಸೇವಾ ಸಂಸ್ಥೆಯು ಸಾಕಷ್ಟು ಸಿಬ್ಬಂದಿ ವರ್ಗದೊಂದಿಗೆ ಅಗತ್ಯವಾದ ಸೌಲಭ್ಯ ಸಂಪನ್ಮೂಲ ಹಾಗೂ ಅನುಭವ ಹೊಂದಿ ಆರ್ಥಿಕವಾಗಿ ಸದೃಢತೆ ಹೊಂದಿರಬೇಕು.
5. ಸ್ವಯಂ ಸೇವಾ ಸಂಸ್ಥೆಯು ವೃದ್ಧಾಶ್ರಮವನ್ನು ನಡೆಸುವಲ್ಲಿ ಅಥವಾ ಇಂತಹದೇ ಇನ್ನಿತರ ಕಾರ್ಯಕ್ರಮಗಳನ್ನು ನಡೆಸುವಲ್ಲಿ ಅನುಭವ ಹೊಂದಿರಬೇಕು ಅಥವಾ ವೃದ್ಧಾಶ್ರಮವನ್ನು ನಡೆಸಲು ಬೇಕಾಗಿರುವ ಮೂಲಭೂತ ಸೌಲಭ್ಯಗಳನ್ನು ಹೊಂದಿರಬೇಕು ಅದರ ಬಗ್ಗೆ ದಾಖಲೆಗಳನ್ನು ಹಾಜರುಪಡಿಸಬೇಕು.
6. ಸಂಸ್ಥೆಯು ಅಧಿಕೃತವಾಗಿ ರಚಿತವಾಗಿರುವ ಆಡಳಿತ ಮಂಡಳಿಯನ್ನು ಹೊಂದಿದ್ದು ಆಡಳಿತ ವರ್ಗದ ಅಧಿಕಾರ, ಕರ್ತವ್ಯಗಳು ಮತ್ತು ಜವಾಬ್ದಾರಿಗಳನ್ನು ಸ್ಪಷ್ಟ ಹಾಗೂ ಖಚಿತವಾಗಿ ಸಂಸ್ಥೆಯ ಬರವಣಿಗೆಯಲ್ಲಿರುವ ಸಂವಿಧಾನದಲ್ಲಿ ನಿರೂಪಿತವಾಗಿರಬೇಕು.
7. ಸಂಸ್ಥೆಯು ಯಾವುದೇ ಜಾತಿ, ಪಂಥ ಮತ್ತು ಭಾಷೆಗಳನ್ನು ಪರಿಗಣಿಸದೇ ಎಲ್ಲರಿಗೂ ಸೌಲಭ್ಯ ಒದಗಿಸಬೇಕು.
8. ಯಾವುದೇ ಸಂಸ್ಥೆಯು ವೃದ್ಧಾಶ್ರಕ್ಕೆ ಅನುದಾನ ಪಡೆಯಲು ಕನಿಷ್ಠ 25 ಜನ ಫಲಾನುಭವಿಗಳು ಇರಬೇಕು.
9. ವೃದ್ಧಾಶ್ರಮವನ್ನು ಪ್ರಾರಂಭ ಮಾಡಬೇಕಾದಲ್ಲಿ ಮತ್ತು ಅನುದಾನವನ್ನು ಪಡೆಯಬೇಕಾದಲ್ಲಿ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಸೇವಾಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್‌ನಲ್ಲಿ ನೋಂದಣಿ ಮಾಡಿಸಬೇಕು.

## III. ಕೇಂದ್ರ ವಲಯದ ಯೋಜನೆಗಳು
## (ಅಟಲ್ ವಯೋ ಅಭ್ಯುದಯ ಯೋಜನೆ)

**(ಇಂಟಿಗ್ರೇಟೆಡ್ ಪ್ರೋಗ್ರಾಂ ಫಾರ್ ಸೀನಿಯರ್ ಸಿಟಿಜನ್ಸ್ (IPSrC) ಯೋಜನೆಯಡಿ ವೃದ್ಧಾಶ್ರಮಗಳು, ಮೊಬೈಲ್ ಮೆಡಿಕೇರ್ ಸೆಂಟರ್, ಹಗಲು ಯೋಗಕ್ಷೇಮ ಕೇಂದ್ರಗಳು ಮತ್ತು ಡಿಮೆನ್ಶಿಯ ಹಗಲು ಯೋಗಕ್ಷೇಮ ಕೇಂದ್ರಗಳು ಇತ್ಯಾದಿ)**

ಸದರಿ ಯೋಜನೆಯನ್ನು ರಾಜ್ಯದಲ್ಲಿ 1990ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಒಟ್ಟು 41 ವೃದ್ಧಾಶ್ರಮಗಳು, 01 ಮೊಬೈಲ್ ಮೆಡಿಕೇರ್ ಯೂನಿಟ್, 01 ಡಿಮೆನ್ಷಿಯಾ ಸೆಂಟರ್ ಮತ್ತು 01 ಪ್ರಾದೇಶಿಕ ಸಂಪನ್ಮೂಲ ಮತ್ತು ತರಬೇತಿ ಕೇಂದ್ರ (RRTC) ಗಳನ್ನು ನಡೆಸಲಾಗುತ್ತಿದೆ.

**ಉದ್ದೇಶ:**

ಅರವತ್ತು ಮತ್ತು ಅದಕ್ಕೂ ಹೆಚ್ಚಿನ ವಯಸ್ಸಿನ ನಿರ್ಗತಿಕ ವೃದ್ಧರಿಗೆ ಉಚಿತ ಊಟ, ವಸತಿ ಮತ್ತು ವೈದ್ಯಕೀಯ ಸೌಲ್ಯಗಳನ್ನು ಕಲ್ಪಿಸಿ ವೃದ್ಧರು ಸಮಾಜದಲ್ಲಿ ನಿಶ್ಚಿಂತೆಯಿಂದ ಬಾಳಲು ವೃದ್ಧಾಶ್ರಮಗಳನ್ನು ಮೊಬೈಲ್ ಮೆಡಿಕೇರ್ ಸೆಂಟರ್, ಡಿಮೆನ್ಷಿಯ ಮತ್ತು ಹಗಲು ಯೋಗಕ್ಷೇಮ ಕೇಂದ್ರಗಳನ್ನು ನಡೆಸುತ್ತಿರುವ ಮತ್ತು ನಡೆಸಲು ಉದ್ದೇಶಿಸಿರುವ ಮತ್ತು ಇತರೆ ಹಿರಿಯ ನಾಗರಿಕರಿಗೆ ಸಂಬಂಧಪಟ್ಟಂತೆ ಒಟ್ಟು 14 ಯೋಜನೆಗಳಿಗೆ ಸ್ವಯಂ ಸೇವಾ ಸಂಸ್ಥೆಗಳಿಗೆ ಕೇಂದ್ರ ಸರ್ಕಾರವು ಧನ ಸಹಾಯ ನೀಡುವ ಯೋಜನೆ.

**ಅರ್ಹತೆಗಳು:**

1. ಈ ಯೋಜನೆಯನ್ನು ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ಜಾರಿಗೆ ತರಲಾಗುವುದು, ಈ ಯೋಜನೆಗೆ ಕೇಂದ್ರ ಸರ್ಕಾರವು ಅನುದಾನವನ್ನು ನೀಡುತ್ತಿದೆ.
2. ವೃದ್ಧಾಶ್ರಮ, ಮೊಬೈಲ್ ಮೆಡಿಕೇರ್ ಸೆಂಟರ್, ಡಿಮೆನ್ಷಿಯ ಮತ್ತು ಹಗಲು ಯೋಗಕ್ಷೇಮ ಕೇಂದ್ರದ ಮುಖಾಂತರ ಯೋಜನೆಗಳನ್ನು ನಡೆಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳಿಗೆ ತಗಲುವ ಅನುಮೋದಿತ ಒಟ್ಟು ವೆಚ್ಚದಲ್ಲಿ ಕೇಂದ್ರ ಸರ್ಕಾರದ ಪಾಲು ಶೇ.90 ರಷ್ಟಾಗಿದ್ದು ಉಳಿದ ಶೇ.10ರಷ್ಟು ವೆಚ್ಚವನ್ನು ಸ್ವಯಂ ಸೇವಾ ಸಂಸ್ಥೆಗಳು ತನ್ನ ಸಂಪನ್ಮೂಲಗಳಿಂದಲೇ ಭರಿಸತಕ್ಕದ್ದು.
3. ಸ್ವಯಂ ಸೇವಾ ಸಂಸ್ಥೆಯು ಅಸ್ತಿತ್ವಕ್ಕೆ ಬಂದು ಕನಿಷ್ಠ ಎರಡು ವರ್ಷಗಳಾಗಿರಬೇಕು.
4. ಸ್ವಯಂ ಸೇವಾ ಸಂಸ್ಥೆಯು ಸಾಕಷ್ಟು ಸಿಬ್ಬಂದಿ ವರ್ಗದೊಂದಿಗೆ ಅಗತ್ಯವಾದ ಸೌಲಭ್ಯ ಸಂಪನ್ಮೂಲ ಹಾಗೂ ಅನುಭವ ಮತ್ತು ಆರ್ಥಿಕವಾಗಿ ಸದೃಢತೆ ಹೊಂದಿರಬೇಕು.
5. ಸ್ವಯಂ ಸೇವಾ ಸಂಸ್ಥೆಯು ವೃದ್ಧಾಶ್ರಮ, ಮೊಬೈಲ್ ಮೆಡಿಕೇರ್ ಸೆಂಟರ್, ಡಿಮೆನ್ಷಿಯ ಮತ್ತು ಹಗಲು ಯೋಗಕ್ಷೇಮ ಕೇಂದ್ರಗಳನ್ನು ನಡೆಸುವಲ್ಲಿ ಅಥವಾ ಇಂತಹದೇ ಇನ್ನಿತರ ಕಾರ್ಯಕ್ರಮಗಳನ್ನು ನಡೆಸುವಲ್ಲಿ ಅನುಭವ ಹೊಂದಿರಬೇಕು ಅಥವಾ ವೃದ್ಧಾಶ್ರಮವನ್ನು ನಡೆಸಲು ಬೇಕಾಗಿರುವ ಮೂಲಭೂತ ಸೌಲಭ್ಯಗಳನ್ನು ಹೊಂದಿರಬೇಕು ಅದರ ಬಗ್ಗೆ ದಾಖಲೆಗಳನ್ನು ಹಾಜರುಪಡಿಸಬೇಕು.
6. ಸಂಸ್ಥೆಯು ಅಧಿಕೃತವಾಗಿ ರಚಿತವಾಗಿರುವ ಆಡಳಿತ ಮಂಡಳಿಯನ್ನು ಹೊಂದಿದ್ದು ಆಡಳಿತ ವರ್ಗದ ಅಧಿಕಾರ, ಕರ್ತವ್ಯಗಳು ಮತ್ತು ಜವಾಬ್ದಾರಿಗಳನ್ನು ಸ್ಪಷ್ಟ ಹಾಗೂ ಖಚಿತವಾಗಿ ಸಂಸ್ಥೆಯ ಬರವಣಿಗೆಯಲ್ಲಿರುವ ಸಂವಿಧಾನದಲ್ಲಿ ನಿರೂಪಿತವಾಗಿರಬೇಕು.
7. ಸಂಸ್ಥೆಯು ಯಾವುದೇ ಜಾತಿ, ಪಂಥ ಮತ್ತು ಭಾಷೆಗಳನ್ನು ಪರಿಗಣಿಸದೇ ಎಲ್ಲರಿಗೂ ಸೌಲಭ್ಯ ಒದಗಿಸಬೇಕು.
8. ಯಾವುದೇ ಸಂಸ್ಥೆಯು ವೃದ್ಧಾಶ್ರಮ, ಮೊಬೈಲ್ ಮೆಡಿಕೇರ್ ಸೆಂಟರ್, ಡಿಮೆನ್ಷಿಯ ಮತ್ತು ಹಗಲು ಯೋಗಕ್ಷೇಮ ಕೇಂದ್ರಗಳನ್ನು ಪ್ರಾರಂಭ ಮಾಡಬೇಕಾದಲ್ಲಿ ವೃದ್ಧಾಶ್ರಮದಲ್ಲಿ ಕನಿಷ್ಠ 25 ಜನ ಫಲಾನುಭವಿಗಳು ಇರಬೇಕು.

ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಇಚ್ಛಿಸುವ ಸ್ವಯಂ ಸೇವಾ ಸಂಸ್ಥೆಗಳು ಪ್ರಸ್ತಾವನೆಯನ್ನು ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಆನ್‌ಲೈನ್ ಮೂಲಕ ಸಲ್ಲಿಸಬೇಕಾಗುತ್ತದೆ. ದಿನಾಂಕ:01-04-2015ರಿಂದ ಐ.ಪಿ.ಒ.ಪಿ. ಯೋಜನೆಯಡಿ ನಡೆಸಲಾಗುತ್ತಿರುವ ಯೋಜನೆಗಳಿಗೆ ನೀಡಲಾಗುತ್ತಿದ್ದ ಅನುದಾನವನ್ನು ನಗರ/ಗ್ರಾಮೀಣ ಪ್ರದೇಶಗಳ ಆಧಾರದ ಮೇಲೆ ಬಿಡುಗಡೆ ಮಾಡಲಾಗುತ್ತಿದೆ. ವೆಬ್‌ಸೈಟ್ ವಿಳಾಸ www.ministry of social justice and empowerment.nic.in ಅನ್ನು

ಸಂಪರ್ಕಿಸಬಹುದು. ಈ ಯೋಜನೆಯಡಿ ಸ್ವಯಂಸೇವಾಸಂಸ್ಥೆಗಳು ಅನುದಾನ ಕೋರಿ e-anudan ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ.

**ಇಲಾಖೆಯಿಂದ ವಿವಿಧ ಯೋಜನೆಗಳಡಿ ನೀಡಿರುವ ಅನುದಾನದ ವಿವರಗಳು (ರೂ.ಲಕ್ಷಗಳಲ್ಲಿ)**

| ಕ್ರ. ಸಂ. | ಯೋಜನೆಯ ವಿವರ | 2022-23ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನ | 2023-24ನೇ ಸಾಲಿನಲ್ಲಿ ನಿಗದಿಯಾಗಿರುವ ಅನುದಾನ |
|---|---|---|---|
| 1 | ವಿದ್ಯಾರ್ಥಿವೇತನ ಮತ್ತು ಪ್ರೋತ್ಸಾಹ ಧನ | 242.02 | 625.00 |
